ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೨೨

**ಪಟ್ಟಿ – ೧೩**

# ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : ೧೯ನೇ ಮಾರ್ಚ್, ೨೦೨೦

---

## ಸಮೂಹ – IV

೧. ಮುಖ್ಯಮಂತ್ರಿಗಳು.

೨. ಗೃಹ ಸಚಿವರು.

೩. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು.

೪. ಜಲಸಂಪನ್ಮೂಲ ಸಚಿವರು.

೫. ಅಬಕಾರಿ ಸಚಿವರು.

---

## ಕೊಡಗು ಜಿಲ್ಲೆಯಲ್ಲಿ ಹರಿದು ಹಾರಂಗಿ ಜಲಾಶಯ ಸೇರುವ ನದಿಗಳ ಹೂಳು ತೆಗೆಯುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೦೭ (೧೪೨೭) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯ ವ್ಯಾಪ್ತಿಯಲ್ಲಿ ಹರಿದು, ಹಾರಂಗಿ ಜಲಾಶಯ ಸೇರುವ ನದಿಗಳಲ್ಲಿ ಸಾಕಷ್ಟು ಹೂಳು ತುಂಬಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದಲ್ಲಿ, ಇದುವರೆಗೂ ಈ ನದಿಗಳಲ್ಲಿ ತುಂಬಿರುವ ಹೂಳನ್ನು ತೆಗೆಯದೆ ಇರಲು ಕಾರಣಗಳೇನು ;

(ಇ) ಯಾವ ಕಾಲಮಿತಿಯೊಳಗೆ ಸದರಿ ನದಿಗಳಲ್ಲಿನ ಹೂಳನ್ನು ತೆಗೆಯುವ ಕಾಮಗಾರಿ ಪ್ರಾರಂಭಿಸಲಾಗುವುದು ?

## ರಾಜ್ಯದಲ್ಲಿನ ಸರ್ಕಾರಿ ನೌಕರರಿಗೆ ನೀಡುತ್ತಿರುವ ವೈದ್ಯಕೀಯ ಸೌಲಭ್ಯಗಳ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೦೮ (೧೪೨೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿನ ಸರ್ಕಾರಿ ನೌಕರರಿಗೆ ಸಿಗುತ್ತಿರುವ ವೈದ್ಯಕೀಯ ಸೌಲಭ್ಯಗಳೇನು ; ಹಾಗೂ ಪ್ರಸ್ತುತ ಚಾಲ್ತಿಯಲ್ಲಿರುವ ಯೋಜನೆಗಳಾವುವು ; (ಸಂಪೂರ್ಣ ವಿವರ ನೀಡುವುದು)

(ಆ) ಸರ್ಕಾರಿ ನೌಕರರಿಗೆ ಹಾಗೂ ಅವರ ಅವಲಂಬಿತರಿಗೆ ಸಂಪೂರ್ಣವಾಗಿ ಕ್ಯಾಷ್‌ಲೆಸ್ ವೈದ್ಯಕೀಯ ಸೇವಾ ಸೌಲಭ್ಯ ಕಲ್ಪಿಸಲು ಇರುವ ತೊಂದರೆ ಅಡೆ ತಡೆಗಳು ಏನು ;



(ಇ) ಸರ್ಕಾರಿ ನೌಕರರು ಮರುಪಾವತಿಗಾಗಿ ಅಲೆದಾಟ ತಪ್ಪಿಸುವ ಸಲುವಾಗಿ ಮುಂದಿನ ಆರ್ಥಿಕ ವರ್ಷದಿಂದ ಎಲ್ಲಾ ಸರ್ಕಾರಿ ನೌಕರರು ಹಾಗೂ ಅವರ ಅವಲಂಬಿತರಿಗೆ ಸಂಪೂರ್ಣವಾಗಿ ಕ್ಯಾಷ್‌ಲೆಸ್ ವೈದ್ಯಕೀಯ ಸೇವಾ ಸೌಲಭ್ಯ ಕಲ್ಪಿಸಲು ಸರ್ಕಾರ ಕ್ರಮ ವಹಿಸುವುದೇ ?

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಮತ್ತು ಮ್ಯೂಚ್ಯೂಯಲ್ ಫಂಡ್

**ಶ್ರೀ ಎಂ.ಸಿ. ವೇಣುಗೋಪಾಲ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೦೯ (೧೪೩೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಪ್ರಾರಂಭದಿಂದ ಇಲ್ಲಿಯವರೆಗೂ, ಮ್ಯೂಚ್ಯೂಯಲ್ ಫಂಡ್‌ಗಳಲ್ಲಿ ಹಣ ಹೂಡಿಕೆ ಮಾಡಿದ್ದರೆ, ವಿವರವನ್ನು ನೀಡುವುದು ;

(ಆ) ಪ್ರಸ್ತುತ ಜಾರಿಯಲ್ಲಿರುವ ನಿಯಮಾವಳಿಗಳ ಪ್ರಕಾರ ಮ್ಯೂಚ್ಯೂಯಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡಲು ನಿಷೇಧವಿದ್ದರೂ, ಪ್ರಾಧಿಕಾರದ ಅಧಿಕಾರಿಗಳು ಕಾನೂನು ಬಾಹಿರವಾಗಿ ಹೂಡಿಕೆ ಮಾಡಿದ್ದರಿಂದ, ಸರ್ಕಾರಕ್ಕಾದ ಒಟ್ಟು ನಷ್ಟವೆಷ್ಟು ;

(ಇ) ಮ್ಯೂಚ್ಯೂಯಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡಿದ್ದ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಆಯುಕ್ತರುಗಳ ವಿವರವನ್ನು ಒದಗಿಸುವುದು ;

(ಈ) ಮ್ಯೂಚ್ಯೂಯಲ್ ಫಂಡ್‌ಗಳಲ್ಲಿ ಹೂಡಿಕೆ ಮಾಡಿದ್ದರಿಂದ ಸರ್ಕಾರಕ್ಕಾದ ನಷ್ಟವನ್ನು ಭರಿಸಲು ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳ ಬಗ್ಗೆ ಸಂಪೂರ್ಣ ಮಾಹಿತಿ ಒದಗಿಸುವುದು?

## ವಕ್ಫ್ ಬೋರ್ಡ್ ಆಸ್ತಿ ಕುರಿತು

**ಶ್ರೀ ಎಂ.ಸಿ. ವೇಣುಗೋಪಾಲ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೦ (೧೪೫೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:–

ಬೆಂಗಳೂರು ಜಯನಗರ ೪ನೇ ಬಡಾವಣೆಯಲ್ಲಿರುವ ಸರ್ವೆ ನಂ. ೭೪/೧, ೭೫/೨ ಮತ್ತು ೭೫/೩ ಈದ್ಗಾ ಮೈದಾನದ ವಕ್ಫ್ ಬೋರ್ಡ್ ಆಸ್ತಿಯನ್ನು ಇಲಾಖೆ ವಾಪಸ್ಸು ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವಾಪಸ್ಸು ಪಡೆಯಲು ಕಾರಣವೇನು ; ನ್ಯಾಯಾಲಯ ಇಲಾಖೆಗೆ ಇತ್ಯರ್ಥಗೊಳಿಸಲು ಸೂಚಿಸಿದ್ದರೂ ಇದುವರೆಗೂ ಇಲಾಖೆಯು ಕ್ರಮಕೈಗೊಳ್ಳಲು ವಿಳಂಬ ಮಾಡಿರುವುದು ಏಕೆ ?

## ಕಲಬುರಗಿಯಲ್ಲಿ ಪೊಲೀಸ್ ಆಯುಕ್ತಾಲಯ ಕಾರ್ಯಾರಂಭ ಕುರಿತು

**ಶ್ರೀ ತಿಪ್ಪಣ್ಣ ಕಮಕನೂರ (ನಾಮನಿರ್ದೇಶನ ಹೊಂದಿದವರು) :–**

೧೨೧೧ (೧೪೮೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿಯಲ್ಲಿ ಪೊಲೀಸ್ ಆಯುಕ್ತಾಲಯ ಕಾರ್ಯಾರಂಭಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;



(ಆ) ಈ ಹೊಸ ಆಯುಕ್ತಾಲಯಕ್ಕೆ ಮಂಜೂರಾಗಿರುವ ಒಟ್ಟು ಹುದ್ದೆಗಳೆಷ್ಟು ; (ಹುದ್ದೆವಾರು ಮಾಹಿತಿ ನೀಡುವುದು)

(ಇ) ಖಾಲಿ ಉಳಿದಿರುವ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕೆರೆಗೆ ನೀರು ತುಂಬಿಸುವ ಯೋಜನೆ ಕುರಿತು

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೨ (೧೪೯೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೆರೆಗೆ ನೀರು ತುಂಬಿಸುವ ಯೋಜನೆ ಪ್ರಾರಂಭವಾದದ್ದು ಯಾವಾಗ; ಬಾಗಲಕೋಟೆ ಜಿಲ್ಲೆಯಲ್ಲಿರುವ ಒಟ್ಟು ಕೆರೆಗಳ ಸಂಖ್ಯೆ ಎಷ್ಟು ;

(ಆ) ಈ ಯೋಜನೆಯಡಿ ನೀರು ತುಂಬಿಸಿರುವ ಕೆರೆಗಳ ಸಂಖ್ಯೆ ಎಷ್ಟು; (ಪ್ರತ್ಯೇಕ ಮಾಹಿತಿ ಒದಗಿಸುವುದು) ನೀರು ತುಂಬಿಸಬೇಕಾದ ಕೆರೆಗಳ ಸಂಖ್ಯೆ ಎಷ್ಟು ;

(ಇ) ಕೆರೆಗೆ ನೀರು ತುಂಬಿಸುವ ಯೋಜನೆ ಅಡಿಯಲ್ಲಿ ಮಂಟೂರು ಕೆರೆಗೆ ನೀರು ತುಂಬಿಸಲು ಒದಗಿಸಿರುವ ಅನುದಾನವೆಷ್ಟು ; ಈ ಪೈಕಿ ಖರ್ಚಾಗಿರುವ ಹಣವೆಷ್ಟು ? (ವಿವರ ನೀಡುವುದು)

## ಕೇಂದ್ರ ಮಹಾತ್ವಾಕಾಂಕ್ಷೆಯ ಜಿಲ್ಲೆಗಳ ಅಭಿವೃದ್ಧಿ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೨೧೩ (೧೫೧೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೇಂದ್ರ ಸರ್ಕಾರದ ಮಹಾತ್ವಾಕಾಂಕ್ಷೆಯ ಜಿಲ್ಲೆಗಳ (Apirational District) ಯೋಜನೆಯಡಿ ರಾಜ್ಯದಲ್ಲಿ ಶೈಕ್ಷಣಿಕ, ಆರೋಗ್ಯ ರಕ್ಷಣೆ (Health Care) ಮತ್ತು ಮೂಲಭೂತ ಸೌಕರ್ಯ (Infrastructure) ಕಲ್ಪಿಸುವ ಅಭಿವೃದ್ಧಿ ಕಾಮಗಾರಿಗಳಿಗೆ ಗುರುತಿಸಿರುವ ರಾಜ್ಯದ ಹಿಂದುಳಿದ ಜಿಲ್ಲೆಗಳು ಯಾವುವು ;

(ಆ) ರಾಜ್ಯದಲ್ಲಿ ಈ ಯೋಜನೆಯಡಿ ಆಯ್ಕೆಯಾಗಿರುವ ಜಿಲ್ಲೆಗಳು ಯಾವುವು ; (ಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಯಡಿ ಆಯ್ದ ಜಿಲ್ಲೆಯಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳಿಗೆ ಒದಗಿಸಿರುವ ಅನುದಾನವೆಷ್ಟು ; ಈ ಕಾಮಗಾರಿಗಳ ಪ್ರಗತಿ ಒಳಗೊಂಡಂತೆ ಸಂಪೂರ್ಣ ಮಾಹಿತಿ ನೀಡುವುದು ?

## ಬೆಂಗಳೂರು ಮೆಟ್ರೋ ರೈಲು ಪ್ರಯಾಣ ದರದ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೨೧೪ (೧೫೧೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಮೆಟ್ರೊ ರೈಲು ಸಂಚಾರವನ್ನು ಯಾವಾಗ ಜಾರಿಗೆ ತರಲಾಯಿತು ;

(ಆ) ಪ್ರಾರಂಭದಲ್ಲಿ ಮೆಟ್ರೋ ರೈಲು ಪ್ರಯಾಣಕ್ಕೆ ನಿಗಧಿಪಡಿಸಲಾಗಿದ್ದ ಮೊತ್ತವೆಷ್ಟು ;

(ಇ) ಈವರೆಗೆ ಮೆಟ್ರೋ ರೈಲು ಪ್ರಯಾಣದ ದರವನ್ನು ಎಷ್ಟು ಬಾರಿ ಪರಿಷ್ಕರಿಸಲಾಗಿದೆ ; ಪ್ರಸ್ತುತ ನಿಗಧಿಪಡಿಸಿರುವ ದರವೆಷ್ಟು ; (ಕಾಲಕಾಲಕ್ಕೆ ಏರಿಸಲಾದ ದರದ ವಿವರ ನೀಡುವುದು)



(ಈ) ಮೆಟ್ರೋ ರೈಲು ಪಾಸುದಾರರಿಗೆ ಪ್ರಾರಂಭದಲ್ಲಿ ನೀಡಲಾಗುತ್ತಿದ್ದ ರಿಯಾಯಿತಿ ಶೇಕಡವಾರು ದರವೆಷ್ಟು ; ಪ್ರಸ್ತುತ ವಿಧಿಸಲಾಗುತ್ತಿರುವ ದರವೆಷ್ಟು ;

(ಉ) ನವದೆಹಲಿ, ಕೊಲ್ಕತ್ತ, ಜೈಪುರಗಳಿಗೆ ಹೋಲಿಸಿದಲ್ಲಿ ಬೆಂಗಳೂರು ಮೆಟ್ರೊ ವಿಧಿಸುತ್ತಿರುವ ದರವು ಅಧಿಕವಲ್ಲವೆ ;

(ಊ) ಮೆಟ್ರೋ ರೈಲು ಪ್ರಾರಂಭವಾದ ನಂತರ ಗಳಿಸಿರುವ ಆದಾಯವೆಷ್ಟು; ನಿಗಮವು ಆದಾಯದಲ್ಲಿ ನಡೆಯುತ್ತಿದೆಯೇ ; (ವರ್ಷವಾರು ವಿವರ ನೀಡುವುದು)

(ಋ) ನಿಗಮವು ಆದಾಯದಲ್ಲಿದ್ದರೆ, ಪ್ರಯಾಣಿಕರ ಹಿತದೃಷ್ಟಿಯಿಂದ ಮೆಟ್ರೊ ರೈಲು ದರವನ್ನು ಇಳಿಸಲಾಗುವುದೇ ;

(ಎ) ಕೆ.ಎಸ್.ಆರ್.ಟಿ.ಸಿ, ಬಿ.ಎಂ.ಟಿ.ಸಿ ಮತ್ತು ರೈಲ್ವೇ ಇಲಾಖೆಯ ಹಿರಿಯ ನಾಗರಿಕರಿಗೆ ರಿಯಾಯಿತಿ ದರ ನೀಡುತ್ತಿದ್ದು ಅದೇ ರೀತಿ ರಿಯಾಯಿತಿ ನೀಡಲು ಮೆಟ್ರೊ ರೈಲು ನಿಗಮಕ್ಕೆ ಇರುವ ತೊಂದರೆಯಾದರೂ ಏನು ?

## ಬೆಂಗಳೂರು ನಗರದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಪೆರಿಫರಲ್ ರಿಂಗ್ ರಸ್ತೆ ಮತ್ತು ಎಲಿವೇಟೆಡ್ ಕಾರಿಡಾರ್ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೨೧೫ (೧೫೧೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ದಿನೇ ದಿನೇ ವಾಹನಗಳು ಅಧಿಕವಾಗುತ್ತಿದ್ದು ಟ್ರಾಫಿಕ್ ಜಾಮ್ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಬೆಂಗಳೂರು ನಗರದಲ್ಲಿ ವಾಹನ ದಟ್ಟಣೆಯನ್ನು ನಿವಾರಿಸಲು ಈ ಹಿಂದಿನ ಮೈತ್ರಿ ಸರ್ಕಾರ ಬಿ.ಡಿ.ಎ ಯಿಂದ ಕೈಗೊಂಡ ಪೆರಿಫರಲ್ ರಿಂಗ್ ರಸ್ತೆ ನಿರ್ಮಾಣ ಮತ್ತು ಕೆ.ಆರ್.ಡಿ.ಸಿ.ಎಲ್ ವತಿಯಿಂದ ಕೈಗೊಂಡ ಎಲಿವೇಟೆಡ್ ಕಾರಿಡಾರ್ ಕಾಮಗಾರಿಗಳು ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಇ) ಎಲಿವೇಟೆಡ್ ಕಾರಿಡಾರ್ ಮತ್ತು ಪೆರಿಫರಲ್ ರಿಂಗ್ ರಸ್ತೆಯ ಈ ಯೋಜನೆಗಳ ಅಂದಾಜು ವೆಚ್ಚವೆಷ್ಟು ; ಎಷ್ಟು ಉದ್ದ ಮಾಡಲು ಉದ್ದೇಶಿಸಲಾಗಿತ್ತು ಮತ್ತು ಯೋಜನೆಗಳ ಅನುಷ್ಠಾನ ಯಾವ ಹಂತದಲ್ಲಿದೆ ? (ವಿವರ ನೀಡುವುದು)

## ಎತ್ತಿನ ಹೊಳೆ ಜಲಾಶಯದಿಂದ ಬಯಲು ಸೀಮೆಗೆ ಕುಡಿಯುವ ನೀರು ಒದಗಿಸುವ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೨೧೬ (೧೫೧೬) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಬಯಲು ಸೀಮೆಗಳಿಗೆ ಶಾಶ್ವತ ಕುಡಿಯುವ ನೀರನ್ನು ಒದಗಿಸುವ ಸಲುವಾಗಿ ಎತ್ತಿನ ಹೊಳೆಯ ಯೋಜನೆಯನ್ನು ಯಾವಾಗ ಪ್ರಾರಂಭ ಮಾಡಲಾಗಿದೆ ;

(ಆ) ಈ ಯೋಜನೆಯ ಕಾಮಗಾರಿಯನ್ನು ಪ್ರಾರಂಭಿಸುವಾಗ ನಿಗಧಿ ಮಾಡಿದ್ದ ಯೋಜನಾ ವೆಚ್ಚವೆಷ್ಟು ; ತದನಂತರ ಏರಿಕೆ ಮಾಡಿರುವ ಕಾಮಗಾರಿಯ ವೆಚ್ಚವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)



(ಇ) ಇಲ್ಲಿಯ ತನಕ ಕಾಮಗಾರಿಗಳು ಯಾವ ಯಾವ ಹಂತದಲ್ಲಿ ನಡೆಯುತ್ತಿವೆ ; ಹಾಗು ಎಷ್ಟು ಹಣವನ್ನು ಈ ಕಾಮಗಾರಿಗಳಗೆ ಖರ್ಚು ಮಾಡಲಾಗಿದೆ ; (ಅಂಕಿ ಅಂಶಗಳೊಂದಿಗೆ ವಿವರ ನೀಡುವುದು)

(ಈ) ತುಮಕೂರು ಜಿಲ್ಲೆಯ ಕೊರಟಗೆರೆ ತಾಲ್ಲೂಕಿನ ಬೈರಗೊಂಡ್ಲು ಬಳಿ ರೂ. ೭೦೦ ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡುತ್ತಿರುವ ಜಲಾಶಯದ ಯೋಜನೆಯು ಯಾವ ಹಂತದಲ್ಲಿದೆ ; (ಸಂಪೂರ್ಣ ವಿವರ ನೀಡುವುದು)

(ಉ) ಎತ್ತಿನ ಹೊಳೆ ಯೋಜನೆಯ ಕಾಮಗಾರಿಯನ್ನು ಸಂಪೂರ್ಣವಾಗಿ ಯಾವಾಗ ಪೂರ್ಣಗೊಳಿಸಲಾಗುವುದು ?

## ರಾಜ್ಯದಲ್ಲಿರುವ ಉದ್ಯಮಗಳಿಗೆ ಉತ್ತೇಜನ ನೀಡುವ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೨೧೭ (೧೪೪೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದೇಶ ಮತ್ತು ರಾಜ್ಯದಲ್ಲಿರುವ ಮಧ್ಯಮ ಪ್ರಮಾಣದ ಉದ್ಯಮಗಳು, ಸೂಕ್ಷ್ಮ, ಮಧ್ಯಮ ಮತ್ತು ಸಣ್ಣ ಉದ್ಯಮಗಳ (MSME) ಬೆನ್ನೆಲುಬಾಗಿ ರೂಪುಗೊಳ್ಳುತ್ತಿರುವುದು ನಿಜವೇ ;

(ಆ) ಇತ್ತೀಚಿನ ವರ್ಷಗಳಲ್ಲಿ ನಮ್ಮ ದೇಶದ ನೆರೆ ರಾಷ್ಟ್ರಗಳಾದ ಚೀನಾ, ವಿಯೆಟ್ನಾಂ ಮತ್ತು ಬಾಂಗ್ಲಾದೇಶದಂತಹ ದೇಶಗಳು ಬಹುತೇಕವಾಗಿ ಸುಲಭ ದರದಲ್ಲಿ ಮತ್ತು ತಕ್ಷಣದಲ್ಲಿ ದೊರೆಯುವ ದುಡಿಮೆದಾರರ ಶಕ್ತಿಯನ್ನು ಬಳಸಿ ಮಧ್ಯಮ ಮಾರುಕಟ್ಟೆಯಲ್ಲಿ ರಫ್ತು ಮಾಡುವ ಉದ್ದೇಶದಿಂದ ಮಧ್ಯಮ ಪ್ರಮಾಣದ ಉದ್ಯಮಗಳಿಗೆ ಉತ್ತೇಜನ ನೀಡಿ ವಿಶ್ವ ಮಾರುಕಟ್ಟೆಯಲ್ಲಿ ರಫ್ತು ಪಾಲನ್ನು ಹೆಚ್ಚಿಸಲು ಕ್ರಮ ಕೈಗೊಂಡಿರುವುದು ನಿಜವೇ ;

(ಇ) ರಾಜ್ಯದಲ್ಲಿ ತನ್ನ ರಫ್ತು ಪಾಲನ್ನು ಹೆಚ್ಚಿಸಲು ಮಧ್ಯಮ ಪ್ರಮಾಣದ ಉದ್ಯಮಗಳನ್ನು ಉತ್ತೇಜನ ನೀಡಲು ಸರ್ಕಾರ ಯೋಚಿಸುತ್ತಿದೆಯೇ; ಹಾಗಿದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು ;

(ಈ) ರಾಜ್ಯದಲ್ಲಿ (MSME) ಗಳಿಗೆ ರಾಜ್ಯ ಸರ್ಕರ ನೀಡಿರುವ ಪ್ರಸ್ತಾವಿತ ತೆರಿಗೆ ವಿನಾಯಿತಿಗಳ ಬಗ್ಗೆ ವಿವರ ನೀಡುವುದು ;

(ಉ) ಸೂಕ್ಷ್ಮ ಸಣ್ಣ ಮತ್ತು ಮಧ್ಯಮ ಕಂಪನಿಗಳು ತ್ರೈಮಾಸಿಕವಾಗಿ ಜಿ.ಎಸ್.ಟಿ ಗಳನ್ನು ಪಾವತಿಸಲು ರಾಜ್ಯ ಸರ್ಕಾರ ಮುಂದಾಗುವುದೇ ?

## ರಾಜ್ಯದಲ್ಲಿರುವ ಗೃಹ ರಕ್ಷಕ ಸಿಬ್ಬಂದಿಗಳಿಗೆ ಅಗತ್ಯ ಸೌಲಭ್ಯಗಳನ್ನು ನೀಡುವ ಬಗ್ಗೆ

**ಶ್ರೀ ಎಂ.ಪಿ.ಸುನೀಲ್ ಸುಬ್ರಮಣಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೧೮ (೧೪೮೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಗೃಹ ರಕ್ಷಕ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಇವರುಗಳಿಗೆ ನೀಡಲಾಗುವ ವೇತನ, ಇತರೆ ಸೌಲಭ್ಯಗಳ ವಿವರಗಳನ್ನು ನೀಡುವುದು ; ಇವರುಗಳ ವೇತನವನ್ನು ಹೆಚ್ಚಿಸಲು ಸರ್ಕರದ ಕ್ರಮಗಳೇನು ;

(ಇ) ಇವರುಗಳಿಗೂ ಸಹ ಪೊಲೀಸರಿಗೆ ನೀಡುವಂತಹ ಕಿಟ್‌ಗಳನ್ನು ಸವಲತ್ತುಗಳನ್ನು ನೀಡಲು ಸರ್ಕಾರದ ನಿಲುವೇನು ;

(ಈ) ಈ ಗೃಹ ರಕ್ಷಕ ಸಿಬ್ಬಂದಿಗಳ ಜೀವನ ಮಟ್ಟವನ್ನು ಸುಧಾರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)



## ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನದ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) ಹಾಗೂ**

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೧೯ (೧೪೨೯+೧೪೩೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಶಾಸಕರುಗಳಿಗೆ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಪ್ರತಿ ವರ್ಷ ನೀಡುತ್ತಿರುವ ಅನುದಾನ ಎಷ್ಟು; (ವಿಧಾನ ಪರಿಷತ್/ವಿಧಾನಸಭಾ ಸದಸ್ಯರಿಗೆ)

(ಆ) ೨೦೧೮–೧೯ ನೇ ಆರ್ಥಿಕ ವರ್ಷದಲ್ಲಿ ಪ್ರತಿಯೊಬ್ಬ ಮಾನ್ಯ ಸದಸ್ಯರಿಗೆ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿಯ ನಿಧಿಯಿಂದ ನಿಗದಿಯಾಗಿರುವಷ್ಟು ಅನುದಾನ ಬಿಡುಗಡೆಯಾಗಿದೆಯೇ ;

(ಇ) ೨೦೧೯–೨೦ ನೇ ಸಾಲಿನಲ್ಲಿ ಮಾರ್ಚ್ ಅಂತ್ಯವಾದರೂ ಸದರಿ ನಿಧಿಯಿಂದ ಪ್ರತಿಯೊಬ್ಬ ಸದಸ್ಯರಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; ಹಾಗೂ ಪೂರ್ಣ ಪ್ರಮಾಣದ ಅನುದಾನ ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಬಂದಿದ್ದಲ್ಲಿ, ಬಿಡುಗಡೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು; ಅನುದಾನ ಬಿಡುಗಡೆಯಾಗದಿದ್ದಲ್ಲಿ ಕಾರಣಗಳೇನು; ಈ ಕುರಿತು ಸರ್ಕಾರ ತೆಗೆದುಕೊಳ್ಳಲಿರುವ ಕ್ರಮಗಳೇನು ;

(ಉ) ಸದರಿ ಯೋಜನೆಯಡಿ ನೀಡುತ್ತಿರುವ ವಾರ್ಷಿಕ ಅನುದಾನವನ್ನು ಹೆಚ್ಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಊ) ವಿಧಾನ ಪರಿಷತ್ ಸದಸ್ಯರುಗಳು ಹೆಚ್ಚಿನ ತಾಲ್ಲೂಕು ಮತ್ತು ಜಿಲ್ಲೆಗಳನ್ನು ಪ್ರತಿನಿಧಿಸುತ್ತಿರುವುದರಿಂದ ಇವರಿಗೆ ಅನುದಾನವನ್ನು ಹೆಚ್ಚಿಸಲು ಸರ್ಕಾರ ಕ್ರಮವಹಿಸಬಾರದೇಕೆ ?

## ಚಿಕ್ಕಬಳ್ಳಿ ಕೆರೆಯ ಪಿಕಪ್ ನಾಲೆ ಕುರಿತು

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೧೨೨೦ (೧೪೧೮) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮಂಡ್ಯ ಜಿಲ್ಲೆ ಕೆರೆಗೋಡು ಹೋಬಳಿ ಚಿಕ್ಕಬಳ್ಳಿ ಕೆರೆಯ ಪಿಕಪ್ ನಾಲೆಯ ಅಭಿವೃದ್ಧಿ ಕಾಮಗಾರಿ ಅಂದಾಜಿನಲ್ಲಿ ಗೂಳೂರು ಬೆಟ್ಟದ ಬಳಿ ೧೫೦ ಮೀ. ಉದ್ದದ ಮೇಲ್ಗಾಲುವೆಯನ್ನು ನಿರ್ಮಿಸುವ ಸಂಬಂಧ ಸಮೀಕ್ಷಾ ಕಾರ್ಯ ಕೈಗೊಂಡು ವಿನ್ಯಾಸ ಹಾಗೂ ಸಾಧ್ಯಾಸಾಧ್ಯತೆ ಬಗ್ಗೆ ಪರಿಶೀಲನೆ ನಡೆಸಲಾಗಿದೆಯೇ ;

(ಆ) ನಡೆಸಿದ್ದಲ್ಲಿ, ಸಮೀಕ್ಷಾ ಕಾರ್ಯ ಹಾಗೂ ಸಾಧ್ಯಾಸಾಧ್ಯತೆಯ ವರದಿಯ ಅಂಶಗಳೇನು ; (ವರದಿಯ ಪ್ರತಿ ಒದಗಿಸುವುದು)

(ಇ) ಸದರಿ ಕಾಮಗಾರಿಯನ್ನು ಯಾವಾಗ ಆರಂಭಿಸಲಾಗುವುದು ; ಯಾವಾಗ ಪೂರ್ಣಗೊಳಿಸಲಾಗುವುದು ; ಕಾಮಗಾರಿ ಪೂರ್ಣಗೊಳಿಸಲು ಕಾಲಮಿತಿ ಹಾಕಿಕೊಳ್ಳಲಾಗಿದೆಯೇ ; ಇದಕ್ಕಾಗಿ ಯಾವ ಸಂಸ್ಥೆಗೆ ಟೆಂಡರ್ ನೀಡಲಾಗಿದೆ ;

(ಈ) ದುಸ್ಥಿತಿಯಲ್ಲಿರುವ ತೂಬುಗಳನ್ನು ದುರಸ್ಥಿಗೊಳಿಸಿ, ಖಾಯಂ ತೂಬುಗಳನ್ನು ಅಳವಡಿಸಲಾಗಿದೆಯೇ; ಹಾಗಿದ್ದಲ್ಲಿ, ಖಾಯಂ ತೂಬುಗಳನ್ನು ಎಲ್ಲೆಲ್ಲಿ ಅಳವಡಿಸಲಾಗಿದೆ ? (ವಿವರ ನೀಡುವುದು)

## ರಾಜ್ಯ ಹಣಕಾಸು ನಿಗಮದ ಯೋಜನೆಯಡಿಯ ಫಲಾನುಭವಿಗಳ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೧೨೨೧ (೧೪೩೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–



(ಅ) ೨೦೦೦ ರಿಂದ ೨೦೧೨ರವರೆಗೆ ರಾಜ್ಯ ಹಣಕಾಸು ನಿಗಮದಲ್ಲಿ OTS/MCAR ಯೋಜನೆಯಡಿ ಎಷ್ಟು ಮಂದಿ ಫಲಾನುಭವಿಗಳು ಸೌಲಭ್ಯ ಪಡೆದಿದ್ದಾರೆ ; (ಪೂರ್ಣ ವಿವರವನ್ನು ಜಿಲ್ಲಾವಾರು ನೀಡುವುದು)

(ಆ) ಸದರಿ ಸೌಲಭ್ಯವನ್ನು ಪ್ರಧಾನ ಮೊತ್ತ (Principal Amount) ಲೆಕ್ಕಾಚಾರ ಮಾಡಿ ಎಷ್ಟು ಮಂದಿ ಫಲಾನುಭವಿಗಳಿಗೆ ನೀಡಲಾಗಿದೆ ; (ವಿವರ ನೀಡುವುದು)

(ಇ) ಈ ಸೌಲಭ್ಯವನ್ನು ಅಂತಿಮಗೊಳಿಸುವಾಗ ಸರಳ ಬಡ್ಡಿ ಆಧಾರ ಹಾಗೂ ಫಲಾನುಭವಿಗಳ ಳ ಜಾಮೀನುದಾರರ ಭದ್ರತಾ ಠೇವಣಿ ಮೊತ್ತವನ್ನು ನಿಗದಿಪಡಿಸಲಾಗಿತ್ತೇ ;

(ಈ) ಇವುಗಳ ಪೈಕಿ ಚಿತ್ರದುರ್ಗದ ಶಿವ & ಶಿವ ಮಿನರಲ್ಸ್ ಸಿಮೆಂಟ್ ಇಂಡಸ್ಟ್ರೀಸ್‌ರವರಿಗೆ ಯಾವ ಆಧಾರದಲ್ಲಿ ಪೂರ್ಣ ಪ್ರಮಾಣದ ಷರತ್ತುಗಳ ವಿನಾಯಿತಿಗಳನ್ನು ನೀಡಲಾಗಿತ್ತು ;

(ಉ) ಬ್ರಿಕ್ಕೆಟ್ ಫ್ಯೂಯಲ್ ಇಂಡಸ್ಟ್ರೀಸ್‌ರವರಿಗೆ ಪ್ರಧಾನ ಮೊತ್ತಕ್ಕೆ ಯಾವ ಮಾನದಂಡವನ್ನು ಸದರಿ ಸೌಲಭ್ಯದಡಿ ಕೈಗೊಳ್ಳಲಾಗಿರುತ್ತದೆ ;

(ಊ) ನಿಯಮ ೩೨ (೨) ಮತ್ತು ೩೧(ಎ)ರಡಿಯಲ್ಲಿ ೨೦೦೦–೨೦೧೨ರವರೆಗೆ ಯಾರಾದರೂ ಆಸ್ತಿಯನ್ನು (ಪ್ರಾಪರ್ಟಿ) ಮಾರಿದ್ದಾರೆಯೇ ; ಮಾರಿದ್ದಲ್ಲಿ, ಅವರ ವಿವರ ನೀಡುವುದು ?

## ರಾಜ್ಯ ವಿಪತ್ತು ಸ್ಪಂದನಾ ಪಡೆಯ ಕುರಿತು

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೧೨೨೨ (೧೪೨೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ವಿಪತ್ತು ಸ್ಪಂದನಾ ಪಡೆ SDRF ಅನ್ನು ರಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, SDRF ರಚಿಸಲು ಇರುವ ಮಾರ್ಗಸೂಚಿಗಳೇನು ; ಹಾಗೂ ಇದಕ್ಕಾಗಿ ಬಿಡುಗಡೆಯಾದ ಅನುದಾನವೆಷ್ಟು ;

(ಆ) SDRF ರಚಿಸಲು ಮಂಜೂರಾಗಿರುವ ಹುದ್ದೆಗಳು ಎಷ್ಟು ; ಹುದ್ದೆಗಳನ್ನು ಭರ್ತಿಮಾಡಲು ಇರುವ ಮಾನದಂಡಗಳೇನು ;

(ಇ) ಕರ್ನಾಟಕ ರಾಜ್ಯ ಅಗ್ನಿಶಾಮಕ ಇಲಾಖೆಗೆ ಮಂಜೂರಾಗಿರುವ ಹುದ್ದೆಗಳೆಷ್ಟು ; ಈ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳೆಷ್ಟು ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು; (ಮಾಹಿತಿ ಒದಗಿಸುವುದು)

(ಈ) ಅಗ್ನಿಶಾಮಕ ಇಲಾಖೆಯಲ್ಲಿ ಹಾಲಿ ಸಿಬ್ಬಂದಿಗಳ ಕೊರತೆ ಇದ್ದರೂ ಸಿಬ್ಬಂದಿಗಳನ್ನು SDRF ಗೆ ನಿಯೋಜಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದಕ್ಕೆ, ಅಗ್ನಿಶಾಮಕ ಇಲಾಖೆಯ ಸಿಬ್ಬಂದಿಗಳ ಒಪ್ಪಿಗೆ ಪಡೆಯಲಾಗಿದೆಯೇ ; ಇಲ್ಲದಿದ್ದಲ್ಲಿ, ಹೇಗೆ ನಿಯೋಜಿಸಲಾಗುತ್ತಿದೆ ;

(ಉ) SDRFಗೆ ನಿಯೋಜಿಸಿದ್ದಲ್ಲಿ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆಯುಂಟಾಗಿ ಅಗ್ನಿ ಅನಾಹುತಗಳು, ತುರ್ತು ಕಾರ್ಯಗಳನ್ನು ನಿರ್ವಹಿಸಲು ಸಿಬ್ಬಂದಿಗಳ ಕೊರತೆಯನ್ನು ಯಾವ ರೀತಿ ಪರಿಹರಿಸಲಾಗುವುದು ;

(ಊ) ಅಗ್ನಿಶಾಮಕ ಇಲಾಖೆಯ ಸಿಬ್ಬಂದಿಗಳನ್ನು SDRFಗೆ ನಿಯೋಜಿಸಿ ಅಗ್ನಿ ಅನಾಹುತ ನಂದಿಸುವ ಕಾರ್ಯದಲ್ಲಿ ಅನುಭವಿಗಳಾದ ಗೃಹರಕ್ಷಕರನ್ನು ನಿಯೋಜಿಸಿದರೆ ಅನಾಹುತಗಳಾಗುವುದಿಲ್ಲವೇ ; ಇವೆಲ್ಲವುಗಳನ್ನು ತಪ್ಪಿಸಲು ಸರ್ಕಾರವು ಕೈಗೊಳ್ಳುವ ಕ್ರಮಗಳೇನು ;



(ಋ) ಈಗಾಗಲೇ SDRF ಗೆ ನಿಯೋಜಿಸುತ್ತಿರುವ ಅಗ್ನಿಶಾಮಕ ದಳದ ಸಿಬ್ಬಂದಿಯವರನ್ನು ಇಲಾಖೆಯಲ್ಲಿ ಅಗ್ನಿ ನಂದಿಸುವ ಕಾರ್ಯದಲ್ಲಿ ಮುಂದುವರೆಸಲಾಗುವುದೇ ?

## ಪೊಲೀಸ್ ಇಲಾಖೆಯಲ್ಲಿನ ವರ್ಗಾವಣೆಗಳ ಬಗ್ಗೆ

**ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೨೨೩ (೧೪೮೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಎಸ್.ಐ. ಮತ್ತು ಅದಕ್ಕೆ ಮೇಲ್ಪಟ್ಟ ಅಧಿಕಾರಿಗಳ ವರ್ಗಾವಣೆಗೆ ಇರುವ ನಿಯಮ ಮತ್ತು ಮಾನದಂಡಗಳೇನು ; ಬೆಂಗಳೂರು ನಗರದಲ್ಲಿ ಈ ಮಟ್ಟದ ಅಧಿಕಾರಿಗಳು ಗರಿಷ್ಠ ಎಷ್ಟು ವರ್ಷಗಳ ಕಾಲ ಕಾರ್ಯನಿರ್ವಹಿಸಬಹುದು ;

(ಆ) ಕಳೆದ ಐದು ವರ್ಷಗಳಿಂದ ಬೆಂಗಳೂರು ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಸ್.ಐ. ಮತ್ತು ಇದಕ್ಕೆ ಮೇಲ್ಪಟ್ಟ ಅಧಿಕಾರಿಗಳ ಸಂಖ್ಯೆ ಎಷ್ಟು ; ಇವರುಗಳು ಬೆಂಗಳೂರಿನಲ್ಲಿಯೇ ಇಷ್ಟು ವರ್ಷಗಳ ಕಾಲ ಸೇವೆ ಸಲ್ಲಿಸಲು ಕಾರಣಗಳೇನು ;

(ಇ) ಪೊಲೀಸ್ ಅಧಿಕಾರಿಗಳನ್ನು ವರ್ಗಾವಣೆ ಮಾಡುವ ಸಂದರ್ಭದಲ್ಲಿ ಸ್ಥಳಗಳನ್ನು ತೋರಿಸದೆ awaiting for posting ಎಂದು ತೋರಿಸಲು ಕಾರಣಗಳೇನು ; ಈ awaiting for posting ಸಂದರ್ಭದಲ್ಲಿ ಈ ಅಧಿಕಾರಿಗಳಿಗೆ ವೇತನ ಭತ್ಯೆಗಳನ್ನು ಯಾರು ಮತ್ತು ಯಾವ ಲೆಕ್ಕ ಶೀರ್ಷಿಕೆಯಿಂದ ನೀಡಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ನಿವೃತ್ತಿ ನಂತರ ಮರು ನಿಯೋಜನೆಗೊಂಡವರ ಬಗ್ಗೆ

**ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) :–**

೧೨೨೪ (೧೪೭೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ ನಿವೃತ್ತಿ ನಂತರವು ಎಷ್ಟು ಇಲಾಖೆಯಲ್ಲಿ ಇಲಾಖಾ ಕಾರ್ಯದರ್ಶಿಯವರನ್ನು ಅದೇ ಇಲಾಖೆಯಲ್ಲಿ ಮುಂದುವರೆಸಲಾಗಿದೆ ; ಮುಂದುವರೆಸಲು ಇರುವ ಮಾನದಂಡದ ಉದ್ದೇಶವೇನು ;

(ಆ) ತಮ್ಮ ಸೇವಾ ಅವಧಿಯಲ್ಲಿ ಉತ್ತಮ ಹೆಸರು ಪಡೆಯದೆ ಪಾಸ್ ಪೋರ್ಟ್ ಹಗರಣದಲ್ಲಿ ಸರ್ಕಾರದಿಂದ ಛೀಮಾರಿ ಹಾಕಿಸಿಕೊಂಡ ಪ್ರಕರಣದಲ್ಲಿ ಭಾಗಿಯಾಗಿರುವ ಅಧಿಕಾರಿಗಳ ಹೆಸರು ಸಮೇತ ವಿವರ ಒದಗಿಸುವುದು ; ಇಂತಹ ಎಷ್ಟು ಅಧಿಕಾರಿಗಳನ್ನು ನಿವೃತ್ತಿ ನಂತರ ಮರು ನೇಮಕಾತಿ ಮಾಡಿಕೊಳ್ಳಲಾಗಿದೆ ;

(ಇ) ಕೂಡಲೇ ಇವರನ್ನು ಸೇವೆಯಿಂದ ಬಿಡುಗಡೆಗೊಳಿಸಿ ಸದರಿ ಹುದ್ದೆಗೆ ಪ್ರತಿಭಾಶಾಲಿಗಳಿಗೆ ಅವಕಾಶ ಕಲ್ಪಿಸಲಾಗುವುದೇ ; ಈ ಪ್ರಕರಣ ಸರ್ಕಾರದ ಯಾವ ಹಂತದಲ್ಲಿದೆ ?

## ಬೆಳಗಾವಿ ವಿಭಾಗದ ಸಹಾಯಕ ಆಯುಕ್ತರು (ವಾಣಿಜ್ಯ ತೆರಿಗೆ) ಕ್ರಿಮಿನಲ್ ಪ್ರಕರಣದ ವಿವರ ನೀಡುವ ಬಗ್ಗೆ

**ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) :–**

೧೨೨೫ (೧೪೩೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–



(ಅ) ವಾಣಿಜ್ಯ ತೆರಿಗೆ ಇಲಾಖೆಗೆ ಸಂಬಂಧಿಸಿದಂತೆ ಬೆಳಗಾವಿ ವಿಭಾಗದಲ್ಲಿ ಸೇವೆ ಸಲ್ಲಿಸುತ್ತಿರುವ ಯಾವ ವಾಣಿಜ್ಯ ತೆರಿಗೆ ಸಹಾಯಕ ಆಯುಕ್ತರ ವಿರುದ್ಧ ಇಲಾಖಾ ವಿಚಾರಣೆ ಮತ್ತು ನ್ಯಾಯಾಲಯ ವಿಚಾರಣೆ ಪ್ರಕರಣಗಳು ಮುಕ್ತಾಯಗೊಂಡಿವೆ ; (ವಿವರ ನೀಡುವುದು)

(ಆ) ಯಾವ ವಾಣಿಜ್ಯ ತೆರಿಗೆ ಸಹಾಯಕ ಆಯುಕ್ತರ ವಿರುದ್ಧ ಸರ್ಕಾರವು ಇಲಾಖಾ ವಿಚಾರಣೆ ನಡೆಸಿ ಶಿಸ್ತು ಕ್ರಮವನ್ನು ಕೈಬಿಟ್ಟು ಪ್ರಕರಣವನ್ನು ಮುಕ್ತಾಯಗೊಳಿಸಿದೆ ; ಮತ್ತು ಅವರ ಸೇವೆಯನ್ನು ಖಾಯಂಗೊಳಿಸಿ ಆದೇಶ ಹೊರಡಿಸಿದೆ ; (ವಿವರ ನೀಡುವುದು)

(ಇ) ಈ ವಾಣಿಜ್ಯ ತೆರಿಗೆ ಸಹಾಯಕ ಆಯುಕ್ತರು ಅವರು ಪಡೆಯಬೇಕಾಗಿದ್ದ ಸೇವಾ ಸೌಲಭ್ಯಗಳನ್ನು ಪಡೆಯಲು ಅರ್ಹರಿದ್ದರೋ ಅವುಗಳನ್ನು ಪಡೆಯಲು ಅರ್ಹರಿರುತ್ತಾರೆಂದು ಸರ್ಕಾರವು ಆದೇಶಿಸಿದೆಯೇ ; ಆದೇಶಿಸಿದ್ದರೆ, ಅದರ ಪ್ರತಿ ನೀಡುವುದು ;

(ಈ) ಸರ್ಕಾರದ ಅದೇಶದಲ್ಲಿ ಅಧಿಕಾರಿಯು ಯಾವ ಸೌಲಭ್ಯಗಳನ್ನು ಪಡೆಯಲು ಅರ್ಹರಿದ್ದರೋ ಅವುಗಳನ್ನು ಪಡೆಯಲು ಅರ್ಹರಿರುತ್ತಾರೆಂದು ತಿಳಿಸಿರುವುದರಿಂದ, ಆ ವಾಣಿಜ್ಯ ತೆರಿಗೆ ಸಹಾಯಕ ಆಯುಕ್ತರ ಸೇವೆಯನ್ನು ಸೇವಾ ಹಿರಿತನದ ಆಧಾರದ ಮೇಲೆ ವಾಣಿಜ್ಯ ತೆರಿಗೆ ಸಹಾಯಕ ಆಯುಕ್ತರ ವೃಂದದಲ್ಲಿ ಮತ್ತು ವಾಣಿಜ್ಯ ತೆರಿಗೆ ಉಪ ಆಯುಕ್ತರ ವೃಂದದಲ್ಲಿ ಯಾವ ದಿನಾಂಕದಿಂದ ಅರ್ಹತಾ ದಿನಾಂಕವನ್ನು ನಿಗದಿಪಡಿಸಲಾಗಿದೆ ; ಇಲ್ಲವಾದಲ್ಲಿ, ಕಾರಣಗಳೇನು ತಿಳಿಸುವುದು ;

(ಉ) ಒಬ್ಬ ಸರ್ಕಾರಿ ನೌಕರ/ಅಧಿಕಾರಿಯು ಕ್ರಿಮಿನಲ್ ಪ್ರಕರಣದಲ್ಲಿ ಮತ್ತು ಇಲಾಖಾ ವಿಚಾರಣೆಯಲ್ಲಿ ದೋಷಮುಕ್ತಗೊಂಡ ಬಳಿಕ ಆ ಅಧಿಕಾರಿಯ ವಿರುದ್ಧ ಶಿಸ್ತು ಕ್ರಮವನ್ನು ಕೈಬಿಟ್ಟು ಅಧಿಕಾರಿಯು ಯಾವ ಸೇವಾ ಸೌಲಭ್ಯಗಳನ್ನು ಪಡೆಯಲು ಅರ್ಹರಿದ್ದರೋ ಅವುಗಳನ್ನು ಪಡೆಯಲು ಅರ್ಹರಿರುತ್ತಾರೆಂದು ಸರ್ಕಾರವು ತಿಳಿಸಿರುವುದರಿಂದ ಅಂತಹ ಅಧಿಕಾರಿಯು ಸಂವಿಧಾನ ಬದ್ಧ ಹುದ್ದೆ ಪಡೆಯಲು ಕಾನೂನು ಅಡಚಣೆ ಇದೆಯೇ ;

(ಊ) ದೂರುದಾರರು ತಮ್ಮ ಹೆಸರು, ವಿಳಾಸ, ತಿಳಿಸದೇ ಒಬ್ಬ ಸರ್ಕಾರಿ ನೌಕರನ ವಿರುದ್ಧ ದೂರು ಸಲ್ಲಿಕೆ ಮಾಡಿದ್ದಲ್ಲಿ, ಅಂತಹ ಸರ್ಕಾರಿ ನೌಕರನಿಂದ ಸಂಬಂಧಿಸಿದ ಇಲಾಖಾ ಮುಖ್ಯಸ್ಥರು ಸಮಜಾಯಿಷಿಯನ್ನು ಪಡೆಯಬಹುದೇ ; ಈ ಸಂಬಂಧ ಸರ್ಕಾರಿ ಆದೇಶ/ಸುತ್ತೋಲೆ ಇದ್ದಲ್ಲಿ ಒದಗಿಸುವುದು ?

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಅಗತ್ಯಕ್ಕಿಂತ ಹೆಚ್ಚಿನ ಪೊಲೀಸ್ ಸಿಬ್ಬಂದಿ ಕರ್ತವ್ಯ ನಿರ್ವಹಿಸುತ್ತಿರುವ ಬಗ್ಗೆ

**ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) :-**

೧೨೨೬ (೧೪೬೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಅಗತ್ಯಕ್ಕಿಂತ ಹೆಚ್ಚಿನ ಪೊಲೀಸ್ ಸಿಬ್ಬಂದಿ ಎರವಲು/ಓಓಡಿ ಸೇವೆಯ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವುದು ನಿಜವೆ ; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವವರ ಹೆಸರು, ಹುದ್ದೆ ಮತ್ತು ಯಾವ ದಿನಾಂಕದಿಂದ ಕೆಲಸ ನಿರ್ವಹಿಸುತ್ತಿದ್ದಾರೆ ;



(ಆ) ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಪೊಲೀಸ್ ಇಲಾಖೆಯ ಎರವಲು ಸೇವೆಯ ಅಧಿಕಾರಿ/ನೌಕರರು ಈ ಹಿಂದೆ ಎರವಲು ಸೇವೆಯ ಆಧಾರದಲ್ಲಿ ಬಿ.ಡಿ.ಎ ಗೆ ನಿಯೋಜನೆಗೊಂಡಿದ್ದಾರೆ ; ಇದ್ದಲ್ಲಿ, ಅಂತಹವರ ಹೆಸರು, ಹುದ್ದೆ ಮತ್ತು ಎಷ್ಟು ಬಾರಿ ನಿಯೋಜನೆಗೊಂಡಿದ್ದರು ಎಂಬ ವಿವರಗಳನ್ನು ನೀಡುವುದು ;

(ಇ) ನಿಯೋಜನೆಗೊಂಡಿರುವ ಪೊಲೀಸ್ ಸಿಬ್ಬಂದಿಗಳು ಪ್ರಾಧಿಕಾರದಲ್ಲಿ ನಿರ್ವಹಿಸಬೇಕಾದ ಕೆಲಸ ಕಾರ್ಯಗಳ ವಿವರ ನೀಡುವುದು ;

(ಈ) ನಿರ್ದಿಷ್ಟಪಡಿಸಿದ ಪೊಲೀಸ್ ಕಾರ್ಯವನ್ನು ಹೊರತುಪಡಿಸಿ ನಿಯೋಜಿತಗೊಂಡ ಪೊಲೀಸರು ಪ್ರಾಧಿಕಾರದ ಕಡತಗಳ ಕಾರ್ಯನಿರ್ವಹಣೆಯನ್ನು ಮಾಡುತ್ತಿರುವುದು ನಿಜವೇ ; ಇದ್ದಲ್ಲಿ, ಇದಕ್ಕೆ ಕಾರಣವೇನು ; ಈ ಕಾರ್ಯನಿರ್ವಹಣೆಯನ್ನು ಪ್ರಾಧಿಕಾರದ ಸಿಬ್ಬಂದಿಗಳು ಕೈಗೊಳ್ಳುವುದಿಲ್ಲವೇ ; ಇಲ್ಲದಿದ್ದಲ್ಲಿ, ಇದಕ್ಕೆ ಕಾರಣವೇನು ;

(ಉ) ಸದರಿ ಪೊಲೀಸರು ಪೊಲೀಸ್ ಇಲಾಖೆಯಲ್ಲಿ ನೇಮಕಾತಿಯಾದ ಹುದ್ದೆಗೆ ತಕ್ಕಂತೆ ಕೆಲಸ ನಿರ್ವಹಿಸಿ ನ್ಯಾಯ ಒದಗಿಸದೇ ಅನಗತ್ಯವಾಗಿ ಪ್ರಾಧಿಕಾರದಲ್ಲಿ ಎರವಲು ಸೇವೆ ಮೇಲೆ ಕರ್ತವ್ಯ ನಿರ್ವಹಿಸದಂತೆ ತಡೆಗಟ್ಟಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ? (ವಿವರ ಒದಗಿಸುವುದು)

## ಬೆಂಗಳೂರು ನಗರದಲ್ಲಿ ಅನಧಿಕೃತ ನಿವೇಶನಗಳು/ಬಡಾವಣೆಗಳ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :-**

೧೨೨೭ (೧೫೦೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರ ಜಿಲ್ಲೆಯ ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಕಂದಾಯ ಭೂಮಿಯು ಭೂ ಪರಿವರ್ತನೆಯಾಗದೆ ಅನಧಿಕೃತವಾಗಿ ಬಡಾವಣೆಗಳು/ನಿವೇಶನಗಳನ್ನು ನಿರ್ಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಯಾವ ವಾರ್ಡ್‌ಗಳಲ್ಲಿ ಭೂ ಪರಿವರ್ತನೆಯಾಗದೆ ಅನಧಿಕೃತವಾಗಿ ಕಂದಾಯ ಭೂಮಿಗಳಲ್ಲಿ ಬಡಾವಣೆ/ಮನೆಗಳು ನಿರ್ಮಾಣವಾಗಿವೆ ; (ಮಾಹಿತಿ ನೀಡುವುದು)

(ಇ) ಕಂದಾಯ ಭೂಮಿಗಳ ಮೇಲೆ ಅನಧಿಕೃತವಾಗಿ ನಿರ್ಮಾಣವಾಗಿರುವ ಮನೆಗಳು ಹಾಗೂ ಅಭಿವೃದ್ಧಿಯಾಗಿರುವ ಬಡಾವಣೆಗಳ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು ? (ವಿವರ ನೀಡುವುದು)

## ಬಿ.ಡಬ್ಲ್ಯೂ ಎಸ್.ಎಸ್.ಬಿ. ಮತ್ತು ಟ್ಯಾಂಕರ್‌ಗಳ ಮುಖಾಂತರ ನೀರು ಮಾರಾಟ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೧೨೨೮ (೧೪೯೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಕರ್ನಾಟಕ ಅಂತರ್ಜಲ ಅಭಿವೃದ್ಧಿ ಮತ್ತು ನಿರ್ವಹಣೆ ಅಧಿನಿಯಮ ಹಾಗೂ ನಿಯಂತ್ರಣ ವಿಧೇಯಕ ೨೦೧೧ರ ಕಾಯ್ದೆ ೧೭ರ ವಿರುದ್ಧವಾಗಿ ಬಿ.ಡಬ್ಲ್ಯೂ ಎಸ್.ಎಸ್.ಬಿ ಉಪ ವಿಭಾಗಗಳಲ್ಲಿ ಬರುವ ಕೊಳವೆ ಬಾವಿಗಳಿಂದ ನೀರನ್ನು ಖಾಸಗಿ ವ್ಯಕ್ತಿಗಳು ಟ್ಯಾಂಕರ್ ಮೂಲಕ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅಂತವರ ವಿರುದ್ಧ ಯಾವ ಕ್ರಮಗಳನ್ನು ಜರುಗಿಸಲಾಗಿದೆ ; (ಮಾಹಿತಿ ನೀಡುವುದು)



(ಆ) ಎಷ್ಟು ಪ್ರಕರಣಗಳಲ್ಲಿ ಬಿ.ಡಬ್ಲ್ಯೂ ಎಸ್.ಎಸ್.ಬಿ ರವರು ನೋಟಿಸ್ ನೀಡಿರುತ್ತಾರೆ ; ಎಷ್ಟು ಪ್ರಕರಣಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಳಿಸಲು ಪತ್ರ ಬರೆಯಲಾಗಿದೆ ; ಎಷ್ಟು ಪ್ರಕರಣಗಳಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಳಿಸಲಾಗಿದೆ ; ಉಳಿದ ಪ್ರಕರಣಗಳಲ್ಲಿ ಈ ಕಾಯ್ದೆಯನ್ವಯ ಕ್ರಮವಹಿಸದಿರಲು ಕಾರಣವೇನು ;

(ಇ) ಬೆಸ್ಕಾಂ ಮತ್ತು ಬಿ.ಡಬ್ಲ್ಯೂ ಎಸ್.ಎಸ್.ಬಿ ಯಿಂದ ವಾಣಿಜ್ಯ ನೀರು ಸರಬರಾಜು ಎಂದು ಅನುಮತಿ ಪಡೆದಿರುವವರಿಗೂ ಸಹ ಈ ಕಾಯ್ದೆ ಅನ್ವಯಿಸುವುದೇ ;

(ಈ) ಬೆಂಗಳೂರು ನಗರ ವ್ಯಾಪ್ತಿಯಲ್ಲಿ ೧೯೮ ವಾರ್ಡ್‌ಗಳಲ್ಲಿ ಬರುವ ಕೊಳವೆ ಬಾವಿಗಳಿಂದ ನೀರನ್ನು ಟ್ಯಾಂಕರ್ ಮೂಲಕ ಮಾರಾಟ ಮಾಡುತ್ತಿರುವ ಖಾಸಗಿ ವ್ಯಕ್ತಿಗಳ ಹೆಸರು ಮತ್ತು ವಿಳಾಸವನ್ನು ಪ್ರತ್ಯೇಕ ಬಿ.ಡಬ್ಲ್ಯೂ ಎಸ್.ಎಸ್.ಬಿ ಉಪ ವಿಭಾಗವಾರು ಮಾಹಿತಿ ನೀಡುವುದು?

## ಬೆಂಗಳೂರು ನಗರದಲ್ಲಿ ಪ್ರಸ್ತುತ ಯಾವ ಯಾವ ಮಾರ್ಗದಲ್ಲಿ ಮೆಟ್ರೋ ರೈಲು ಸಂಚಾರ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೨೯ (೧೪೨೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಪ್ರಸ್ತುತ ಯಾವ ಯಾವ ಮಾರ್ಗದಲ್ಲಿ ಮೆಟ್ರೋ ರೈಲುಗಳು ಸಂಚರಿಸುತ್ತಿವೆ ;

(ಆ) ಇವುಗಳಲ್ಲಿ, ಪ್ರತಿದಿನ ಸಂಚರಿಸುವ ಸಾರ್ವಜನಿಕರ ಸಂಖ್ಯೆ ಎಷ್ಟು ; ಇದರಿಂದ ಬಿ.ಎಂ.ಆರ್.ಸಿ.ಎಲ್ ಗೆ ಬರುವ ವಾರ್ಷಿಕ ಆದಾಯ ಎಷ್ಟು ; ಪ್ರಸ್ತುತ ಈ ಯೋಜನೆಗೆ ಯಾವ ಯಾವ ಸಂಸ್ಥೆಗಳಿಂದ ಹಣವನ್ನು ಪಡೆಯಲಾಗಿದೆ ; (ವಿವರ ನೀಡುವುದು)

(ಇ) ಮುಂದಿನ ಹಂತದಲ್ಲಿ ಯಾವ ಯಾವ ಮಾರ್ಗಗಳಲ್ಲಿ ಹೊಸದಾಗಿ ಮೆಟ್ರೋ ರೈಲು ಯೋಜನೆಗಳನ್ನು ಕೈಗೊಳ್ಳಲಾಗುವುದು ; ಈ ಯೋಜನೆಗೆ ನಿಗಮವು ಎಷ್ಟು ಹಣವನ್ನು ವಿನಿಯೋಗಿಸುತ್ತಿದೆ ;

(ಈ) ಈ ಯೋಜನೆಗೆ ಯಾವ ಯಾವ ಸಂಸ್ಥೆಗಳಿಂದ ಹಣವನ್ನು ಪಡೆಯಲಾಗುವುದು ?

## ಬೆಂಗಳೂರು ನಗರದಲ್ಲಿ ಖಾಲಿ ಇರುವ ನಿವೇಶನಗಳ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೩೦ (೧೪೨೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಖಾಲಿಯಿರುವ ನಿವೇಶನಗಳ ಸಂಖ್ಯೆ ಎಷ್ಟು ; ಎಷ್ಟು ವರ್ಷದಿಂದ ಖಾಲಿ ಬಿದ್ದಿವೆ ;

(ಆ) ಸದರಿ ಖಾಲಿ ನಿವೇಶನಗಳಲ್ಲಿ ಸುತ್ತಮುತ್ತಲಿನ ಸಾರ್ವಜನಿಕರು ಕಸ ಮತ್ತು ಕವರ್ ಹಾಗೂ ಇನ್ನಿತರೆ ವಸ್ತುಗಳನ್ನು ಎಸೆದು ಪರಿಸರ ಮಾಲಿನ್ಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಇ) ಬಂದಿದ್ದಲ್ಲಿ, ಖಾಲಿ ನಿವೇಶನಗಳ ನಿಜವಾದ ಮಾಲೀಕರಿಗೆ ನೋಟಿಸ್ ಜಾರಿ ಮಾಡಿ ಸ್ವಚ್ಛತೆಯಿಂದ ಇಟ್ಟುಕೊಳ್ಳುವಂತೆ ಸರ್ಕಾರದ ವತಿಯಿಂದ ನಿರ್ದೇಶನಗಳನ್ನು ನೀಡಲಾಗಿದೆಯೇ ;

(ಈ) ಈ ಸಂಬಂಧ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಗಿದೆಯೇ ; ಹಾಗಿದ್ದರೂ ಕಸ, ತ್ಯಾಜ್ಯ ಹಾಗೂ ಇನ್ನಿತರೆ ಸಮಸ್ಯೆಗಳನ್ನು ತಡೆಗಟ್ಟಲು ಸರ್ಕಾರದ ವತಿಯಿಂದ ತೆಗೆದುಕೊಂಡ ಕ್ರಮಗಳೇನು ;

(ಉ) ಈ ರೀತಿಯ ಪರಿಸರ ಮಾಲಿನ್ಯವನ್ನು ತಡೆಗಟ್ಟಲು ಸರ್ಕಾರದ ವತಿಯಿಂದ ತೆಗೆದುಕೊಂಡ ಕ್ರಮಗಳೇನು ?

## ಕಳೆದ ೩ ವರ್ಷಗಳಲ್ಲಿ ಅಬಕಾರಿ ಪರವಾನಿಗೆಗಳ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೩೧ (೧೪೨೬) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಿಂದ ಸರ್ಕಾರ ನೀಡಿರುವ ಅಬಕಾರಿ ಪರವಾನಗಿಗಳ ಸಂಖ್ಯೆ ಎಷ್ಟು ; ಕಳೆದ ಮೂರು ವರ್ಷಗಳಿಂದ ರಾಜ್ಯದ ಬೊಕ್ಕಸಕ್ಕೆ ಸಂದಾಯವಾದ ಒಟ್ಟು ಅಬಕಾರಿ ಆದಾಯವೆಷ್ಟು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಅನಧಿಕೃತವಾಗಿ ಮದ್ಯ ಮಾರಾಟ ಮಾಡುವವರ ವಿರುದ್ಧ ಸರ್ಕಾರ ಯಾವ ಯಾವ ಕ್ರಮ ಕೈಗೊಂಡಿದೆ ;

(ಇ) ಮರು ನವೀಕರಣಗೊಳ್ಳದ ಅಬಕಾರಿ ಲೈಸೆನ್ಸ್ ಮೂಲಕವೇ ಇನ್ನೂ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಅವರ ವಿರುದ್ದ ಸರ್ಕಾರ ಕೈಗೊಂಡ ಕ್ರಮಗಳೇನು ; (ಮಾಹಿತಿ ನೀಡುವುದು)

(ಈ) ಅಬಕಾರಿ ಪರವಾನಗಿ ಲೈಸೆನ್ಸ್ ಹೊಂದಿರುವ ವ್ಯಕ್ತಿ ಅದನ್ನು ಮತ್ತೊಬ್ಬನಿಗೆ ಲೀಸ್‌ಗೆ ಅಥವಾ ಬಾಡಿಗೆಗೆ ಅಥವಾ ಮಾರಾಟ ಮಾಡಲು ಇರುವ ಮಾನದಂಡಗಳೇನು ; ಹೀಗೆ ಮಾಡಲು ಸಾಧ್ಯವಿಲ್ಲದಿದ್ದರೆ, ಇದರ ನಿಯಂತ್ರಣಕ್ಕೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ? (ಮಾಹಿತಿ ನೀಡುವುದು)

## ಭದ್ರಾ ಮೇಲ್ದಂಡೆ ಯೋಜನೆಯ ಪ್ರಸ್ತುತ ಪರಿಸ್ಥಿತಿಯ ಕುರಿತು

**ಶ್ರೀ ಹೆಚ್.ಎಂ. ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೩೨ (೧೪೨೪) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭದ್ರಾ ಮೇಲ್ದಂಡೆ ಯೋಜನೆಯ ಪ್ರಸ್ತುತ ಸ್ಥಿತಿಯೇನು ; ಭದ್ರಾ ಮೇಲ್ದಂಡೆ ಯೋಜನೆಗೆ ಪ್ರಸಕ್ತ ಸಾಲಿನಲ್ಲಿ ಮಂಜೂರಾದ ಅನುದಾನ, ಬಿಡುಗಡೆಯಾದ ಅನುದಾನ ಹಾಗೂ ಬಾಕಿ ಉಳಿದಿರುವ ಅನುದಾನವೆಷ್ಟು ; ಬಾಕಿ ಉಳಿಯಲು ಕಾರಣಗಳೇನು ; (ಲೆಕ್ಕ ಶೀರ್ಷಿಕೆವಾರು ಸಂಪೂರ್ಣ ವಿವರ ನೀಡುವುದು)

(ಆ) ಭದ್ರಾ ಮೇಲ್ದಂಡೆ ಯೋಜನೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಕೈಗೊಂಡ ಕಾಮಗಾರಿಗಳ ವಿವರವನ್ನು ದಾಖಲೆ ಸಹಿತ ನೀಡುವುದು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ತುಮಕೂರಿನಲ್ಲಿ ಎತ್ತಿನಹೊಳೆ ಯೋಜನೆಯಲ್ಲಿ ಕೊರಟಗೆರೆ ತಾಲ್ಲೂಕಿನ ಭೈರಗೊಂಡ್ಲು ಬಫರ್ ಡ್ಯಾಂ ಕಾಮಗಾರಿಯಲ್ಲಿ ಅವ್ಯವಹಾರ ನಡೆದಿದೆ ಎನ್ನುವ ದೂರುಗಳು ಕೇಳಿಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ?



## ಕೆ.ಎ.ಎಸ್. ಹುದ್ದೆಗಳ ನೇಮಕಾತಿ ಮತ್ತು ಮಾನದಂಡಗಳ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೧೨೩೩ (೧೫೦೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಆಡಳಿತ ಸೇವೆ (ಕೆ.ಎ.ಎಸ್) ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಯಾವ ಯಾವ ಹುದ್ದೆಗಳಿಗೆ ಯಾವ ಆಧಾರದ ಮೇಲೆ ನೇಮಿಸಲಾಗುತ್ತದೆ ;

(ಆ) ಕೆ.ಎ.ಎಸ್. ಹುದ್ದೆಯಲ್ಲಿರುವವರು ಪದೋನ್ನತಿ ಹೊಂದಿದಾಗ ಅದನ್ನು ನಿರಾಕರಿಸಿದವರ ಸಂಖ್ಯೆ ಎಷ್ಟು ಹಾಗೂ ಯಾವ ಕಾರಣಕ್ಕಾಗಿ ನಿರಾಕರಿಸಿರುತ್ತಾರೆ ; (ಅಧಿಕಾರಿಗಳ ಹೆಸರು ಮತ್ತು ಹುದ್ದೆಯ ಸಮೇತ ಕಳೆದ ಐದು ವರ್ಷಗಳ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಕೆ.ಎ.ಎಸ್. ಹಿರಿಯ ಶ್ರೇಣಿ ಮತ್ತು ಕಿರಿಯ ಶ್ರೇಣಿಯ ಅಧಿಕಾರಿಗಳ ಸಂಖ್ಯೆ ಎಷ್ಟು ? (ಮಾಹಿತಿ ನೀಡುವುದು)

## ಕೆರೆಗಳ ಅಭಿವೃದ್ಧಿ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೩೪ (೧೫೫೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿರುವ ಸಣ್ಣ ನೀರಾವರಿ ಇಲಾಖೆಗೆ ಸೇರಿದ ಕೆರೆಗಳ ಸಂಖ್ಯೆ ಎಷ್ಟು ; ಇವುಗಳು ಯಾವ ಯಾವ ಗ್ರಾಮಗಳಲ್ಲಿವೆ ; ಹಾಗೂ ಇವುಗಳ ನೀರಾವರಿ ಸಾಮರ್ಥ್ಯ ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಜಿಲ್ಲೆಯ ಜನ ಮತ್ತು ರೈತರ ಸಂಖ್ಯೆಗೆ ಅನುಗುಣವಾಗಿ ಇನ್ನು ಎಷ್ಟು ಕೆರೆಗಳ ಅವಶ್ಯಕತೆ ಇದೇ ; (ಮಾಹಿತಿ ಒದಗಿಸುವುದು)

(ಇ) ಜಿಲ್ಲೆಯಲ್ಲಿ ಹೊಸದಾಗಿ ಸಣ್ಣ ಕೆರೆಗಳನ್ನು ನಿರ್ಮಿಸಲು ಯಾವಾಗ ಸರ್ವೆ ಕಾರ್ಯವನ್ನು ಕೈಗೊಳ್ಳಲಾಗಿದೆ ; ಪ್ರಸಕ್ತ ಸಾಲಿನನ್ವಯ ಜಿಲ್ಲೆಯ ಯಾವ ಯಾವ ಗ್ರಾಮಗಳಲ್ಲಿ ಸಣ್ಣ ಕೆರೆಗಳನ್ನು ನಿರ್ಮಿಸಲಾಗುವುದು ; ಇದಕ್ಕೆ ಅಗತ್ಯ ಇರುವ ಹಣ ಎಷ್ಟು ;

(ಈ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಜಿಲ್ಲೆಯ ಸಣ್ಣ ಕೆರೆಗಳ ಸಂರಕ್ಷಣೆ ನಿರ್ವಹಣೆ ಮತ್ತು ಜೀರ್ಣೋದ್ಧಾರಕ್ಕೆ ಸರ್ಕಾರ ಪ್ರತಿ ವರ್ಷ ವೆಚ್ಚ ಮಾಡಿದ ಹಾಗೂ ಇದೇ ಅವಧಿಯಲ್ಲಿ ಕೇಂದ್ರ ಸರ್ಕಾರದಿಂದ ಬಂದಿರುವ ಹಣವೆಷ್ಟು ;

(ಉ) ಹಾಗಿದ್ದಲ್ಲಿ, ಕೇಂದ್ರ ಹಾಗೂ ರಾಜ್ಯ ಸರ್ಕಾರವು ನೀಡಿರುವ ಅನುದಾನದಲ್ಲಿ ಜಿಲ್ಲೆಯಲ್ಲಿ ವಿವಿಧ ಕೆರೆಗಳಲ್ಲಿ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳು ಯಾವುವು ? (ಕೆರೆಗಳ ಊರು ಅಂಕಿ ಅಂಶಗಳನ್ನು ಒದಗಿಸುವುದು)

## ಬೀದರ್ ಜಿಲ್ಲೆಯ ಕಾರಂಜಾ ಜಲಾಶಯ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೩೫ (೧೫೫೪) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಎಷ್ಟು ತಾಲ್ಲೂಕುಗಳಿಗೆ ಕಾರಂಜಾ ಜಲಾಶಯದಿಂದ ನೀರು ನೀಡಲಾಗುತ್ತದೆ ;

(ಆ) ಯಾವ ಉದ್ದೇಶಕ್ಕೆ ನೀಡಲಾಗುತ್ತದೆ ; ಎಷ್ಟು ಎಕರೆ ಪ್ರದೇಶಕ್ಕೆ ನೀರಾವರಿ ಬೆಳೆಗೆ ನೀರು ಕೊಡಲಾಗುವುದು ; ಅಥವಾ ಇನ್ನಿತರ ಬೆಳೆಗೆ ಎಷ್ಟು ಪ್ರದೇಶಕ್ಕೆ ನೀರು ಕೊಡಲಾಗುತ್ತದೆ ;



(ಇ) ಕುಡಿಯುವ ನೀರಿಗಾಗಿ ಯಾವ ಯಾವ ತಾಲ್ಲೂಕಿನ ನಗರಗಳಿಗೆ ಎಷ್ಟೆಷ್ಟು ನೀರು ಕೊಡಲಾಗುತ್ತಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಹೊಸದಾಗಿ ಕುಡಿಯುವ ನೀರಿಗೆ ಗ್ರಾಮಾಂತರ ಹಾಗೂ ನಗರಗಳಿಂದ ಬಂದಿರುವ ಬೇಡಿಕೆಗಳೆಷ್ಟು ; ಎಷ್ಟು ಮಂಜೂರು ಮಾಡಲಾಗಿದೆ ;

(ಉ) ತಡೆ ಹಿಡಿಯಲಾಗಿರುವ ಬೇಡಿಕೆಗಳಾವುವು ; ತಡೆಹಿಡಿಯಲು ಕಾರಣವೇನು ? (ವಿವರ ನೀಡುವುದು)

## ಸಣ್ಣ ನೀರಾವರಿ ಕಾಮಗಾರಿಯ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೨೩೬ (೧೫೫೬) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೫ ವರ್ಷಗಳ ಅವಧಿಯಲ್ಲಿ ಬೀದರ್ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಕೈಗೆತ್ತಿಕೊಂಡಿರುವ ಯೋಜನೆಗಳು ಯಾವುವು; (ತಾಲ್ಲೂಕುವಾರು, ಕಾಮಗಾರಿವಾರು, ಯೋಜನೆವಾರು, ವರ್ಷವಾರು ಮಾಹಿತಿ ನೀಡುವುದು)

(ಆ) ಈ ಯೋಜನೆಗಳಿಗೆ ಮಂಜೂರಾದ, ಬಿಡುಗಡೆಯಾದ ಮತ್ತು ವೆಚ್ಚ ಮಾಡಿರುವ ಹಣ ಎಷ್ಟು ; (ಯೋಜನೆವಾರು, ಕಾಮಗಾರಿವಾರು, ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಯೋಜನೆಗಳನ್ನು ಯಾವಾಗ ಪೂರ್ಣಗೊಳಿಸಬೇಕಿತ್ತು ; ಈಗ ಯಾವ ಹಂತದಲ್ಲಿದೆ ; (ಯೋಜನೆವಾರು ಮಾಹಿತಿ ನೀಡುವುದು)

(ಈ) ಯೋಜನೆಗಳನ್ನು ತ್ವರಿತವಾಗಿ ಪೂರ್ಣಗೊಳಿಸಲು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಬೆಂಗಳೂರು ನಗರ ಸಂಚಾರಿ ಪೊಲೀಸರು ಸಂಚಾರಿ ನಿಯಮದ ಬಗ್ಗೆ

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೨೩೭ (೧೪೩೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಸಂಚಾರಿ ಪೊಲೀಸರು ಸಂಚಾರಿ ನಿಯಮ ಉಲ್ಲಂಘನೆ ಪ್ರಕರಣಗಳಲ್ಲಿ ದಿನಾಂಕ: ೦೧.೦೧.೨೦೨೦ ರಿಂದ ದಿನಾಂಕ: ೩೧.೦೧.೨೦೨೦ರಲ್ಲಿ ಸ್ಥಳದಂಡ ವಿಧಿಸಿ ಠಾಣೆವಾರು ಸಂಗ್ರಹಿಸಿದ ದಂಡದ ಮೊತ್ತವೆಷ್ಟು; ಸರ್ಕಾರದ ಲೆಕ್ಕ ಶೀರ್ಷಿಕೆಗೆ ದಿನಾಂಕವಾರು ಜಮಾ ಮಾಡಿದ ವಿವರಗಳನ್ನು (ಎ) ಕ.ಸಂ, (ಬಿ) ಸಂಚಾರಿ ಠಾಣೆಯ ಹೆಸರು (ಸಿ) ಸ್ಥಳ ದಂಢ ವಿಧಿಸಿದ ದಿನಾಂಕ ಮತ್ತು ಸಂಗ್ರಹಿಸಿದ ಒಟ್ಟು ಹಣ (ಡಿ) ಸರ್ಕಾರಿ ಲೆಕ್ಕ ಶೀರ್ಷಿಕೆಗೆ ಜಮಾ ಮಾಡಿದ ಒಟ್ಟು ಹಣ ಮತ್ತು ದಿನಾಂಕ ಚಲನ್ ನಂ (ಇ) ಜಮಾ ಮಾಡಿದ ಲೆಕ್ಕ ಶೀರ್ಷಿಕೆ ಮತ್ತು ಒಟ್ಟು ಹಣ ದಿನಾಂಕ (ಎಫ್) ಜಮಾ ಮಾಡಿದ ದಿನಾಂಕದಂದು ಠಾಣಾಧಿಕಾರಿ ಬಳಿ ಇದ್ದ ಒಟ್ಟು ಹಣ (ಜಿ) ಜಮಾ ಮಾಡಿದ ನಂತರ ಠಾಣಾಧಿಕಾರಿ ಬಳಿ ಉಳಿದ ಒಟ್ಟು ಹಣ ಮತ್ತು ಉಳಿಕೆ ಹಣವನ್ನು ಯಾವ ದಿನಾಂಕದಂದು ಜಮಾ ಮಾಡಲಾಗಿದೆ, ಚೆಕ್ ನಂಬರ್ ಜೊತೆಗೆ ವಿವರ ನೀಡುವುದು ;



(ಆ) ದಿನಾಂಕ:೦೧.೦೧.೨೦೧೯ ರಿಂದ ೩೧.೦೧.೨೦೧೯ರ ಅವಧಿಯಲ್ಲಿ ನಿಲುಗಡೆ ನಿಷೇಧ ಪ್ರದೇಶದಲ್ಲಿ ನಿಲ್ಲಿಸಿದ ವಾಹನಗಳನ್ನು ಟೋಯಿಂಗ್ ಮೂಲಕ ಠಾಣೆಗೆ ತೆಗೆದುಕೊಂಡು ಹೋಗಿ ಸ್ಥಳ ದಂಡ ವಿಧಿಸಿ ಸಂಗ್ರಹಿಸಿದ ಮೊತ್ತವೆಷ್ಟು ; ಸರ್ಕಾರದ ಲೆಕ್ಕ ಶೀರ್ಷಿಕೆಗೆ ಜಮಾ ಮಾಡಿದ ಠಾಣಾವಾರು ವಿವರಗಳನ್ನು (ಎ) ಕ.ಸಂ. (ಬಿ) ಸಂಚಾರಿ ಠಾಣೆಯ ಹೆಸರು (ಸಿ) ಸ್ಥಳ ದಂಢ ವಿಧಿಸಿದ ದಿನಾಂಕ ಮತ್ತು ಸಂಗ್ರಹಿಸಿದ ಒಟ್ಟು ಹಣ (ಡಿ) ಸರ್ಕಾರಿ ಲೆಕ್ಕ ಶೀರ್ಷಿಕೆಗೆ ಜಮಾ ಮಾಡಿದ ಒಟ್ಟು ಹಣ ಮತ್ತು ದಿನಾಂಕ ಚಲನ್ ನಂ (ಇ) ಜಮಾ ಮಾಡಿದ ಲೆಕ್ಕ ಶೀರ್ಷಿಕೆ ಮತ್ತು ಒಟ್ಟು ಹಣ ದಿನಾಂಕ (ಎಫ್) ಜಮಾ ಮಾಡಿದ ದಿನಾಂಕದಂದು ಠಾಣಾಧಿಕಾರಿ ಬಳಿ ಇದ್ದ ಒಟ್ಟು ಹಣ (ಜಿ) ಜಮಾ ಮಾಡಿದ ನಂತರ ಠಾಣಾಧಿಕಾರಿ ಬಳಿ ಉಳಿದ ಒಟ್ಟು ಹಣ ಮತ್ತು ಉಳಿಕೆ ಹಣವನ್ನು ಯಾವ ದಿನಾಂಕದಂದು ಜಮಾ ಮಾಡಲಾಗಿದೆ ಎಂಬ ವಿಷಯಗಳೊಂದಿಗೆ ವಿವರ ನೀಡುವುದು ?

## ಸಂಚಾರಿ ಪೊಲೀಸರು ವಾಹನ ಸವಾರರಿಂದ ದಂಡ ಸಂಗ್ರಹಿಸುತ್ತಿರುವ ಕುರಿತು

**ಶ್ರೀ ಹೆಚ್.ಎಂ. ರೇವಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೨೩೮ (೧೪೯೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಸಂಚಾರಿ ಪೊಲೀಸರು ವಾಹನ ಸವಾರರಿಂದ ಸಂಚಾರಿ ನಿಯಮ ಉಲ್ಲಂಘನೆಗಳಿಂದ ಸ್ಥಳದಲ್ಲೇ ಸಂಗ್ರಹಿಸಿದ ದಂಡದ ಹಣವಷ್ಟು ; (೨೦೧೮–೧೯ ಮತ್ತು ೨೦೧೯–೨೦೨೦ನೇ ಸಾಲಿನಿಂದ ಠಾಣಾವಾರು ವಿವರ ನೀಡುವುದು)

(ಆ) ಬೆಂಗಳೂರು ನಗರ ಸಂಚಾರಿ ಪೊಲೀಸರು ಸ್ಥಳ ದಂಡದಿಂದ ಸಂಗ್ರಹಿಸಿದ ಹಣವನ್ನು ಸರ್ಕಾರಕ್ಕೆ ಪೂರ್ಣವಾಗಿ ಜಮಾ ಮಾಡಲಾಗಿದೆಯೇ ; (ಠಾಣಾವಾರು ವಿವರಗಳನ್ನು ನೀಡುವುದು)

(ಇ) ೨೦೧೮-೧೯ ಮತ್ತು ೨೦೧೯-೨೦೨೦ನೇ ಸಾಲಿನ ಅವಧಿಯಲ್ಲಿ ಪೊಲೀಸ್ ಪ್ರಧಾನ ಕಛೇರಿಯಿಂದ ಆಂತರಿಕ ಲೆಕ್ಕಪರಿಶೋಧನೆ ಕೈಗೊಳ್ಳಲಾಗಿದೆಯೇ; ಲೆಕ್ಕ ಪರಿಶೋಧನಾ ತಂಡದ ತಪಾಸಣೆ ವರದಿ ಪ್ರಕಾರ ಸ್ಥಳದಂಡ ವಸೂಲಾದ ಮರುದಿನ (ರಜಾ ದಿನ ಹೊರತುಪಡಿಸಿ) ಜಮಾ ಮಾಡದೆ ಸರ್ಕಾರದ ಹಣ ದುರುಪಯೋಗ ಪಡಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಠಾಣಾವಾರು ಸರ್ಕಾರಕ್ಕೆ ಜಮಾ ಮಾಡಿದ ದಿನಾಂಕದೊಂದಿಗೆ ರಸೀದಿ/ಚಲನ್ ಸಂಖ್ಯೆ/ ವಿವರಗಳನ್ನು ನೀಡುವುದು)

(ಈ) ಆಡಿಟ್ ವರದಿಯ ಅನ್ವಯ ದುರುಪಯೋಗ ಪಡಿಸಿಕೊಂಡ ಪ್ರಕರಣಗಳಲ್ಲಿ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಅಪರಾಧ ಮೊಕದ್ದಮೆ ದಾಖಲಾಗಿದೆಯೇ; ಮೊಕದ್ದಮೆ ದಾಖಲಿಸದಿದ್ದಲ್ಲಿ ದಾಖಲಿಸದಿರಲು ಕಾರಣವೇನು ?

## ರಾಜ್ಯದ ಸಣ್ಣ ನೀರಾವರಿ ಇಲಾಖೆಗೆ ಕಳೆದ ೩ ವರ್ಷಗಳಿಂದ ಬಿಡುಗಡೆ ಆಗಿರುವ ಅನುದಾನ ಎಷ್ಟು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೩೯ (೧೪೫೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–



(ಅ) ಕಳೆದ ೩ ವರ್ಷಗಳಿಂದ, ರಾಜ್ಯದ ಸಣ್ಣ ನೀರಾವರಿ ಇಲಾಖೆಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು ; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಅನುದಾನದಲ್ಲಿ ಶಿವಮೊಗ್ಗ ಜಿಲ್ಲೆ ಹಾಗೂ ದಾವಣಗೆರೆ ಜಿಲ್ಲೆಯ ಚನ್ನಗಿರಿ ಮತ್ತು ಹೊನ್ನಾಳಿ ತಾಲ್ಲೂಕುಗಳಿಗೆ ಹಂಚಿಕೆ ಮಾಡಿರುವ ಅನುದಾನವೆಷ್ಟು ; ಖರ್ಚು ಮಾಡಲಾದ ಅನುದಾನ ಎಷ್ಟು ? (ವಿವರ ನೀಡುವುದು)

## ಅಲಮಟ್ಟಿ ಅಣೆಕಟ್ಟು ಎತ್ತರಿಸುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೨೪೦ (೧೪೬೬) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಲಮಟ್ಟಿ ಅಣೆಕಟ್ಟನ್ನು ೫೨೪ ಅಡಿಗೆ ಹೆಚ್ಚಿಸುವ ಯೋಜನೆ ಸರ್ಕಾರಕ್ಕಿದೆಯೇ ;

(ಆ) ಹಾಗಿದ್ದಲ್ಲಿ, ಅಣೆಕಟ್ಟು ಎತ್ತರಿಸುವ ಕಾರ್ಯ ಯಾವ ಹಂತದಲ್ಲಿದೆ ;

(ಇ) ಅಲಮಟ್ಟಿ ಅಣೆಕಟ್ಟಿನ ಎತ್ತರವನ್ನು ಹೆಚ್ಚಿಸುವುದರಿಂದ ಮುಳುಗಡೆಯಾಗುವ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆಯೇ ;

(ಈ) ಅಲಮಟ್ಟಿ ಅಣೆಕಟ್ಟಿನ ಎತ್ತರದಿಂದ ಮುಳುಗಡೆಯಾಗುವ ಊರು ಹಾಗೂ ಜಮೀನುಗಳ ವಿವರ ಒದಗಿಸುವುದು ?

## K.S.F.C ಯಿಂದ ಉದ್ಯಮಗಳಿಗೆ ನೀಡುತ್ತಿರುವ ಅನುದಾನದ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೨೪೧ (೧೪೭೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕರ್ನಾಟಕ ರಾಜ್ಯ ಹಣಕಾಸು ಅಭಿವೃದ್ಧಿ ನಿಗಮದಿಂದ ಯಾವ ಯಾವ ಕೈಗಾರಿಕೆ ಹಾಗೂ ಉದ್ಯಮಗಳಿಗೆ ಯಾವ ಯಾವ ಯೋಜನೆಯಡಿಯಲ್ಲಿ ಎಷ್ಟು ಪ್ರಮಾಣದ ಹಣಕಾಸು ನೆರವನ್ನು ನೀಡಲಾಗುತ್ತಿದೆ ; (ವಿವರಗಳನ್ನು ಒದಗಿಸುವುದು)

(ಆ) ಮಹಿಳಾ ಉದ್ಯಮಿಗಳಿಗೆ ಯಾವ ವಿಶೇಷವಾದ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ ?

## ಸಣ್ಣ ಕೈಗಾರಿಕೆಗಳು ಸ್ಥಗಿತಗೊಂಡಿರುವ ಬಗ್ಗೆ

ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–

೧೨೪೨ (೧೪೭೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳು ಸ್ಥಗಿತಗೊಂಡಿದೆ ;(ಜಿಲ್ಲಾವಾರು, ತಾಲ್ಲೂಕುವಾರು ವಿವರಗಳನ್ನು ಒದಗಿಸುವುದು)

(ಆ) ಸ್ಥಗಿತಗೊಂಡಿರುವ ಸಣ್ಣ ಕೈಗಾರಿಕೆಗಳನ್ನು ಪುನಶ್ಚೇತನಗೊಳಿಸಲು ಸರ್ಕಾರದಿಂದ ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ ?



## ನಾರಾಯಣಪುರ ಹಿನ್ನೀರಿನ ಏತ ನೀರಾವರಿ ಯೋಜನೆಯ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೨೪೩ (೧೪೭೭) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆ, ಹುನಗುಂದ ತಾಲ್ಲೂಕಿನ ನಾರಾಯಣಪುರ ಹಿನ್ನೀರಿನಿಂದ ಏತ ನೀರಾವರಿ ಯೋಜನೆಯ ಬದಲಾಗಿ ಹನಿ ನೀರಾವರಿ ಯೋಜನೆಯನ್ನು ಮಾಡಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಈ ಯೋಜನೆಯನ್ನು ಎಷ್ಟು ಎಕರೆ ಜಮೀನು ನೀರಾವರಿಗೆ ಒಳಪಟ್ಟಿರುತ್ತದೆ ? (ವಿವರ ಒದಗಿಸುವುದು)

## ಎಂ.ಎಸ್.ಐ.ಎಲ್ ಮಳಿಗೆಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೧೨೪೪ (೧೫೨೦) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಿಂದ ಬಾಗಲಕೋಟೆ ಹಾಗೂ ವಿಜಯಪುರ ಜಿಲ್ಲೆಗಳಲ್ಲಿ ಎಂ.ಎಸ್.ಐ.ಎಲ್. ವತಿಯಿಂದ ತೆರೆಯಲಾದ ಮಳಿಗೆಗಳೆಷ್ಟು ; (ಪೂರ್ಣ ಮಾಹಿತಿ ನೀಡುವುದು)

(ಆ) ಜಮಖಂಡಿ ಹಾಗೂ ಬಬಲೇಶ್ವರ ತಾಲ್ಲೂಕಿನಲ್ಲಿ ಎಂ.ಎಸ್.ಐ.ಎಲ್. ವತಿಯಿಂದ ಎಷ್ಟು ಮಳಿಗೆಗಳನ್ನು ತೆರೆಯಲಾಗಿದೆ ; (ಪೂರ್ಣ ವಿವರ ನೀಡುವುದು)

(ಇ) ಸದರಿ ತಾಲ್ಲೂಕುಗಳಲ್ಲಿ ಖಾಲಿ ಇರುವ ಎಂ.ಎಸ್.ಐ.ಎಲ್. ಮಳಿಗೆಗಳೆಷ್ಟು ; (ಪೂರ್ಣ ವಿವರ ನೀಡುವುದು)

(ಈ) ಸದರಿ ತಾಲ್ಲೂಕುಗಳಲ್ಲಿ ಎಷ್ಟು ಎಂ.ಎಸ್.ಐ.ಎಲ್ ಮಳಿಗೆಗಳನ್ನು ತೆರೆಯಲು ಉದ್ದೇಶಿಸಿದೆ ; ಮತ್ತು ಯಾವ ಯಾವ ಊರುಗಳಲ್ಲಿ ತೆರೆಯಲು ಉದ್ದೇಶಿಸಿದೆ ? (ಸಂಪೂರ್ಣ ವಿವರ ನೀಡುವುದು)

## F D A & S D A ಹುದ್ದೆಗಳ ಪರೀಕ್ಷೆಗೆ ನಿಗಧಿಪಡಿಸಿದ ಹೆಚ್ಚಿನ ಶುಲ್ಕದ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೨೪೫ (೧೫೫೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) KPSC ನಡೆಸುವ FDA ಮತ್ತು SDA (HK, Non-HK) ಹುದ್ದೆಗಳನ್ನು ಈ ಹಿಂದೆ ಒಂದೇ ಅಧಿಸೂಚನೆಯಲ್ಲಿ ನೇಮಕಾತಿಯನ್ನು ಮಾಡಿಕೊಳ್ಳುತ್ತಿದ್ದು, ಪ್ರಸ್ತುತ ವರ್ಷದಿಂದ HK ಮತ್ತು Non-HK ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲು ಪ್ರತ್ಯೇಕವಾಗಿ ಅಧಿಸೂಚನೆ ಹೊರಡಿಸಲು ಕಾರಣವೇನು ;

(ಆ) ಈ ಹುದ್ದೆಗಳಿಗಾಗಿ ಅಭ್ಯರ್ಥಿಗಳು ಎರಡೆರಡು ಬಾರಿ ಶುಲ್ಕ ಪಾವತಿಸಿ ಅರ್ಜಿಸಲ್ಲಿಸಬೇಕಾಗಿದ್ದು; ಒಂದೇ ಅಧಿಸೂಚನೆಯಲ್ಲಿ HK ಮತ್ತು Non-HK ಹುದ್ದೆಗಳಿಗೆ ಅರ್ಜಿ ಕರೆಯಲು ಸರ್ಕಾರಕ್ಕಿರುವ ತೊಂದರೆ ಏನು ;

(ಇ) ಅಲ್ಲದೇ ಈ ಹಿಂದೆ ಒಂದು ಪರೀಕ್ಷೆಗೆ ೧೫೦ ರೂ ಶುಲ್ಕವನ್ನು ನಿಗಧಿಪಡಿಸಲಾಗಿತ್ತು, ಅದರೆ ಪ್ರಸ್ತುತ ವರ್ಷದಿಂದ HK ಮತ್ತು Non-HK ಹುದ್ದೆಗಳನ್ನು ನೇಮಕ ಮಾಡಲು ಪ್ರತ್ತೇಕವಾಗಿ ಅಧಿಸೂಚನೆ ಹೊರಡಿಸಿದ್ದಲ್ಲದೇ, ಒಂದು ಪರೀಕ್ಷೆಗೆ ೩೦೦ ರೂ. ಶುಲ್ಕವನ್ನು ನಿಗಧಿ ಮಾಡಲಾಗಿರುವುದರಿಂದ ಗ್ರಾಮೀಣ ಭಾಗದ



ಬಡ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಸಲು ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಏಕೆ ಕ್ರಮ ಕೈಗೊಂಡಿರುವುದಿಲ್ಲ ?

## KPSC-GP ಹುದ್ದೆಗಳ ನೇಮಕಾತಿಯ ಗೊಂದಲಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೨೪೬ (೧೫೬೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) KPSC 2011 ರ ರದ್ದಾದ ೩೬೨ ಕೆ.ಎ.ಎಸ್. ಗೆಜೆಟೆಡ್ ಪ್ರೊಬೆಷನರಿ ಹುದ್ದೆಗಳಿಗೆ ಹೊಸ ನೇಮಕಾತಿ ಅಧಿಸೂಚನೆ ಹೊರಡಿಸುವುದು ಯಾವಾಗ ;

(ಆ) ೨೦೧೧ನೇ ಸಾಲಿನ ನೇಮಕಾತಿ ಗೊಂದಲ ಇತ್ಯಾರ್ಥವಾಗದೆ ಸರ್ಕಾರ ಹೊಸದಾಗಿ ೨೦೧೭-೧೮ನೇ ಸಾಲಿನ KAS-GP ೧೦೬ ಹುದ್ದೆಗಳಿಗೆ ಆತುರವಾಗಿ ಅಧಿಸೂಚನೆ ಹೊರಡಿಸಲು ಕಾರಣವೇನು ;

(ಇ) ೨೦೧೧ರಲ್ಲಿ ಅರ್ಜಿ ಸಲ್ಲಿಸಿದ್ದು ಪ್ರಸ್ತುತ ವಯೋಮಿತಿ ಮೀರಿದ ಅಭ್ಯರ್ಥಿಗಳು ಈ ಹೊಸ ನೇಮಕಾತಿಗೆ ಅರ್ಜಿ ಸಲ್ಲಿಸಬಹುದೇ; (ವಿವರ ನೀಡುವುದು)

(ಈ) ಪ್ರಸ್ತುತ ರಾಜ್ಯದಲ್ಲಿ ಖಾಲಿ ಇರುವ ಹುದ್ದೆ AC, DySP ತಹಶೀಲ್ದಾರ್ ಸೇರಿದಂತೆ (೨೦೧೭-೧೮ನೇ ಸಾಲಿನ KAS-GP ಹುದ್ದೆಗಳನ್ನು ಹೊರುತುಪಡಿಸಿ) ; ಒಟ್ಟು ಖಾಲಿ ಇರುವ ಕೆ.ಎ.ಎಸ್ ಗೆಜೆಟೆಡ್ ಪ್ರೊಬೆಷನರಿ (ಗ್ರೂಪ್-'ಎ' ಮತ್ತು ಗ್ರೂಪ್-'ಬಿ') ಹುದ್ದೆಗಳು ಎಷ್ಟು ; ಹುದ್ದೆಗಳಿಗೆ ಅನುಸಾರವಾಗಿ ವಿವರ ನೀಡುವುದು ;

(ಉ) PC ಹೋಟಾ ಸಮಿತಿಯ ಶಿಫಾರಸ್ಸಿಗೆ ಅನುಗುಣವಾಗಿ UPSC (ಕೇಂದ್ರ ಲೋಕ ಸೇವಾ ಆಯೋಗ) ಯಂತೆ KPSC ಯೂ ಸ್ಪರ್ಧಾತ್ಮಕ ಪರೀಕ್ಷೆಯನ್ನು ಬರೆಯುವ ಅಭ್ಯರ್ಥಿಗಳಿಗೆ ಅನುಕೂಲವಾಗಲೆಂದು ಪ್ರತಿ ವರ್ಷದ ನೇಮಕಾತಿಯ ಕ್ಯಾಲೆಂಡರನ್ನು ಬಿಡುಗಡೆ ಮಾಡುತ್ತಿದ್ದು ಕಳೆದ ನಾಲ್ಕು ವರ್ಷಗಳಿಂದ KPSC ಯೂ ನೇಮಕಾತಿ ಕ್ಯಾಲೆಂಡರನ್ನು ಬಿಡುಗಡೆ ಮಾಡದೇ ಇರಲು ಕಾರಣವೇನು ? (ವಿವರ ನೀಡುವುದು)

## ಕೃಷ್ಣ ಮೇಲ್ದಂಡೆ ಯೋಜನೆಗಾಗಿ ಒದಗಿಸಲಾಗಿರುವ ಅನುದಾನದ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೨೪೭ (೧೪೭೮) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೦೫ ವರ್ಷಗಳಲ್ಲಿ ಕೃಷ್ಣಾ ಮೇಲ್ದಂಡೆ ಯೋಜನೆಗಾಗಿ ಎಷ್ಟು ಹಣ ಒದಗಿಸಲಾಗಿದೆ ;

(ಆ) ಅವುಗಳಲ್ಲಿ ಯಾವ ಯಾವ ಕಾಮಗಾರಿಗಳಿಗೆ ಎಷ್ಟು ಹಣ ಬಳಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಅವುಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ;

(ಈ) ಅವುಗಳ ಪ್ರಗತಿ ಯಾವ ಹಂತದಲ್ಲಿವೆ ? (ಸಂಪೂರ್ಣ ಮಾಹಿತಿ ನೀಡುವುದು)



## ಪೊಲೀಸ್ ಸಿಬ್ಬಂದಿಗೆ ವಾರದ ರಜೆ ಭತ್ಯೆ ಮತ್ತು ಸಾರ್ವತ್ರಿಕ ರಜೆ ವೇತನ ನೀಡಿಕೆ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೨೪೮ (೧೫೨೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೊಲೀಸ್ ಇಲಾಖೆಯ ಪಿ.ಸಿ. ಹುದ್ದೆಯಿಂದ ಹೆಚ್.ಸಿ ಹುದ್ದೆಯವರೆಗಿನ ಸಿಬ್ಬಂದಿಗೆ ಎಷ್ಟು ಮೊತ್ತದ ವಾರದ ರಜೆ ಭತ್ಯೆಯನ್ನು ತಲಾ ನೀಡಲಾಗುತ್ತಿದೆ ; (ವಿವರ ನೀಡುವುದು)

(ಆ) ಎ.ಎಸ್.ಐ ಮತ್ತು ಪಿ.ಎಸ್.ಐ ಗಳಿಗೆ ವಾರದ ರಜೆ ಭತ್ಯೆಯನ್ನು ನೀಡದಿರಲು ಕಾರಣಗಳೇನು ;

(ಇ) ಎ.ಎಸ್.ಐ ಮತ್ತು ಪಿ.ಎಸ್.ಐ ಗಳಿಗೂ ವಾರದ ರಜೆ ಭತ್ಯೆಯನ್ನು ವಿಸ್ತರಿಸಲು ಹಾಗೂ ವಾರದ ರಜಾ ಭತ್ಯೆಯನ್ನು ಪರಿಷ್ಕರಿಸಲು ಸರ್ಕಾರ ಚಿಂತಿಸುವುದೇ ;

(ಈ) ಎ.ಎಸ್.ಐ ಮತ್ತು ಪಿ.ಎಸ್.ಐ ಗಳಿಗೆ ೧೫ ದಿನಗಳ ಸಾರ್ವತ್ರಿಕ ರಜೆ ವೇತನವನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಸದರಿಯವರಿಗೆ ಒಂದು ತಿಂಗಳು ಸಾರ್ವತ್ರಿಕ ರಜೆ ವೇತನವನ್ನು ನೀಡದಿರಲು ಕಾರಣಗಳೇನು ;

(ಊ) ಯಾವ ಕಾಲಮಿತಿಯಲ್ಲಿ ಸದರಿ ವೇತನವನ್ನು ವಿಸ್ತರಿಸಲಾಗುವುದು ?

## ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಮರ ಕಡಿದು ಸಸಿ ನೆಟ್ಟ ಕುರಿತು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೨೪೯ (೧೫೨೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಕಳೆದ ಮೂರು ವರ್ಷಗಳಿಂದ ಕಡಿಯಲಾದ ಮರಗಳ ಸಂಖ್ಯೆ ಎಷ್ಟು ;

(ಆ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ನೆಟ್ಟ ಸಸಿಗಳ ಸಂಖ್ಯೆ ಎಷ್ಟು ;

(ಇ) ಸಸಿ ನೆಡುವ ಯೋಜನೆಯಲ್ಲಿ ಕಳಪೆ ಕಾಮಗಾರಿ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಾದಲ್ಲಿ ಈ ಸಂಬಂಧ ತೆಗೆದುಕೊಂಡ ಕ್ರಮಗಳೇನು ;

(ಉ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕರ್ನಾಟಕ ವೃಕ್ಷ ಸಂರಕ್ಷಣಾ ಕಾಯ್ದೆ ೧೯೭೬ರಡಿ ನಾಗರಿಕರಿಗೆ ಸ್ವಂತ ನಿವೇಶನದಲ್ಲಿ ಸ್ವಾಭಾವಿಕವಾಗಿ ಬೆಳೆದ ಮರ ಹಾಗೂ ಕೊಂಬೆ ಕಡಿಯಲು ಅಧಿಕಾರಿಗಳು ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಹಾಗಾದಲ್ಲಿ ಇದನ್ನು ತಡೆಗಟ್ಟಲು ತೆಗೆದುಕೊಂಡ ಕ್ರಮಗಳಾವುವು ?

## ಬೆಂಗಳೂರು ಜಲಮಂಡಳಿಯಿಂದ ವಾರ್ಡ್–೫ಕ್ಕೆ ಕಾವೇರಿ ನೀರು ಮತ್ತು ಸಿವಿಯೆಜ್ (ಯು.ಜಿ.ಡಿ) ಸಂಪರ್ಕ ಕಲ್ಪಿಸುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೨೫೦ (೧೫೨೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–



(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಜಕ್ಕೂರು ವಾರ್ಡ್ ಸಂಖ್ಯೆ–೫ರಲ್ಲಿ ಬರುವ ಶ್ರೀನಿವಾಸಪುರ ಬಂಡೆ ರಸ್ತೆ ಮತ್ತು ಅಕ್ಕಪಕ್ಕದ ಬಡಾವಣೆಗಳಿಗೆ ಬೆಂಗಳೂರು ಜಲಮಂಡಳಿಯಿಂದ ಕಾವೇರಿ ನೀರು ಹಾಗೂ ಸಿವಿಯೆಜ್ (ಯು.ಜಿ.ಡಿ) ಸಂಪರ್ಕವನ್ನು ಕಲ್ಪಿಸಲಾಗಿದೆಯೇ ;

(ಆ) ಇಲ್ಲದಿದ್ದಲ್ಲಿ, ಇಲ್ಲಿಯವರೆಗೂ ಕಾವೇರಿ ನೀರು ಹಾಗೂ ಸಿವಿಯೆಜ್ (ಯು.ಜಿ.ಡಿ) ಸಂಪರ್ಕವನ್ನು ಕಲ್ಪಿಸದಿರಲು ಕಾರಣಗಳೇನು ; ಮತ್ತು ಯಾವ ಕಾಲಮಿತಿಯೊಳಗೆ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು ?

## ವಿದ್ಯುಚ್ಛಕ್ತಿ ಉತ್ಪಾದನೆ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–

೧೨೫೧ (೧೫೨೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಯಾವ ಯಾವ ಮೂಲದಿಂದ ಎಷ್ಟು ಪ್ರಮಾಣದ ವಿದ್ಯುಚ್ಛಕ್ತಿಯನ್ನು ಉತ್ಪಾದನೆ ಮಾಡಲಾಗುತ್ತಿದೆ ; (ಪ್ರತ್ಯೇಕವಾಗಿ ಪೂರ್ಣ ವಿವರ ನೀಡುವುದು)

(ಆ) ರಾಜ್ಯಕ್ಕೆ ಅಗತ್ಯವಿರುವ ವಿದ್ಯುತ್ ಪ್ರಮಾಣವೆಷ್ಟು ;

(ಇ) ಹೊಸದಾಗಿ ವಿದ್ಯುಚ್ಛಕ್ತಿ ಉತ್ಪಾದನೆಗೆ ಸರ್ಕಾರ ಕೈಗೊಂಡಿರುವ ಯೋಜನೆಗಳೇನು ;

(ಈ) ಸದರಿ ಯೋಜನೆಯ ಅಂದಾಜು ಮೊತ್ತವೆಷ್ಟು ; (ಪೂರ್ಣ ವಿವರ ನೀಡುವುದು)

(ಉ) ರೈತರ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುಚ್ಛಕ್ತಿ ಸೌಲಭ್ಯವನ್ನು ಕಲ್ಪಿಸಲಾಗುತ್ತಿದೆಯೇ ; ಇದಕ್ಕೆ ಅನುಸರಿಸುತ್ತಿರುವ ಮಾನದಂಡಗಳೇನು ;

(ಊ) ರೈತರ ಪಂಪ್‌ಸೆಟ್‌ಗಳಿಗೆ ಯಾವ ಪ್ರಮಾಣದ ವಿದ್ಯುತ್‌ನ್ನು ಪ್ರತಿನಿತ್ಯ ಎಷ್ಟು ಸಮಯದವರೆಗೆ ನೀಡಲಾಗುತ್ತಿದೆ ?

## ಬೆಂಗಳೂರು ನಗರದ ಚುಂಚಘಟ್ಟ ಕೆರೆಗೆ ಒಳಚರಂಡಿ ನೀರು ಹರಿಯುತ್ತಿರುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೫೨ (೧೪೪೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚಿಗೆ ಅಭಿವೃದ್ಧಿ ಪಡಿಸಲಾದ ಬಿಬಿಎಂಪಿ ವ್ಯಾಪ್ತಿಯಲ್ಲಿ ಬರುವ "ಚುಂಚಘಟ್ಟ" ಕೆರೆಗೆ ಒಳಚರಂಡಿಯ ನೀರು ಹರಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಒಳಚರಂಡಿಯ ನೀರು ಚುಂಚಘಟ್ಟ ಕೆರೆಗೆ ಹರಿಯುವುದನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರವನ್ನು ನೀಡುವುದು)

## ಬೆಂಗಳೂರು ನಗರದಲ್ಲಿ ಪಾದಚಾರಿ ರಸ್ತೆಗಳ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೫೩ (೧೪೭೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–



(ಅ) ಬೆಂಗಳೂರು ನಗರ ವ್ಯಾಪ್ತಿಯ ಬಹುತೇಕ ಕಡೆಗಳಲ್ಲಿ ಪಾದಚಾರಿ ರಸ್ತೆಗಳಿಲ್ಲದೆ ಸಾರ್ವಜನಿಕರು ಓಡಾಡಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸಾರ್ವಜನಿಕರಿಗೆ ಆಗುತ್ತಿರುವ ಈ ತೊಂದರೆಯನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿರುತ್ತದೆ ?

## ಬೀದರ್ ಜಿಲ್ಲೆಯ ಪತ್ರಕರ್ತರ ಮೇಲಿನ ಪ್ರಕರಣದ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೫೪ (೧೪೭೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿರುವ ಶಾಹೀನ ಶಿಕ್ಷಣ ಸಂಸ್ಥೆಯಲ್ಲಿ ಪ್ರದರ್ಶನಗೊಂಡ ನಾಟಕವನ್ನು ಪತ್ರಕರ್ತರೊಬ್ಬರು ಅವರ ಫೇಸ್ ಬುಕ್‌ನಲ್ಲಿ ನೇರ ಪ್ರಸಾರ ಮಾಡಿರುವುದು ಸರಿಯೇ ;

(ಆ) ಸರಿಯಿಲ್ಲದ್ದಿದಲ್ಲಿ ಅದಕ್ಕೆ ಆಧಾರ ನೀಡುವುದು ;

(ಇ) ಇದು ಪತ್ರಿಕಾ ರಂಗದ ಸ್ವಾತಂತ್ರಕ್ಕೆ ಧಕ್ಕೆ ಉಂಟು ಮಾಡಿದಂತಲ್ಲವೆ ; ಈ ಪತ್ರಕರ್ತರ ಮೇಲೆ ದಾಖಲಾದ ಪ್ರಕರಣಗಳನ್ನು ಹಿಂಪಡೆಯುವ ಉದ್ದೇಶ ಸರ್ಕಾರಕ್ಕೆ ಇದೆಯೇ ?

## ಬೀದರ್ ಜಿಲ್ಲೆಯ ಕೆರೆಗಳ ಸಂಖ್ಯೆ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೫೫ (೧೫೧೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿರುವ ಒಟ್ಟು ಕೆರೆಗಳ ಸಂಖ್ಯೆ ಎಷ್ಟು ; ಅವು ಯಾವುವು ; ಮತ್ತು ಎಲ್ಲೆಲ್ಲಿ ಇವೆ ; (ತಾಲ್ಲೂಕುವಾರು, ಗ್ರಾಮವಾರು ವಿವರ ನೀಡುವುದು)

(ಆ) ಇವುಗಳಲ್ಲಿ ನೀರು ತುಂಬಿರುವ ಕೆರೆಗಳ ಸಂಖ್ಯೆ ಎಷ್ಟು ; ಮತ್ತು ಖಾಲಿ ಇರುವ ಕೆರೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು, ಗ್ರಾಮವಾರು ವಿವರ ನೀಡುವುದು)

(ಇ) ಕಳೆದ ೨ ವರ್ಷಗಳಲ್ಲಿ ಕೆರೆಗಳ ಹೂಳು ತೆಗೆಯಲು ಬಿಡುಗಡೆಯಾದ ಅನುದಾನ ಎಷ್ಟು ; ಮತ್ತು ಎಷ್ಟು ಕೆರೆಗಳ ಹೂಳು ತೆಗೆಯಲಾಗಿದೆ ; ಹೂಳು ತೆಗೆಯಲಾದ ಕೆರೆಗಳ ಹಾಗೂ ಬಾಕಿ ಇರುವ ಕೆರೆಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು, ಗ್ರಾಮವಾರು, ಕೆರೆಗಳವಾರು, ಅನುದಾನ ಸಮೇತ ಸಂಪೂರ್ಣ ವಿವರ ನೀಡುವುದು)

## ಬೀದರ್ ಜಿಲ್ಲೆಯ ಅಭಿವೃದ್ಧಿಗೆ ಕೈಗೊಂಡ ಯೋಜನೆಗಳ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೫೬ (೧೫೧೨) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಜಲಸಂಪನ್ಮೂಲ ಇಲಾಖೆಯಿಂದ ಅಭಿವೃದ್ಧಿಗಾಗಿ ಕೈಗೊಂಡ ಯೋಜನೆಗಳಾವುವು ; ಇದಕ್ಕೆ ಬಿಡುಗಡೆಯಾದ ಅನುದಾನ ಎಷ್ಟು ; ಪೂರ್ಣಗೊಂಡ ಕಾಮಗಾರಿಗಳು ಎಷ್ಟು ; ಅಪೂರ್ಣಗೊಂಡ ಕಾಮಗಾರಿಗಳು ಎಷ್ಟು ; (ತಾಲ್ಲೂಕುವಾರು, ಕಾಮಗಾರಿವಾರು ಸಂಪೂರ್ಣ ಮಾಹಿತಿ ನೀಡುವುದು)



(ಆ) ಬೀದರ್ ಜಿಲ್ಲೆಯ ಕಾರಂಜ ಡ್ಯಾಂನ ಕಾಲುವೆಗಳು ಸಂಪೂರ್ಣ ಹಾಳಾಗಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಯಾವ ಕ್ರಮ ಕೈಗೊಳ್ಳಲಾಗಿದೆ ? (ಕಾಮಗಾರಿವಾರು, ಅನುದಾನವಾರು ಸಂಪೂರ್ಣ ವಿವರ ನೀಡುವುದು)

## ಬೀದರ್ ಜಿಲ್ಲೆಯ ಸಣ್ಣ ನೀರಾವರಿ ಯೋಜನೆ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೫೭ (೧೫೧೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಣ್ಣ ನೀರಾವರಿ ಇಲಾಖೆಯಲ್ಲಿರುವ ವಿವಿಧ ಯೋಜನೆಗಳಾವುವು ; ಬಿಡುಗಡೆ ಮಾಡಲಾದ ಅನುದಾನ ಎಷ್ಟು ; ಜಿಲ್ಲಾವಾರು, ಯೋಜನಾವಾರು ವಿವರ ನೀಡುವುದು ; (ಬೀದರ್ ಜಿಲ್ಲೆಯ ತಾಲ್ಲೂಕುವಾರು ಫಲಾನುಭವಿಗಳವಾರು, ಯೋಜನಾವಾರು ಪ್ರತ್ಯೇಕ ವರದಿ ನೀಡುವುದು)

(ಆ) ಬೀದರ್ ಜಿಲ್ಲೆಯಲ್ಲಿ ಕಳೆದ ವರ್ಷದಿಂದ ಇಲ್ಲಿಯವರೆಗೆ ಎಷ್ಟು ಚೆಕ್ ಡ್ಯಾಂಗಳನ್ನು ಮಂಜೂರು ಮಾಡಲಾಗಿದೆ ; ಪ್ರತಿ ಚೆಕ್ ಡ್ಯಾಂಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ; ಮತ್ತು ಇವುಗಳಲ್ಲಿ ಎಷ್ಟು ಪೂರ್ಣಗೊಂಡಿವೆ ; ಹಾಗೂ ಅಪೂರ್ಣಗೊಂಡ ಚೆಕ್ ಡ್ಯಾಂಗಳೆಷ್ಟು ; ಇದಕ್ಕೆ ಕಾರಣವೇನು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬೀದರ್ ಜಿಲ್ಲೆಯಲ್ಲಿ ಚೆಕ್ ಡ್ಯಾಂ ಕಾಮಗಾರಿಗಳಲ್ಲಿ ಅವ್ಯವಹಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ಬೀದರ್ ಜಿಲ್ಲೆಯ ಕಾರಂಜಾ ಸಂತ್ರಸ್ಥರಿಗೆ ಪರಿಹಾರದ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೫೮ (೧೪೭೩) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಬೀದರ್ ಜಿಲ್ಲೆಯ ಕಾರಂಜಾ ಯೋಜನೆಯಲ್ಲಿ ಸಂತ್ರಸ್ತ ರೈತರಿಗೆ ಪರಿಹಾರ ಒದಗಿಸುವ ವಿಚಾರ ಸರ್ಕಾರದಲ್ಲಿ ಯಾವ ಹಂತಕ್ಕೆ ಬಂದಿದೆ ; ಬಂದಿದ್ದರೆ, ರೈತರಿಗೆ ಪರಿಹಾರ ಒದಗಿಸುವುದು ಯಾವಾಗ ; ಪರಿಹಾರ ದೊರಕದಿದ್ದರೆ ಇದಕ್ಕೆ ಮುಖ್ಯ ಕಾರಣವೇನು ?

## ವಿವಿಧ ಇಲಾಖೆಯಲ್ಲಿ ಹುದ್ದೆಗಳು ಖಾಲಿ ಇರುವ ಬಗ್ಗೆ

**ಶ್ರೀ ಆಯನೂರು ಮಂಜುನಾಥ್ (ಪದವೀಧರರ ಕ್ಷೇತ್ರ) :–**

೧೨೫೯ (೧೪೫೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೫ ವರ್ಷಗಳಿಂದ ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ಒಟ್ಟು ಸಂಖ್ಯೆಯೆಷ್ಟು ;

(ಆ) ವಿವಿಧ ಇಲಾಖೆಯಲ್ಲಿ ಖಾಲಿ ಇರುವ ಸಿ–ದರ್ಜೆ, ಬಿ–ದರ್ಜೆ, ಎ–ದರ್ಜೆ, ಹುದ್ದೆಗಳ ವಿವರ ಒದಗಿಸುವುದು ;

(ಇ) ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳು ಕಳೆದ ಎಷ್ಟು ವರ್ಷಗಳಿಂದ ಭರ್ತಿಯಾಗದೆ ಬಾಕಿ ಉಳಿದಿದೆ ; ನೇಮಕಾತಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲು ಕಾರಣವೇನು ;



(ಈ) ಸರ್ಕಾರ ನೇರ ನೇಮಕಾತಿ ಮಾಡಿಕೊಳ್ಳದೇ ಗುತ್ತಿಗೆ ಆಧಾರದ ಮೇಲೆ ಮಾನವ ಸೇವೆ ನೀಡುವ ಸಂಸ್ಥೆಗಳಿಗೆ ಅವಕಾಶ ಕಲ್ಪಿಸಿಕೊಡಲು ಕಾರಣವೇನು ;

(ಉ) ಮಾನವ ಸೇವೆ ನೀಡುತ್ತಿರುವ ಏಜೆನ್ಸಿಗಳು ಸರ್ಕಾರಕ್ಕೆ ಮಾಡುತ್ತಿರುವ ನಷ್ಟಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಗುತ್ತಿಗೆ ಆಧಾರದ ಮೇಲೆ ನೇಮಕವಾಗಿರುವ ಹಾಗೂ ಟೆಂಡರ್ ನೀಡಿರುವ ಏಜೆನ್ಸಿಗಳು ಒದಗಿಸುತ್ತಿರುವ ಮಾನವ ಸೇವೆಯಲ್ಲಿ ವ್ಯತ್ಯಾಸವಾಗಿ ಸರ್ಕಾರಕ್ಕೆ ಆಗುವ ನಷ್ಟವನ್ನು ಭರಿಸುವವರ್ಯಾರು ?

## ಬಿ.ಬಿ.ಎಂ.ಪಿ. ಅಧಿಕಾರಿಗಳ ವೇತನದಲ್ಲಿ ಸಾಮಾನ್ಯ ಭವಿಷ್ಯ ನಿಧಿಯ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೬೦ (೧೪೩೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೦ ರಿಂದ ೨೦೧೮ ರ ಅವಧಿಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ನಿಯೋಜನೆಯ ಮೇರೆಗೆ ಕೇಂದ್ರ ಕಛೇರಿಯಲ್ಲಿ ಕಾರ್ಯನಿರ್ವಹಿಸಿದ ಅಭಿಯಂತರರುಗಳು, ನೌಕರರುಗಳು ಹಾಗೂ ಅಧಿಕಾರಿಗಳ ವೇತನದಲ್ಲಿ ಸಾಮಾನ್ಯ ಭವಿಷ್ಯನಿಧಿ ಬಾಬ್ತು ಕಟಾವು ಮಾಡಿದ ಮೊತ್ತವನ್ನು ಸಂಬಂಧಪಟ್ಟವರ ಖಾತೆಗೆ ಜಮಾ ಮಾಡಿರುವ ಸಂಪೂರ್ಣ ವಿವರವನ್ನು ನೀಡುವುದು ;

(ಆ) ಸದರಿ ಅವಧಿಯಲ್ಲಿ ಅಭಿಯಂತರುಗಳು, ನೌಕರರುಗಳು ಹಾಗೂ ಅಧಿಕಾರಿಗಳ ವೇತನದಲ್ಲಿ ಸಾಮಾನ್ಯ ಭವಿಷ್ಯನಿಧಿ ಬಾಬ್ತು ಕಠಾವು ಮಾಡಿದ ಮೊತ್ತವನ್ನು ಸಂಬಂಧಪಟ್ಟವರ ಖಾತೆಗೆ ಜಮಾ ಮಾಡಿರುವ ಮತ್ತು ಜಮಾ ಮಾಡದಿರುವ ವಿವರ ಒದಗಿಸುವುದು ; (ವಿವರಗಳ ಪ್ರತಿ ಅಧಿಕಾರಿಯ ಹೆಸರು, ಪದನಾಮ ಹಾಗೂ ಖಾತೆಗೆ ಜಮಾ ಮಾಡಿರುವ ಮತ್ತು ಜಮಾ ಮಾಡದಿರುವ ವಿವರ ದಿನಾಂಕದೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

(ಇ) ಈ ವಿಷಯವನ್ನು ನಿರ್ವಹಿಸುತ್ತಿದ್ದ ವಿಷಯ ನಿರ್ವಾಹಕರು ಹಾಗೂ ಸಂಬಂಧಪಟ್ಟ ಅಧಿಕಾರಿಗಳ ವಿವರ ಮತ್ತು ಕರ್ತವ್ಯ ನಿರ್ಲಕ್ಷ್ಯ ಮಾಡಿದ್ದಲ್ಲಿ ಅಂತವರ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮದ ಬಗ್ಗೆ ವಿವರ ನೀಡುವುದು ;

(ಈ) ನೊಂದ ಅಭಿಯಂತರರುಗಳು, ನೌಕರರುಗಳು ಹಾಗೂ ಅಧಿಕಾರಿಗಳು ಈವರೆಗೆ ಸಲ್ಲಿಸಿರುವ ಮನವಿಗಳ ವಿವರ ಮತ್ತು ತೆಗೆದುಕೊಂಡಿರುವ ಕ್ರಮದ ಬಗ್ಗೆ ವಿವರ ನೀಡುವುದು ?

## ಗೂಳೂರು ಬೆಟ್ಟದ ಬಳಿ ೧೫೦ ಮೀ.ಉದ್ದದ ಮೇಲ್ಗಾಲುವೆಯನ್ನು ನಿರ್ಮಿಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೬೧ (೧೪೩೫) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–



(ಅ) ಮಂಡ್ಯ ಜಿಲ್ಲೆ ಕೆರೆಗೂಡು ಹೋಬಳಿ ಚಿಕ್ಕಬಳ್ಳಿ ಕೆರೆಯ ಪಿಕಪ್ ನಾಲೆಯ ಅಭಿವೃದ್ಧಿ ಕಾಮಗಾರಿ ಅಂದಾಜಿನಲ್ಲಿ ಗೂಳೂರು ಬೆಟ್ಟದ ಬಳಿ ೧೫೦ ಮೀ. ಉದ್ದದ ಮೇಲ್ಗಾಲುವೆಯನ್ನು ನಿರ್ಮಿಸುವ ಸಂಬಂಧ ಸಮೀಕ್ಷಾ ಕಾರ್ಯ ಕೈಗೊಂಡು, ವಿನ್ಯಾಸ ಹಾಗೂ ಸಾಧ್ಯಸಾಧ್ಯತೆ ಬಗ್ಗೆ ಪರಿಶೀಲನೆ ನಡೆಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಸಮೀಕ್ಷಾ ಕಾರ್ಯ ಹಾಗೂ ಸಾಧ್ಯಸಾಧ್ಯತೆಯ ವರದಿಯ ಅಂಶಗಳೇನು ; (ವರದಿಯ ಪ್ರತಿ ಒದಗಿಸುವುದು)

(ಇ) ಸದರಿ ಕಾಮಗಾರಿಯನ್ನು ಯಾವಾಗ ಆರಂಭಿಸಲಾಗುವುದು ; ಯಾವಾಗ ಪೂರ್ಣಗೊಳಿಸಲಾಗುವುದು ; ಕಾಮಗಾರಿ ಪೂರ್ಣಗೊಳಿಸಲು ಕಾಲಮಿತಿ ಹಾಕಿಕೊಳ್ಳಲಾಗಿದೆಯೇ ; ಯಾವ ಸಂಸ್ಥೆಗೆ ಟೆಂಡರ್ ನೀಡಲಾಗಿದೆ ;

(ಈ) ದುಸ್ಥಿತಿಯಲ್ಲಿರುವ ತೂಬುಗಳನ್ನು ದುರಸ್ಥಿಗೊಳಿಸಿ ಖಾಯಂ ತೂಬುಗಳನ್ನು ಅಳವಡಿಸಲಾಗಿದೆಯೇ ; ಹಾಗಿದ್ದಲ್ಲಿ, ಖಾಯಂ ತೂಬುಗಳನ್ನು ಎಲ್ಲೆಲ್ಲಿ ಅಳವಡಿಸಲಾಗಿದೆ ? (ವಿವರ ನೀಡುವುದು)

## ಅಚ್ಚುಕಟ್ಟು ಪ್ರದೇಶದ ಕುರಿತು

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೬೨ (೧೫೨೨) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೇಮಾವತಿ ಜಲಾಶಯದಿಂದ ನಾಗಮಂಗಲ ತಾಲ್ಲೂಕಿಗೆ ನೀರಾವರಿ ಸೌಲಭ್ಯಗಳು ಮಂಜೂರಾಗಿರುವುದು ಯಾವಾಗ ; ಕಾರ್ಯರಂಭವಾಗಿದ್ದು ಯಾವಾಗ;

(ಆ) ನಾಗಮಂಗಲ ತಾಲ್ಲೂಕಿಗೆ ಎಷ್ಟು ಅಚ್ಚುಕಟ್ಟು ಪ್ರದೇಶವನ್ನು ಮಂಜೂರು ಮಾಡಲಾಗಿತ್ತು ; ಈ ಪೈಕಿ ಇದುವರೆಗೂ ಎಷ್ಟು ಪ್ರದೇಶವನ್ನು ಅಭಿವೃದ್ಧಿ ಮಾಡಲಾಗಿದೆ ;

(ಇ) ಯೋಜನೆ ಮಂಜೂರಾದಾಗ ಎಷ್ಟು ಕಾಲಮಿತಿಯೊಳಗೆ ಯೋಜನೆಯನ್ನು ಪೂರ್ಣಗೊಳಿಸಬೇಕೆಂದು ನಿಗದಿಯಾಗಿತ್ತು ;

(ಈ) ಅಚ್ಚುಕಟ್ಟು ಪ್ರದೇಶದ ಎಷ್ಟು ಭಾಗ ಕೆರೆಯ ಅಚ್ಚುಕಟ್ಟಿಗೆ ಸೇರುತ್ತದೆ ; ಹೊಸ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು ;

(ಉ) ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು (ಕಾರ್ಯಗತ ಮಾಡಲು) ಸರ್ಕಾರದ ಅನುದಾನ ಸಕಾಲಿಕವಾಗಿ ದೊರಕಿದೆಯೇ ;

(ಊ) ಯೋಜನೆಯನ್ನು ಪೂರ್ಣಗೊಳಿಸಲು ಎಷ್ಟು ಹಣ ಬೇಕಾಗುತ್ತದೆ ಹಾಗೂ ಕಾಲಮಿತಿ ಎಷ್ಟು ಹಿಡಿಯುತ್ತದೆ ;

(ಋ) ಎಷ್ಟು ಕಾಲಮಿತಿಯೊಳಗೆ ಯೋಜನೆಯನ್ನು ಪೂರ್ಣಗೊಳಿಸಲು ಸರ್ಕಾರ ತೀರ್ಮಾನಿಸಿದೆ ;

(ಎ) ಅಚ್ಚುಕಟ್ಟು ಕೆರೆಗಳ ಹೂಳು ತೆಗೆಯುವ ಮತ್ತು ಒತ್ತುವರಿಯನ್ನು ತೆರವುಗೊಳಿಸುವ ಯೋಜನೆಯನ್ನು ಸರ್ಕಾರ ಕೈಗೆತ್ತಿಕೊಂಡಿದೆಯೇ ;

(ಏ) ಇದುವರೆಗೆ ಆಗಿರುವ ಕಾಮಗಾರಿಗಳು ದೋಷಪೂರಿತವಾಗಿವೆ ಎಂಬ ದೂರುಗಳನ್ನು ರೈತರು ಪದೇ ಪದೇ ಅಧಿಕಾರಿಗಳ ಗಮನಕ್ಕೆ ತಂದಿರುವುದು ನಿಜವೇ ; ಹಾಗಿದ್ದಲ್ಲಿ, ತಪ್ಪಿತಸ್ಥ ಅಧಿಕಾರಿಗಳ ಮೇಲೆ ಯಾವ ವಿಧವಾದ ಕಾನೂನು ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ?



## ತಂತ್ರಾಂಶವನ್ನು ಅಭಿವೃದ್ಧಿ ಪಡಿಸುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೬೩ (೧೪೩೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಸಕರ ನಿಧಿಯ ಅನುದಾನ ಬಳಕೆಗಾಗಿ ಸರ್ಕಾರದಿಂದ ರೂಪಿಸಿರುವ ಮಾನದಂಡಗಳೇನು ;

(ಆ) ಸದರಿ ಅನುದಾನವನ್ನು ಸದ್ಬಳಕೆ ಮಾಡಿಕೊಳ್ಳಲು ಮಾನ್ಯ ಶಾಸಕರುಗಳಿಗೆ ತರಬೇತಿ ಶಿಬಿರಗಳನ್ನು ಏರ್ಪಡಿಸಿ ಯೋಜನೆಗಳ ಬಗ್ಗೆ ಮಾಹಿತಿ ನೀಡುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರವಾದ ಮಾಹಿತಿ ನೀಡುವುದು)

(ಇ) ಇತ್ತೀಚಿನ ದಿನಗಳಲ್ಲಿ "ಗಾಂಧಿ ಸಾಕ್ಷಿ ಕಾಯಕ" ಎಂಬ ತಂತ್ರಾಂಶವನ್ನು ಅಭಿವೃದ್ಧಿಪಡಿಸಲಾಗಿದ್ದು, ಈ ತಂತ್ರಾಂಶವನ್ನು ಬಳಸಿ ಸಾಧಿಸಿರುವ ಪ್ರಗತಿಯನ್ನು ವರ್ಷವಾರು, ಕಾಮಗಾರಿವಾರು, ಶಾಸಕರ ಕ್ಷೇತ್ರವಾರು ಸಂಪೂರ್ಣ ಮಾಹಿತಿಯನ್ನು ಒದಗಿಸುವುದು ;

(ಈ) ಈ ಹಿಂದೆ ಯೋಜನಾ ಇಲಾಖೆಯಿಂದ ಅಭಿವೃದ್ಧಿಪಡಿಸಲಾದ ಕೆ–ಲಾಡ್ಸ್ ವೆಬ್‌ಸೈಟ್‌ನಲ್ಲಿ ಇದ್ದ ನ್ಯೂನ್ಯತೆಗಳೇನು ; (ವಿವರ ಒದಗಿಸುವುದು) ಸದರಿ ತಂತ್ರಾಂಶದ ಅಭಿವೃದ್ಧಿಗೆ ಸರ್ಕಾರದ ವತಿಯಿಂದ ವೆಚ್ಚವಾಗಿರುವ ಹಣವೆಷ್ಟು ; ಸದರಿ ತಂತ್ರಾಂಶವನ್ನು ತಡೆಹಿಡಿದು ಹೊಸ ತಂತ್ರಾಂಶವನ್ನು ಅಭಿವೃದ್ಧಿಪಡಿಸಲು ಕಾರಣವೇನು ; (ಮಾಹಿತಿ ನೀಡುವುದು)

(ಉ) ರಾಜ್ಯದಲ್ಲಿ "ವಿಶೇಷ ಘಟಕ ಯೋಜನೆ" ಯು ಯಾವ ಸಾಲಿನಲ್ಲಿ ಪ್ರಾರಂಭವಾಯಿತು ; ಈ ಯೋಜನೆಗೆ ಇರುವ ಮಾನದಂಡಗಳೇನು ; ಸದರಿ ಯೋಜನೆಗೆ ಪ್ರಾರಂಭದಿಂದ ಇದುವರೆವಿಗೂ ಬಿಡುಗಡೆಯಾದ ಅನುದಾನ ಎಷ್ಟು ; (ಜಿಲ್ಲಾವಾರು ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಊ) ಹಿಂದುಳಿದ ಮತ್ತು ಅತಿ ಹಿಂದುಳಿದ ತಾಲ್ಲೂಕುಗಳಲ್ಲಿ ಅಭಿವೃದ್ಧಿಯಾಗಿರುವ ಕುರಿತು ಮೌಲ್ಯಮಾಪನ ಕೈಗೊಳ್ಳಲಾಗಿದೆಯೇ ; ಸದರಿ ಯೋಜನೆಯಡಿ ಕೈಗೊಂಡಿರುವ ಕಾಮಗಾರಿಗಳು ಯಾವುವು ? (ಸಂಪೂರ್ಣ ಮಾಹಿತಿ ನೀಡುವುದು)

## ರಾಮನಗರ ಜಿಲ್ಲೆಯ ವ್ಯಾಪ್ತಿಯ ಕೆರೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೬೪ (೧೪೩೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಮನಗರ ಜಿಲ್ಲೆಯ ವ್ಯಾಪ್ತಿಯಲ್ಲಿರುವ ಕೆರೆಗಳು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಾಗಡಿ ತಾಲ್ಲೂಕು ಕುದೂರು ಹೋಬಳಿಯ ಮಲ್ಲಪ್ಪನಹಳ್ಳಿಯ ವಿಸ್ತೀರ್ಣ ಎಷ್ಟು ಕೆರೆಯು ಪ್ರದೇಶವನ್ನು ಒತ್ತುವರಿ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಒತ್ತುವರಿ ಆಗಿರುವ ಪ್ರದೇಶ ಎಷ್ಟು ; ಒತ್ತುವರಿದಾರರ ಮಾಹಿತಿ ನೀಡುವುದು ಒತ್ತುವರಿ ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗಿದೆಯೇ ;



(ಈ) ಒತ್ತುವರಿ ತೆರವುಗೊಂಡಿರುವ ಪ್ರದೇಶ ಎಷ್ಟು ; ಒತ್ತುವರಿದಾರರ ವಿರುದ್ಧ ಕೈಗೊಂಡಿರುವ ಕ್ರಮಗಳೇನು ;

(ಉ) ಒತ್ತುವರಿ ತೆರವುಗೊಂಡ ನಂತರ ಕೆರೆಯ ರಕ್ಷಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## K.A.S ನಿಂದ I.A.S. ಗೆ ಪದೋನ್ನತಿ ಮರುಪರಿಶೀಲಿಸುವ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೨೬೫ (೧೫೪೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಕೇಡರ್‌ನ ನಾಗರಿಕ ಸೇವೆಯಿಂದ (ಕೆ.ಎ.ಎಸ್.) ಭಾರತೀಯ ನಾಗರಿಕ ಸೇವೆ (ಐ.ಎ.ಎಸ್) ಗೆ ೨೦೧೫ ರಲ್ಲಿ ಪದೋನ್ನತಿ ನೀಡಿರುವ ಪಟ್ಟಿಯನ್ನು ಮರು ಪರಿಶೀಲಿಸದೆ ಹೊಸದಾಗಿ ಬಡ್ತಿ ನೀಡಲು ಕೇಂದ್ರ ಲೋಕಸೇವಾ ಆಯೋಗಕ್ಕೆ (ಯು.ಪಿ.ಎಸ್.ಸಿ) ಕಳುಹಿಸಿಕೊಡಲಾಗಿದೆಯೇ ; ಕಳುಹಿಸಿಕೊಟ್ಟಿದಲ್ಲಿ, ಪ್ರಗತಿ ಏನು ;

(ಆ) ೨೦೦೬, ೨೦೦೮, ೨೦೧೦ ನೇ ಸಾಲಿನ ಕೆ.ಎ.ಎಸ್. ಅಧಿಕಾರಿಗಳ ಐ.ಎ.ಎಸ್. ಬಡ್ತಿಗೆ ಕೇಂದ್ರ ಸರ್ಕಾರದ ಸಿಬ್ಬಂದಿ ಮತ್ತು ತರಬೇತಿ ಇಲಾಖೆ ಯಾವ ಕ್ರಮ ಕೈಗೊಂಡಿದೆ ; ೨೦೧೬ ರಿಂದ ೨೦೧೯ ರ ವರೆಗೆ ಎಷ್ಟು ಅಧಿಕಾರಿಗಳಿಗೆ ಐ.ಎ.ಎಸ್.ಗೆ ಬಡ್ತಿ ನೀಡಲಾಗಿದೆ ;

(ಇ) ಕೇಂದ್ರೀಯ ಆಡಳಿತ ನ್ಯಾಯ ಮಂಡಳಿ (ಸಿ.ಎ.ಟಿ.) ನಿರ್ದೇಶನ ನೀಡಿದಾಗ್ಯೂ ಅರ್ಹ ಅಭ್ಯರ್ಥಿಗಳಿಗೆ ಐ.ಎ.ಎಸ್. ಗೆ ಬಡ್ತಿ ನೀಡಲು ವಿಳಂಬವೇಕೆ ; ಇದು ನ್ಯಾಯಾಂಗ ನಿಂದನೆ ಆಗುವುದಿಲ್ಲವೇ ಹಾಗೂ ಇದಕ್ಕೆ ಸರ್ಕಾರ ತಕ್ಷಣ ಸ್ಪಂಧಿಸುವುದೇ ;

(ಈ) ೧೯೯೮-೯೯ ಹಾಗೂ ೨೦೧೪ ನೇ ಸಾಲಿನ ಕೆ.ಎ.ಎಸ್. ಅಧಿಕಾರಿಗಳ ಪೈಕಿ ಎಷ್ಟು ಜನರಿಗೆ ಈ ಹಿಂದೆ ಬಡ್ತಿ ನೀಡಲಾಗಿತ್ತು ; ಅದರ ಫಲಿತಾಂಶವೇನು ;

(ಉ) ೧೯೯೮ ನೇ ಸಾಲಿನ ಕೆ.ಎ.ಎಸ್. ಅಕ್ರಮ ನೇಮಕಾತಿ ಪ್ರಕರಣದಲ್ಲಿ ನ್ಯಾಯಾಲಯದ ತೀರ್ಪಿನಂತೆ ಆಯ್ಕೆ ಪಟ್ಟಿಯನ್ನು ರಾಜ್ಯ ಸರ್ಕಾರವು ಡಿ.ಓ.ಪಿ.ಟಿ.ಗೆ ಸಲ್ಲಿಸಿದೆಯೇ ; ಸಲ್ಲಿಸಿದ್ದರೆ, ಯಾವ ದಿನಾಂಕದಂದು ಸಲ್ಲಿಸಲಾಗಿದೆ ; ಸಲ್ಲಿಸದಿದ್ದರೆ, ಅದಕ್ಕೆ ಕಾರಣಗಳೇನು ;

(ಊ) ೧೯೯೮ ರಿಂದ ೨೦೧೫ ರವರೆಗೆ ಕೆ.ಎ.ಎಸ್. ನಿಂದ ಐ.ಎ.ಎಸ್. ಗೆ ಬಡ್ತಿ ನೀಡಲು ಸರ್ಕಾರ ವಿಳಂಬ ಮಾಡುತ್ತಿರುವುದು ನಿಜವೇ ; ನಿಜವಿದ್ದಲ್ಲಿ, ಕಾರಣಗಳೇನು ; ತಕ್ಷಣ ಅರ್ಹರಾದ್ದಂತಹ ಕೆ.ಎ.ಎಸ್. ಅಧಿಕಾರಿಗಳಿಗೆ ಬಡ್ತಿ ನೀಡಲು ಯಾವ ಕಾಲಮಿತಿಯಲ್ಲಿ ಕ್ರಮ ತೆಗೆದುಕೊಳ್ಳಲಾಗುವುದು ?

## BMRCL ನಲ್ಲಿ ಗುತ್ತಿಗೆ ನೌಕರರ ನೇಮಕಾತಿ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೧೨೬೬ (೧೫೪೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಮೆಟ್ರೋ ರೈಲು ನಿಗಮ (BMRCL) ದಲ್ಲಿ ಹಾಲಿ ಗುತ್ತಿಗೆಯಡಿ ಕೆಲಸ ನಿರ್ವಹಿಸುತ್ತಿರುವ ಉದ್ಯೋಗಿಗಳು ಎಷ್ಟು; ಉದ್ಯೋಗಿ ಹೆಸರು, ಹುದ್ದೆ, ಮಾಸಿಕ ಪಡೆಯುತ್ತಿರುವ ವೇತನ ಸೇವೆಗೆ ಸೇರಿದ ದಿನಾಂಕದೊಂದಿಗೆ ವಿವರವಾದ ಮಾಹಿತಿ ನೀಡುವುದು ;



(ಆ) ಸದರಿ ನೌಕರರಲ್ಲಿ ಕರ್ನಾಟಕದವರೆಷ್ಟು ; ಅನ್ಯ ರಾಜ್ಯದವರೆಷ್ಟು; (ಹೆಸರು, ವಿಳಾಸದೊಂದಿಗೆ ಮಾಹಿತಿ ಕೊಡುವುದು)

(ಇ) ಮೆಟ್ರೋ ನಿಗಮಕ್ಕೆ ಸಾವಿರಾರು ಗುತ್ತಿಗೆ ನೌಕರರನ್ನು ಯಾವ ಮಾನದಂಡದ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲಾಗಿದೆ; ದಿನಪತ್ರಿಕೆಯಲ್ಲಿ ಜಾಹೀರಾತು ನೀಡಿ ನೇಮಕ ಮಾಡಿಕೊಳ್ಳಲಾಗಿದೆಯೇ; (ವಿವರ ನೀಡುವುದು)

(ಈ) ಜನಪ್ರತಿನಿಧಿಗಳು ಶಿಫಾರಸ್ಸು ಮಾಡಿದ ಯಾವ ಅಭ್ಯರ್ಥಿಗಳಿಗೂ ಕೆಲಸ ನೀಡದೆ ಅಧಿಕಾರಿಗಳೂ ತಮ್ಮ ಮನಸ್ಸಿಗೆ ಬಂದಂತೆ ಗುತ್ತಿಗೆ ನೌಕರರನ್ನು ನೇಮಕಾತಿ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ನೇಮಕಗೊಂಡ ಗುತ್ತಿಗೆ ನೌಕರರಲ್ಲಿ ಜನಪ್ರತಿನಿಧಿಗಳು ಶಿಫಾರಸ್ಸು ಮಾಡಿದವರ ಸಂಖ್ಯೆ ಎಷ್ಟು ; ಅಧಿಕಾರಿಗಳು ನೇರವಾಗಿ ನೇಮಕ ಮಾಡಿಕೊಂಡವರೆಷ್ಟು; (ವಿವರವಾಗಿ ಮಾಹಿತಿ ನೀಡುವುದು)

(ಉ) ಕನ್ನಡಿಗ ಅಭ್ಯರ್ಥಿಗಳಿಗೆ ಅನ್ಯಾಯ ಮಾಡಿದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ಕರ್ನಾಟಕ ರಾಜ್ಯ ಸರ್ಕಾರಿ ದಿನಗೂಲಿ ನೌಕರರ ಮಹಾಮಂಡಲದ ವಿವಿಧ ಬೇಡಿಕೆಗಳ ಈಡೇರಿಕೆ ಬಗ್ಗೆ

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :-**

೧೨೬೭ (೧೫೪೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ರಾಜ್ಯ ಸರ್ಕಾರಿ ದಿನಗೂಲಿ ನೌಕರರ ಮಹಾಮಂಡಲ, ಹುಬ್ಬಳ್ಳಿ ಇವರು ರಾಜ್ಯ ಸರ್ಕಾರಕ್ಕೆ ತಮ್ಮ ಬೇಡಿಕೆಗಳ ಬಗ್ಗೆ ಮನವಿ ಸಲ್ಲಿಸಿರುವುದು ನಿಜವೇ ;

(ಆ) ನಿಜವಿದ್ದಲ್ಲಿ, ಅವರ ಪ್ರಮುಖ ಬೇಡಿಕೆಗಳೇನು ;

(ಇ) ಸರ್ಕಾರ ಇವರ ಬೇಡಿಕೆಗಳಿಗೆ ಸ್ಪಂದಿಸಿ ಅವರನ್ನು ಖಾಯಂಗೊಳಿಸಲು ಏನಾದರೂ ಕ್ರಮಕೈಗೊಂಡಿರುವುದೇ ಅಥವಾ ಇವರಿಗೆ ಸಮಾನ ಕೆಲಸಕ್ಕೆ ಸಮಾನ ವೇತನ ಕೊಡಲು ಸರ್ಕಾರ ಕ್ರಮಕೈಗೊಳ್ಳುವುದೇ ?

## 'ಸಿ' ಮತ್ತು 'ಡಿ' ವೃಂದದ ಸಿಬ್ಬಂದಿಯನ್ನು ಹೊರಗುತ್ತಿಗೆ ಮೂಲಕ ನೇಮಕ ಮಾಡುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೨೬೮ (೧೫೫೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ಇಲಾಖೆಗಳಲ್ಲಿ ಖಾಲಿ ಇರುವ ಖಾಯಂ ಹುದ್ದೆಗಳ ಎದುರಾಗಿ ಹೊರಗುತ್ತಿಗೆ ಮೂಲಕ ಸಿಬ್ಬಂದಿಗಳನ್ನು ನೇಮಕ ಮಾಡಿಕೊಳ್ಳಲಾಗುತ್ತಿದೆಯೇ ; (ಇಲಾಖಾವಾರು ವಿವರ ನೀಡುವುದು)

(ಆ) ಈ ರೀತಿ ಸರ್ಕಾರದಿಂದ ಮಂಜೂರಾಗಿರುವ ಖಾಯಂ ಹುದ್ದೆಗಳಿಗೆ (ಎಲ್ಲಾ 'ಸಿ' ಮತ್ತು 'ಡಿ' ವೃಂದದ) ಹೊರಗುತ್ತಿಗೆ ಮೂಲಕ ಸಿಬ್ಬಂದಿಗಳನ್ನು ನೇಮಿಸಿಕೊಳ್ಳಲು ಆರ್ಥಿಕ ಇಲಾಖೆಯಿಂದ ಅನುಮತಿ ಪಡೆಯುವುದು ಅವಶ್ಯವಿದೆಯೇ; (ಸಂಬಂಧಿಸಿದ ಎಲ್ಲಾ ಆದೇಶಗಳನ್ನು ಒದಗಿಸುವುದು) ಅವಶ್ಯವಿದ್ದಲ್ಲಿ, ಅದಕ್ಕೆ ಕಾರಣ ನೀಡುವುದು;

(ಇ) ಖಾಯಂ ಹುದ್ದೆಗಳಿಗೆ ಹೊರಗುತ್ತಿಗೆ ಮೂಲಕ ನೇಮಿಸಿಕೊಳ್ಳಲು ಇಲಾಖೆಯ ಮುಖ್ಯಸ್ಥರುಗಳಿಗೆ ಅಧಿಕಾರ ನೀಡಲು ಸರ್ಕಾರಕ್ಕೆ ಇರುವ ತೊಂದರೆ ಏನು ;



(ಈ) ಹೊರಗುತ್ತಿಗೆ ಸಿಬ್ಬಂದಿಗಳಿಗೆ ವೇತನ ನೀಡುವುದರಲ್ಲಿ ಆಗುತ್ತಿರುವ ವಿಳಂಬಕ್ಕೆ ಕಾರಣ ಏನು ; ಇದನ್ನು ಸರಿಪಡಿಸಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗುವುದು ?

## ಹೊಸ ಮದ್ಯದಂಗಡಿಗಳಿಗೆ ಪರವಾನಗಿ ನೀಡುವ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೨೬೯ (೧೪೮೫) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಮದ್ಯದ ಅಂಗಡಿಗಳಿವೆ; ಹೊಸದಾಗಿ ಪರವಾನಗಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಎಷ್ಟು ಪರವಾನಗಿ ನೀಡಲಾಗುವುದು ;

(ಆ) ಕಳೆದ ೫ ವರ್ಷಗಳಲ್ಲಿ ಎಷ್ಟು ಮದ್ಯದ ಅಂಗಡಿಗಳಿಗೆ ಪರವಾನಗಿ ನೀಡಲಾಗಿದೆ ; (ವಿವರ ನೀಡುವುದು)

(ಇ) ಮದ್ಯದ ಅಂಗಡಿಗಳಿಗೆ ಪರವಾನಗಿ ಪಡೆಯಲು ಇರುವ ಮಾನದಂಡಗಳೇನು ; (ಆದೇಶ/ಮಾರ್ಗಸೂಚಿ ನೀಡುವುದು)

(ಈ) ಎಂಎಸ್ಐಎಲ್ ಅಂಗಡಿಗಳಿಗೆ ಪರವಾನಗಿ ನೀಡಲು ಇರುವ ಮಾನದಂಡ/ನಿಯಮ ಏನು ;

(ಉ) ಪ್ರಸ್ತುತ ವರ್ಷದಲ್ಲಿ ಎಷ್ಟು ಎಂಎಸ್ಐಎಲ್ ಅಂಗಡಿಗಳಿಗೆ ಪರವಾನಗಿ ನೀಡಲಾಗಿದೆ ಹಾಗೂ ನೀಡಲು ಉದ್ದೇಶಿಸಲಾಗಿದೆ? (ವಿವರ ಒದಗಿಸುವುದು)

## ವೃಂದ ಮತ್ತು ನೇಮಕಾತಿ ನಿಯಮ ಕುರಿತು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೨೭೦ (೧೪೮೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಎಲ್ಲಾ ಇಲಾಖೆಗಳಲ್ಲಿ ವೃಂದ ಮತ್ತು ನೇಮಕಾತಿ ನಿಯಮಾವಳಿಯನ್ನು ರೂಪಿಸಲಾಗಿದೆಯೇ ; (ವಿವರ ನೀಡುವುದು)

(ಆ) ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪ್ರತಿ ೩ ವರ್ಷಕ್ಕೊಮ್ಮೆ ಪರಿಷ್ಕರಿಸುವಂತೆ ಸರ್ಕಾರದ ಆದೇಶ ಇದ್ದರೂ ಸಹ ಪಾಲಿಸದಿರಲು ಕಾರಣ ಏನು ;

(ಇ) ಎಲ್ಲಾ ಇಲಾಖೆಗಳ ನಿಯಮಗಳನ್ನು ಪರಿಷ್ಕರಿಸಲು ಸರ್ಕಾರದಿಂದ ಯಾವ ಕ್ರಮಕೈಗೊಳ್ಳಲಾಗುವುದು ; ಹಾಗೂ ಇದಕ್ಕಾಗಿ ಎಷ್ಟು ಸಮಯ ಬೇಕಾಗುತ್ತದೆ ?

## ನಿವೃತ್ತಿ, ಪಿಂಚಣಿಗೆ ಅರ್ಹ ಸೇವೆ ಪರಿಗಣಿಸುವುದು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೨೭೧ (೧೫೫೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಿರುದ್ಯೋಗಿ ಪದವೀಧರರನ್ನು ಸ್ಟೈಫೆಂಡರಿ ಮೂಲಕ ವಿವಿಧ ಇಲಾಖೆಗಳಲ್ಲಿ ೧೯೭೮ ರಲ್ಲಿ ನೇಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೧೯೮೮ ರಲ್ಲಿ ಸ್ಟೈಫೆಂಡರಿ ಪದವೀಧರರಿಗೆ ೫೦% ಮೀಸಲಾತಿ ಕೊಡುವುದಕ್ಕೆ ತೀರ್ಮಾನಿಸಿ ಇಲಾಖೆಗೆ ನೇಮಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಇ) ಸ್ಟೈಫೆಂಡರಿ ಪದವೀಧರರು ಸುಮಾರು ೧೨–೧೩ ವರ್ಷಗಳು ಮಿತ ವೇತನ ಪದವೀಧರರಾಗಿ ಸೇವೆ ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಈ) ಸ್ಟೈಫೆಂಡರಿ ಪದವೀಧರರು ಹಾಗೂ ದಿನಗೂಲಿ ನೌಕರರ ಅರ್ಹ ಸೇವೆಯನ್ನು ನಿವೃತ್ತಿ ಪಿಂಚಣಿಗೆ ಪರಿಗಣಿಸುವ ಸಂಬಂಧ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ದಿನಾಂಕ: ೦೨.೦೯.೨೦೧೯ರಲ್ಲಿ ತೀರ್ಪು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ತುಂಗಭದ್ರಾ ಎಡದಂಡೆಯ ಮುಖ್ಯ ಕಾಲುವೆಗೆ ಬೇಸಿಗೆ ಕಾಲದಲ್ಲಿ ನೀರು ಸರಬರಾಜು ಮಾಡುವ ಕುರಿತು

**ಶ್ರೀ ಎನ್. ಎಸ್. ಭೋಸರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೭೨ (೧೫೩೬) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಂಗಭದ್ರಾ ಎಡದಂಡೆಯ ಮುಖ್ಯ ಕಾಲುವೆಯಿಂದ ಮಸ್ಕಿ, ಮಾನ್ವಿ, ಸಿರವಾರ, ರಾಯಚೂರು ತಾಲ್ಲೂಕುಗಳಲ್ಲಿ ರೈತರುಗಳು ಬೆಳೆಯುವ ಬೇಸಿಗೆ ಕಾಲದ ಬೆಳೆಗಳಿಗೆ ನೀರು ಸರಬರಾಜು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ತುಂಗಭದ್ರಾ ಮುಖ್ಯ ಕಾಲುವೆಯಲ್ಲಿ ೩೪೦೦ ಕ್ಯೂಸೆಕ್ಸ್ ನೀರು ಬಿಟ್ಟಿರುವ ಸಂದರ್ಭದಲ್ಲಿ ೬೯ ಮೈಲ್ಸಿನಲ್ಲಿ ನೀರಿನ ಪ್ರಮಾಣ ಎಷ್ಟು ಇರಬೇಕು ; ಪ್ರಸ್ತುತ, ಎಷ್ಟು ಪ್ರಮಾಣದ ನೀರು ಸರಬರಾಜು ಮಾಡಲಾಗುತ್ತದೆ ; ಈ ಮುಖ್ಯ ಕಾಲುವೆಯಲ್ಲಿ ಗೇಜುಗಳು ಸರಿ ಇಲ್ಲದೆ ಇರುವುದನ್ನು ಸರಿಪಡಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) TLBC ಮುಖ್ಯ ಕಾಲುವೆಯಲ್ಲಿ ಇರುವ ೫ ವಿಭಾಗಗಳಲ್ಲಿ ವಿಭಾಗವಾರು ಎಷ್ಟು ಕ್ಯೂಸೆಕ್ಸ್ ನೀರು ಕೊಡಬೇಕು ; ಪ್ರಸ್ತುತ ಎಷ್ಟು ಕ್ಯೂಸೆಕ್ಸ್ ನೀರು ಸರಬರಾಜು ಮಾಡಲಾಗುತ್ತಿದೆ ?

## ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ವಿವಿಧ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳ ಕುರಿತು

**ಶ್ರೀ ಎನ್. ಎಸ್. ಭೋಸರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೭೩ (೧೫೩೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಒಟ್ಟು ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಅದರಲ್ಲಿ ಖಾಲಿ ಇರುವ ಹುದ್ದೆಗಳು ಎಷ್ಟು ; ೨೦೧೪–೧೫ ರಿಂದ ೨೦೧೯–೨೦ನೇ ಸಾಲಿನವರೆಗೂ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ ?

## ರಾಯಚೂರು ನಗರ ಹಾಗೂ ಮಾನ್ವಿ ಪಟ್ಟಣದಲ್ಲಿ ನ್ಯಾಯಾಲಯ ಸಂಕೀರ್ಣ ನಿರ್ಮಾಣ ಮಾಡುವ ಕುರಿತು

**ಶ್ರೀ ಎನ್. ಎಸ್. ಭೋಸರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೭೪ (೧೫೩೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಯಚೂರು ನಗರದಲ್ಲಿ ಜಿಲ್ಲಾ ನ್ಯಾಯಾಲಯ ಸಂಕೀರ್ಣ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;



(ಆ) ರಾಯಚೂರು ಜಿಲ್ಲೆಯ ಮಾನ್ವಿ ಮ್ಯಾಜಿಸ್ಟ್ರೇಟ್ ನ್ಯಾಯಾಲಯ ಸಂಕೀರ್ಣ ನಿರ್ಮಾಣ ಮಾಡುವ ಕಾಮಗಾರಿಗೆ ಮಂಜೂರಾತಿ ನೀಡಿರುವುದು ಯಾವಾಗ, ಕಾಮಗಾರಿ ಯಾವ ಹಂತದಲ್ಲಿ ಇದೆ; ಸದರಿ ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಪೂರೈಸಲು ಸರ್ಕಾರ ಕ್ರಮ ಕೈಗೊಳ್ಳಲಿದೆ ?

## ರಾಯಚೂರಿನಲ್ಲಿರುವ RTPS ಮತ್ತು YTPS ನ ಶಾಖೋತ್ಪನ್ನಗಳ ಕುರಿತು

**ಶ್ರೀ ಎನ್. ಎಸ್. ಭೋಸರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೭೫ (೧೫೩೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರಿನಲ್ಲಿ ಕರ್ನಾಟಕ ವಿದ್ಯುಚ್ಛಕ್ತಿ ನಿಗಮ (KPC) ವತಿಯಿಂದ ನಿರ್ಮಾಣ ಮಾಡಿರುವ RTPS ಹಾಗೂ YTPS ನಿಂದ ಉತ್ಪತ್ತಿಯಾಗುತ್ತಿರುವ ಒಟ್ಟು ವಿದ್ಯುತ್ತಿನ ಪ್ರಮಾಣ ಎಷ್ಟು; ಈ ಯೋಜನೆಗೆ ಭೂಸ್ವಾಧೀನ ಪಡೆದುಕೊಂಡಿರುವ ಭೂಮಿ ಎಷ್ಟು ;

(ಆ) ಈ ವಿದ್ಯುತ್ ಉತ್ಪಾದನೆಯಿಂದ ರಾಯಚೂರು ಭಾಗದಲ್ಲಿರುವ ರೈತರಿಗೆ ಸಿಕ್ಕಿರುವ ಸೌಲಭ್ಯಗಳೇನು ; ಹಾಗೂ ಸ್ಥಳೀಯರಿಗೆ ಸಿಕ್ಕಿರುವ ಉದ್ಯೋಗ ಎಷ್ಟು ; ಶಕ್ತಿ ನಗರದಲ್ಲಿ ಪರಿಸರವನ್ನು ಕಾಪಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ಜಿಲ್ಲೆಯಲ್ಲಿ ಕೃಷ್ಣಾ ಹಾಗೂ ತುಂಗಭದ್ರಾ ನದಿಗಳು ಇರುವುದರಿಂದ ರೈತರ ಪಂಪ್‌ಸೆಟ್‌ಗಳಿಗೆ ದಿನದ ೧೨ ತಾಸು ವಿದ್ಯುತ್ ಸರಬರಾಜು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## KKARDB ವತಿಯಿಂದ ಮಂಜೂರಾತಿಯಾಗಿರುವ ಅನುದಾನದ ಕುರಿತು

**ಶ್ರೀ ಎನ್. ಎಸ್. ಭೋಸರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೧೨೭೬ (೧೫೩೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

೨೦೧೮–೧೯ ರಿಂದ ೨೦೧೯–೨೦ರವರೆಗೂ ರಾಯಚೂರು ನಗರ ವಿಧಾನಸಭಾ ಕ್ಷೇತ್ರಕ್ಕೆ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ ವತಿಯಿಂದ ವಿವಿಧ ಯೋಜನೆಗಳಿಗೆ ಮಂಜೂರಾತಿಯಾಗಿರುವ ಅನುದಾನ ಎಷ್ಟು ?

## ಕೆರೆ ಅಭಿವೃದ್ಧಿ ಪ್ರಾಧಿಕಾರದಿಂದ ಹಣ ಬಿಡುಗಡೆ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೨೭೭ (೧೫೪೨) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೆರೆ ಅಭಿವೃದ್ಧಿ ಪ್ರಾಧಿಕಾರವನ್ನು ಯಾವಾಗ ಪ್ರಾರಂಭ ಮಾಡಲಾಯಿತು ; ಇದರ ಧ್ಯೇಯೋದ್ಧೇಶಗಳೇನು ; (ವಿವರವಾದ ಮಾಹಿತಿ ನೀಡುವುದು)

(ಆ) ಯಾವ ಕೆರೆಗಳನ್ನು ಕೆರೆ ಅಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಗೆ ತರಲಾಗಿದೆ ; ಇದಕ್ಕಿರುವ ಮಾನದಂಡಗಳೇನು ;

(ಇ) ಕೆರೆ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಅಂತರ್ಜಲ ಅಭಿವೃದ್ಧಿಗೆ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಬಹುದು ; (ವಿವರ ನೀಡುವುದು)



(ಈ) ೨೦೧೮–೧೯ ಮತ್ತು ೨೦೧೯–೨೦ ನೇ ಸಾಲಿನಲ್ಲಿ ಕೆರೆ ಅಭಿವೃದ್ಧಿ ಪ್ರಾಧಿಕಾರಕ್ಕೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; ಈ ಹಣವನ್ನು ಯಾವ ವಿಧವಾದ ಕಾಮಗಾರಿಗೆ ಬಿಡುಗಡೆ ಮಾಡಲಾಗಿದೆ ;

(ಉ) ಸದರಿ ಪ್ರಾಧಿಕಾರದಿಂದ ತುಮಕೂರು ಜಿಲ್ಲೆಗೆ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ? (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

## ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಬರುವ ಅನುದಾನ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೨೭೮ (೧೫೦೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ ಮತ್ತು ೨೦೧೯–೨೦ ನೇ ಸಾಲಿಗೆ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಯಾವ ಯಾವ ಯೋಜನೆಗಳಿಗೆ ಎಷ್ಟೆಷ್ಟು ಅನುದಾನ ನೀಡಲಾಗಿದೆ ; (ವಿವರ ನೀಡುವುದು)

(ಆ) ಈ ಅನುದಾನವನ್ನು ಸಮರ್ಪಕವಾಗಿ ಬಳಸಲಾಗಿದೆಯೇ ; ವಿವಿಧ ಯೋಜನೆಗಳಡಿ ಬಳಸದೆ ಉಳಿದ ಅನುದಾನವೆಷ್ಟು ; (ಕಳೆದ ಮೂರು ವರ್ಷಗಳ ಮಾಹಿತಿ ನೀಡುವುದು)

(ಇ) ೨೦೨೦–೨೧ ನೇ ಸಾಲಿನ ರಾಜ್ಯ ಹಾಗೂ ಕೇಂದ್ರ ಸರ್ಕಾರಗಳ ಸಹಯೋಗದಲ್ಲಿ ಯಾವ ಯಾವ ಯೋಜನೆಗಳನ್ನು ಘೋಷಿಸಲಾಗಿದೆ ; ಯಾವ ಅನುಪಾತದಲ್ಲಿ ಈ ಯೋಜನೆಗಳಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳಿಂದ ಅನುದಾನ ಒದಗಿಸಲಾಗುವುದು ; (ವಿವರ ನೀಡುವುದು)

(ಈ) ಪ್ರಸ್ತುತ ಆರ್ಥಿಕ ವರ್ಷದಲ್ಲಿ ಕೇಂದ್ರದಿಂದ ಒಟ್ಟು ಈವರೆಗೆ ಎಷ್ಟು ಅನುದಾನ ಒದಗಿಸಲಾಗಿದೆ ? (ಯೋಜನೆವಾರು ವಿವರ ಒದಗಿಸುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಪೌರಕಾರ್ಮಿಕರ ನೇಮಕಾತಿಯ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೨೭೯ (೧೫೪೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆರೋಗ್ಯ ಇಲಾಖೆಯಲ್ಲಿ ಖಾಲಿ ಇರುವ ಪೌರಕಾರ್ಮಿಕರ ಹುದ್ದೆಗಳೆಷ್ಟು ; ದಿನಾಂಕ: ೦೧.೦೭.೨೦೧೪ ರಂದು ಎಷ್ಟು ಹುದ್ದೆಗಳನ್ನು ತುಂಬಲು ಅರ್ಜಿ ಆಹ್ವಾನಿಸಲಾಗಿತ್ತು ;

(ಆ) ಇಲಾಖೆಗೆ ಬಂದ ಅರ್ಜಿಗಳು ಎಷ್ಟು ; ಇವುಗಳಿಂದ ಬಂದ ಅರ್ಜಿ ಶುಲ್ಕವೆಷ್ಟು ; ವಿವರವಾಗಿ ಎಸ್.ಸಿ., ಎಸ್.ಟಿ ಇತರೆಗಳೊಂದಿಗೆ ವಿವರವಾದ ಮಾಹಿತಿ ನೀಡುವುದು;

(ಇ) ಹಾಲಿ ಕೆಲಸ ನಿರ್ವಹಿಸುತ್ತಿರುವ ಪೌರ ಕಾರ್ಮಿಕರನ್ನು ಖಾಯಂ ಮಾಡುವಂತೆ ಮಾನ್ಯ ಉಚ್ಚನ್ಯಾಯಾಲಯದಿಂದ ಆದೇಶ ಬಂದಿರುವುದು ನಿಜವೇ ; ಹಾಗಾದರೆ, ನ್ಯಾಯಾಲಯದ ಪ್ರತಿ ನೀಡುವುದು ;

(ಈ) ಸದರಿ ನೇಮಕಾತಿ ಪ್ರಕ್ರಿಯೆಯನ್ನು ಸ್ಥಗಿತಗೊಳಿಸಲಾಗಿದೆಯೇ ; ಸ್ಥಗಿತಗೊಳಿಸಲಾಗಿದ್ದರೆ, ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಅವರು ತುಂಬಿದ ಅರ್ಜಿ ಶುಲ್ಕವನ್ನು ಯಾವ ರೀತಿ ಮತ್ತು ಯಾವಾಗ ಹಿಂದಿರುಗಿಸಲಾಗುವುದು ? (ವಿವರವಾದ ಮಾಹಿತಿ ನೀಡುವುದು)



## ಕಾನ್‌ಸ್ಟೇಬಲ್‌ಗಳಿಗೆ ಒಂದೇ ರೀತಿ ವಿದ್ಯಾರ್ಹತೆ ನಿಗಧಿಗೊಳಿಸುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೮೦ (೧೫೦೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಎಸ್.ಆರ್.ಪಿ., ಸಿ.ಎ.ಆರ್ ಮತ್ತು ಡಿ.ಎ.ಆರ್ ಕಾನ್‌ಸ್ಟೇಬಲ್‌ಗಳು ಸಿವಿಲ್ ಪೊಲೀಸ್ ಕಾನ್‌ಸ್ಟೇಬಲ್ ಹುದ್ದೆಗೆ ಹೋಗಲು ಅವಕಾಶ ಇದೆಯೇ ; ಇದ್ದಲ್ಲಿ, ಅದಕ್ಕಿರುವ ಅರ್ಹತೆಗಳೇನು ;

(ಆ) ೨೦೧೫ರಿಂದ ಇಲ್ಲಿಯವರೆಗೆ ಕೆ.ಎಸ್.ಆರ್.ಪಿ., ಸಿ.ಎ.ಆರ್ ಮತ್ತು ಡಿ.ಎ.ಆರ್ ಕಾನ್‌ಸ್ಟೇಬಲ್‌ಗಳಲ್ಲಿ ಎಷ್ಟು ಜನರು ನಾಗರಿಕ ಸಿವಿಲ್ ಪೊಲೀಸ್ ಕಾನ್‌ಸ್ಟೇಬಲ್ ಹುದ್ದೆಗೆ ಆಯ್ಕೆಯಾಗಿದ್ದಾರೆ; (ಮಾಹಿತಿ ನೀಡುವುದು)

(ಇ) ಈ ರೀತಿ ಕಾನ್‌ಸ್ಟೇಬಲ್‌ಗಳು ಸಿವಿಲ್ ಕಾನ್‌ಸ್ಟೇಬಲ್ ಆಗಿ ಹೋಗುವುದರಿಂದ ಕೆ.ಎಸ್.ಆರ್.ಪಿ., ಸಿ.ಎ.ಆರ್ ಮತ್ತು ಡಿ.ಎ.ಆರ್ ಕಾನ್‌ಸ್ಟೇಬಲ್‌ಗಳ ಹುದ್ದೆ ಖಾಲಿಯಾಗಿ ಸಿಬ್ಬಂದಿಗಳ ಕೊರತೆಯುಂಟಾಗುವುದಿಲ್ಲವೆ;

(ಈ) ಎಲ್ಲಾ ವಿಭಾಗಗಳ ಪೊಲೀಸ್ ಕಾನ್‌ಸ್ಟೇಬಲ್‌ಗಳ ಹುದ್ದೆಗಳಿಗೂ ಏಕರೂಪವಾದ ವಿದ್ಯಾರ್ಹತೆ ನಿಗದಿಗೊಳಿಸಿ ನೇಮಕಾತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ವಾಹನ ಸವಾರರಿಗೆ ಪೊಲೀಸರಿಂದ ಅನವಶ್ಯಕ ತೊಂದರೆ ತಪ್ಪಿಸುವ ಬಗ್ಗೆ

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೮೧ (೧೫೦೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವಾಹನಗಳ ದಾಖಲೆಗಳನ್ನು ತಪಾಸಣೆ ಮಾಡಿ ಕೇಸು ದಾಖಲಿಸಲು ಅರ್ಹತೆ ಹೊಂದಿರುವ ಪೊಲೀಸ್ ಅಧಿಕಾರಿ ಯಾರು ; ಪೊಲೀಸ್ ಪೇದೆಗಳು ವಾಹನಗಳನ್ನು ತಡೆದು ತಪಾಸಣೆ ಮಾಡಲು ನಿಯಮದಲ್ಲಿ ಅವಕಾಶವಿದೆಯೇ ;

(ಆ) ಸಂಚಾರಿ ಅಪರಾಧಗಳನ್ನು ಮಾಡಿದಾಗ ಮಾತ್ರ ನಿಲ್ಲಿಸಿ ದಂಡ ವಿಧಿಸಬೇಕೇ ಹೊರತು ಸುಮ್ಮನೆ ವಾಹನಗಳನ್ನು ನಿಲ್ಲಿಸಿ ತಪಾಸಣೆ ಮಾಡಿ ನಾಗರಿಕರಿಗೆ ತೊಂದರೆ ಕೊಡಬಾರದೆಂದು ಬೆಂಗಳೂರು ನಗರ ಪೊಲೀಸ್ ಆಯುಕ್ತರು ಆದೇಶ ಹೊರಡಿಸಿರುವುದು ನಿಜವೇ; ಇದ್ದರೆ, ಆದೇಶದ ಪ್ರತಿ ಒದಗಿಸುವುದು ;

(ಇ) ಹೀಗಿದ್ದರೂ, ಪೊಲೀಸರು ವಾಹನಗಳನ್ನು ತಡೆದು ತಪಾಸಣೆ ಮಾಡಿ ತೊಂದರೆ ಕೊಡುತ್ತಿರುವ ಪೊಲೀಸರ ಮೇಲೆ ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳಲಿದೆ ; ಮತ್ತು ಈ ರೀತಿ ಮಾಡದಂತೆ ನಿರ್ದೇಶನ ನೀಡಲಾಗುವುದೇ ?

## ಸಂಚಾರಿ ನಿಯಮ ಉಲ್ಲಂಘನೆಗೆ ವಿಧಿಸುವ ದಂಡಗಳ ಮಾಹಿತಿ

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೮೨ (೧೫೦೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–



(ಅ) ಕಳೆದ ಎರಡು ವರ್ಷಗಳಲ್ಲಿ ಬೆಂಗಳೂರು ನಗರದಲ್ಲಿ ವಾಹನ ಚಲಾಯಿಸುವಾಗ ಮೊಬೈಲ್ ಬಳಸುವ ಎಷ್ಟು ವಾಹನ ಸವಾರರ ಮೇಲೆ ದಂಡ ವಿಧಿಸಲಾಗಿದೆ ; (ಮಾಹಿತಿ ನೀಡುವುದು)

(ಆ) ಕರ್ತವ್ಯದ ಮೇಲಿರುವಾಗ ವಾಹನ ಸಂಚಾರದ ಬಗ್ಗೆ ಗಮನ ಕೊಡದೆ ಮೊಬೈಲ್ ಬಳಸುವ ಪೊಲೀಸರ ಬಗ್ಗೆ ತೆಗೆದುಕೊಂಡ ಕ್ರಮಗಳೇನು ; ಈ ಬಗ್ಗೆ ಸೂಚನೆಗಳನ್ನು ನೀಡಲಾಗಿದೆಯೇ ; ಅಥವಾ ಸುತ್ತೋಲೆ ಹೊರಡಿಸಲಾಗಿದೆಯೇ ; (ಹೊರಡಿಸಿದ್ದರೆ, ಅದರ ಪ್ರತಿ ನೀಡುವುದು)

(ಇ) ಸಂಚಾರಿ ಅಪರಾಧಗಳಿಗೆ ವಿಧಿಸುವ ದಂಡಗಳ ಹಣದ ಬಗ್ಗೆ ಸಾರ್ವಜನಿಕರ ತಿಳುವಳಿಕೆಗಾಗಿ ಪತ್ರಿಕೆಗಳಲ್ಲಿ ಪ್ರಕಟಣೆ ಹೊರಡಿಸಲಾಗಿದೆಯೇ ;

(ಈ) ಕೇಂದ್ರ ಸರ್ಕಾರ ವಿಧಿಸಿದ್ದ ದಂಡದ ಹಣ ಮತ್ತು ನಂತರ ರಾಜ್ಯ ಸರ್ಕಾರ ನಿಗಧಿಪಡಿಸಿದ ದಂಡದ ಹಣದ ಬಗ್ಗೆ ವ್ಯತ್ಯಾಸಗಳಿರುವುದರಿಂದ ಸ್ಪಷ್ಟನೆ ದೃಷ್ಟಿಯಿಂದ ಸರಿಯಾದ ಮಾಹಿತಿಯನ್ನು ಸಾರ್ವಜನಿಕರಿಗೆ ಪ್ರಕಟಣೆ ಮೂಲಕ ತಿಳಿಸಲಾಗುವುದೇ ?

## ಮೈಸೂರು ಅರಮನೆ ಸಂರಕ್ಷಣೆ

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೮೩ (೧೪೪೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ಅರಮನೆ ಶಿಥಿಲಗೊಂಡಿದ್ದು, ಅಲ್ಲಲ್ಲಿ ಸೋರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ದುರಸ್ಥಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಆ) ವಿಶ್ವವಿಖ್ಯಾತ ದಸರಾ ನೋಡಲು ಸಾವಿರಾರು ಜನರು ಮೈಸೂರಿಗೆ ಬರುತ್ತಿದ್ದು, ಅರಮನೆಗೂ ಜನ ಭೇಟಿ ನೀಡುತ್ತಿರುವುದರಿಂದ ಇದರ ಸಂರಕ್ಷಣೆಗೆ ಸರ್ಕಾರದಿಂದ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ?

## ಸಿವಿಲ್ ನ್ಯಾಯಾಲಯದ ಅವಶ್ಯಕತೆ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೮೪ (೧೪೧೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ಜೋಯಿಡಾ ತಾಲ್ಲೂಕಿನಲ್ಲಿ ಸಿವಿಲ್ ನ್ಯಾಯಾಲಯ ಸ್ಥಾಪಿಸಬೇಕು ಎಂದು ಆಗ್ರಹಿಸಿ ವಿವಿಧ ಸಂಘಟನೆಗಳ ಕಾರ್ಯಕರ್ತರು ದೊಡ್ಡ ಪ್ರಮಾಣದಲ್ಲಿ ಪ್ರತಿಭಟನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ ; (ವಿವರ ನೀಡುವುದು)

(ಆ) ಜೋಯಿಡಾ ತಾಲ್ಲೂಕಿಗೆ ಸಂಬಂಧಿಸಿದಂತೆ ಯಾವುದೇ ಸೌಲಭ್ಯಗಳು ನ್ಯಾಯಯುತವಾಗಿ ಸಿಗುತ್ತಿಲ್ಲವಾದ್ದರಿಂದ ಪ್ರತಿಯೊಂದು ಸೌಲಭ್ಯಗಳನ್ನು ಹೋರಾಟ ಮಾಡಿಯೇ ಪಡೆಯಬೇಕಾಗಿರುತ್ತದೆಯೆಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿರುವುದರಿಂದ ನ್ಯಾಯಾಲಯ ಸ್ಥಾಪಿಸುವ ಯೋಚನೆ ಸರ್ಕಾರದ ಮುಂದಿದೆಯೇ ? (ವಿವರ ನೀಡುವುದು)



## ಮದ್ಯ ಮಾರಾಟದಲ್ಲಿ ಅವ್ಯವಹಾರ ಮಾಡುತ್ತಿದ್ದರೂ ಅಬಕಾರಿ ಇಲಾಖೆ ಗಮನ ಹರಿಸದೇ ಇರುವ ಕುರಿತು

ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೧೨೮೫ (೧೪೯೪) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ವಿವಿಧ ಗ್ರಾಮಗಳಲ್ಲಿ/ಸ್ಥಳಗಳಲ್ಲಿ ನಿಯಮ ಮೀರಿ ಎಂ.ಎಸ್.ಐ.ಎಲ್/ಸಿ.ಎಲ್ ೨–ಸಿ–೭ ಮತ್ತು ಇತರ ಎಂ.ಆರ್.ಪಿ. ಅಂಗಡಿ / ವೈನ್ ಶಾಪ್‌ಗಳು ಸರ್ಕಾರದ ಎಂ.ಆರ್.ಪಿ. ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಕೈಗೊಂಡ ಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಾರವಾರ ಜಿಲ್ಲೆಯಲ್ಲಿ ಎಂ.ಎಸ್.ಐ.ಎಲ್. ಮದ್ಯದ ಅಂಗಡಿಗಳಲ್ಲಿ ಪ್ರತಿ ಎಂ.ಆರ್.ಪಿ. ದರದ ಮೇಲೆ ಬಾಟಲಿಗೆ ಹೆಚ್ಚಿನ ದರ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆಯೇ; ಕಾರವಾರ ಅಬಕಾರಿ ಇಲಾಖೆಯವರು ಎಷ್ಟು ಎಂ.ಎಸ್.ಐ.ಎಲ್. ವೈನ್ ಶಾಪ್ ಅಂಗಡಿಗಳ ಮೇಲೆ ಕೇಸುಗಳನ್ನು ದಾಖಲಿಸಿದೆ; (ಎಂ.ಎಸ್.ಐ.ಎಲ್. ಮದ್ಯದ ಅಂಗಡಿಗಳವಾರು, ತಾಲ್ಲೂಕುವಾರು, ದಿನಾಂಕದೊಂದಿಗೆ ಸಂಪೂರ್ಣ ವಿವರ ನೀಡುವುದು)

(ಇ) ಜಿಲ್ಲೆಯ ಕೆಲವೊಂದು ತಾಲ್ಲೂಕುಗಳಲ್ಲಿ ಬಾರ್ ಲೈಸೆನ್ಸ್ ಹೊಂದಿರುವ ಮಾಲೀಕರು ತಮ್ಮಲ್ಲಿರುವ ಮದ್ಯವನ್ನು ಹಳ್ಳಿಗಳಲ್ಲಿ ಮಾರಾಟ ಮಾಡುತ್ತಿದ್ದರೂ, ಅಬಕಾರಿ/ಪೊಲೀಸ್ ಇಲಾಖೆಯವರು

ಸ್ಪಂದಿಸದಿರುವುದು ಸರಿಯೇ; ಈ ಬಗ್ಗೆ ಸಂಬಂಧಿಸಿದವರ ಮೇಲೆ ಕ್ರಮಕೈಗೊಳ್ಳುವರೇ ; ಹಾಗೂ ಸಂಬಂಧಿಸಿದ ಬಾರ್ ಮಾಲೀಕರಿಗೆ ನೋಟೀಸ್ ಜಾರಿ ಮಾಡಿ ಹೊರಗಡೆ ಮದ್ಯ ಮಾರಾಟ ಕಂಡು ಬಂದಲ್ಲಿ, ಅವರ ಪರವಾನಗಿ ರದ್ದುಗೊಳಿಸಲು ಕ್ರಮ ಕೈಗೊಳ್ಳಲಾಗುವುದೇ ; (ವಿವರ ನೀಡುವುದು)

(ಈ) ಮದ್ಯ ಮಾರಾಟದಲ್ಲಿ ಪೈಟೋಗಳನ್ನು ತಪ್ಪಿಸಲು ಮತ್ತು ಜನರನ್ನು ವಂಚಿಸುವುದನ್ನು ತಪ್ಪಿಸಲು ಮದ್ಯದ ಮಾರಾಟ ದರವನ್ನು ಸಾರ್ವಜನಿಕರಿಗೆ ಬೋರ್ಡ್‌ಗಳಲ್ಲಿ ಹಾಕಬೇಕೆಂದು ಕಡ್ಡಾಯ ಮಾಡಲು ಸಾಧ್ಯವೇ ?

## ಸಣ್ಣ ಕೆರೆಗಳ ಅಭಿವೃದ್ಧಿಗಾಗಿ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೮೬ (೧೫೧೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಸಣ್ಣ ಕೆರೆಗಳ ಗ್ರಾಮವಾರು/ ತಾಲ್ಲೂಕುವಾರು ಮಾಹಿತಿ ನೀಡುವುದು ; (ಕೆರೆಯ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕಿನ ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಎಷ್ಟು ಕೆರೆಗಳಲ್ಲಿ ಹೊಳೆತ್ತುವ ಕಾಮಗಾರಿ ಹಾಗೂ ಇನ್ನಿತರ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಕಾಮಗಾರಿಯ ಮೊತ್ತವೆಷ್ಟು ; (ಕೆರೆಯ ಹೆಸರು, ಕಾಮಗಾರಿಯ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕಿನ ವಿವರ ನೀಡುವುದು)



(ಇ) ಈ ಕಾಮಗಾರಿಗಳಿಗಾಗಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು ; ಕಾಮಗಾರಿಗಳನ್ನು ಕೈಗೊಂಡ ಗುತ್ತಿಗೆದಾರರ ವಿವರವನ್ನು ನೀಡುವುದು ? (ಕೆರೆಯ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕಿನ ವಿವರ ನೀಡುವುದು)

## ಶಿಷ್ಟಾಚಾರ ಉಲ್ಲಂಘನೆ ಪ್ರಕರಣಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೮೭ (೧೫೦೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆಯಲ್ಲಿ ಸರ್ಕಾರದ ಶಿಷ್ಟಾಚಾರ ಉಲ್ಲಂಘನೆ ಮಾಡುತ್ತಿರುವ ಪ್ರಕರಣಗಳು ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಎಷ್ಟು ಪ್ರಕರಣಗಳು ಕಂಡು ಬಂದಿವೆ ; (ಪ್ರಕರಣವಾರು ಮಾಹಿತಿ ನೀಡುವುದು)

(ಆ) ಈ ಪ್ರಕರಣಗಳಲ್ಲಿ ಸರ್ಕಾರದ ಶಿಷ್ಟಾಚಾರ ಉಲ್ಲಂಘನೆ ಮಾಡಿರುವ ಅಧಿಕಾರಿಗಳ ವಿರುದ್ಧ ಏನಾದರೂ ಕ್ರಮ ಕೈಗೊಳ್ಳಲಾಗಿದೆಯೇ; ಕ್ರಮ ಕೈಗೊಂಡಿದ್ದಲ್ಲಿ, ಪ್ರಕರಣವಾರು ಮಾಹಿತಿ ನೀಡುವುದು;

(ಇ) ಶಿಷ್ಟಾಚಾರ ಪಾಲನೆ ಮಾಡುವ ಸಂಬಂಧ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಹೊರಡಿಸಲಾದ ಆದೇಶ/ ಸುತ್ತೋಲೆಗಳನ್ನು ಉಲ್ಲಂಘನೆ ಮಾಡುತ್ತಿರುವ ಪ್ರಕರಣಗಳು ಹೆಚ್ಚಾಗಿರುವುದರಿಂದ ಶಿಷ್ಟಾಚಾರ ಪಾಲನೆ ಮಾಡಲು ಇನ್ನಷ್ಟು ಪರಿಣಾಮಕಾರಿ ಕಾನೂನು ರೂಪಿಸಲು ಸರ್ಕಾರವು ಕ್ರಮ ಕೈಗೊಳ್ಳುವುದೇ ; ಹಾಗಿದ್ದಲ್ಲಿ, ಯಾವಾಗ ಕೈಗೊಳ್ಳುವುದು ? (ಮಾಹಿತಿ ನೀಡುವುದು)

## ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯನ್ನು ಹೆಚ್ಚಿಸುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೮೮ (೧೫೧೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯ ಅನುದಾನವನ್ನು ಬಿಡುಗಡೆ ಮಾಡುವಲ್ಲಿ ವಿಳಂಬವಾಗುತ್ತಿರುವುದರಿಂದ ಸ್ಥಳೀಯ ಅಭಿವೃದ್ಧಿಗೆ ಕಾರ್ಯಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಶಾಸಕರ ಪ್ರದೇಶಾಭಿವೃದ್ಧಿ ಅನುದಾನವನ್ನು ಕಾಲಕಾಲಕ್ಕೆ ಬಿಡುಗಡೆ ಮಾಡುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಾಗಿದೆಯೇ ; (ಮಾಹಿತಿ ನೀಡುವುದು)

(ಆ) ಹಾಲಿ ನೀಡಲಾಗುತ್ತಿರುವ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯ ಅನುದಾನ ವಾರ್ಷಿಕ ಎರಡು ಕೋಟಿ ರೂಪಾಯಿಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಕಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಅನುದಾನವನ್ನು ಹೆಚ್ಚಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಶಾಸಕರ ಪ್ರದೇಶಾಭಿವೃದ್ಧಿ ನಿಧಿಯ ಅನುದಾನವನ್ನು ಎಷ್ಟು ಹೆಚ್ಚಳ ಮಾಡಲಾಗುವುದು ಮತ್ತು ಯಾವಾಗ ಹೆಚ್ಚಳ ಮಾಡಲಾಗುವುದು ? (ಮಾಹಿತಿ ನೀಡುವುದು)

## ಎತ್ತಿನಹೊಳೆ ಯೋಜನೆಗಾಗಿ ಭೂಸ್ವಾಧೀನ ಮಾಡಿಕೊಂಡಿರುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೨೯೯ (೧೫೯೯) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–



(ಅ) ಬಯಲುಸೀಮೆ ಜಿಲ್ಲೆಗಳಿಗೆ ಕುಡಿಯುವ ನೀರನ್ನು ಒದಗಿಸುವ ಎತ್ತಿನಹೊಳೆ ಯೋಜನೆಗಾಗಿ ಹಾಸನ ಜಿಲ್ಲೆಯ ಎಷ್ಟು ಗ್ರಾಮಗಳಲ್ಲಿ ಎಷ್ಟು ಎಕರೆ ಜಮೀನನ್ನು ಭೂಸ್ವಾಧೀನ ಮಾಡಿಕೊಳ್ಳಲಾಗಿದೆ; ಜಮೀನು ಕಳೆದುಕೊಂಡಿರುವ ಸಂತ್ರಸ್ಥರ ಹೆಸರು ಮತ್ತು ಊರಿನ ವಿವರಗಳೊಂದಿಗೆ ತಾಲ್ಲೂಕುವಾರು ಮಾಹಿತಿ ನೀಡುವುದು ;

(ಆ) ಎತ್ತಿನಹೊಳೆ ಯೋಜನೆಗಾಗಿ ಹಾಸನ ಜಿಲ್ಲೆಯಲ್ಲಿ ಭೂಮಿ ಕಳೆದುಕೊಂಡ ರೈತರಿಗೆ ಸರ್ಕಾರದಿಂದ ಪರಿಹಾರ ನೀಡಲು ಎಕರೆವಾರು ನಿಗಧಿಪಡಿಸಿರುವ ಬೆಲೆ ಎಷ್ಟು ; ಇದಕ್ಕಾಗಿ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು ; ಮತ್ತು ಇದರಲ್ಲಿ ಪರಿಹಾರ ನೀಡಿರುವ ಮೊತ್ತವೆಷ್ಟು ;

(ಇ) ಎತ್ತಿನಹೊಳೆ ಯೋಜನೆಯಡಿ ಇದುವರೆಗೂ ಪರಿಹಾರ ಪಡೆದಿರುವ ಭೂ ಸಂತ್ರಸ್ಥರ ಹೆಸರು, ಪರಿಹಾರದ ಮೊತ್ತ ಮತ್ತು ಊರಿನ ವಿವರಗಳನ್ನು ನೀಡುವುದು ;

(ಈ) ಎತ್ತಿನಹೊಳೆ ಯೋಜನೆಯಡಿ ಇದುವರೆಗೂ ಪರಿಹಾರ ಪಡೆಯದ ಭೂ ಸಂತ್ರಸ್ಥರ ಹೆಸರು, ಪರಿಹಾರದ ಮೊತ್ತ ಮತ್ತು ಊರಿನ ವಿವರಗಳನ್ನು ನೀಡುವುದು; ಪರಿಹಾರ ನೀಡಲು ವಿಳಂಬವಾಗಿರುವುದಕ್ಕೆ ಕಾರಣಗಳೇನು ?

## ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕಿನ ಸೌಕೂರಿನ ಬಳಿ ವಾರಾಹಿ ನದಿಯಿಂದ ಕೈಗೊಳ್ಳುತ್ತಿರುವ ಏತ ನೀರಾವರಿ ಯೋಜನೆ ಕುರಿತು

**ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೯೦ (೧೮೧೫) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ನೀರಾವರಿ ನಿಗಮದಿಂದ ಉಡುಪಿ ಜಿಲ್ಲೆಯ ಕುಂದಾಪುರ ತಾಲ್ಲೂಕಿನ ಸೌಕೂರಿನ ಬಳಿ ವಾರಾಹಿ ನದಿಯಿಂದ ಕೈಗೊಳ್ಳುತ್ತಿರುವ ಏತ ನೀರಾವರಿ ಯೋಜನೆಗೆ ತಗಲುವ ಅಂದಾಜು ವೆಚ್ಚ ಎಷ್ಟು; ಕಾಮಗಾರಿ ಪೂರ್ಣಗೊಳಿಸಲು ಅವಶ್ಯವಿರುವ ಅವಧಿ ಎಷ್ಟು ;

(ಆ) ಈ ಯೋಜನೆಯ ಎಲ್ಲಾ ತಾಂತ್ರಿಕ ಮಾಹಿತಿ ಜೊತೆಗೆ ಅಚ್ಚುಕಟ್ಟು ಪ್ರದೇಶದ ಗ್ರಾಮವಾರು, ಸರ್ವೆ ನಂಬರ್‌ವಾರು ಮಾಹಿತಿ ನೀಡುವುದು ;

(ಇ) ಯಶಸ್ವಿ ಗುತ್ತಿಗೆದಾರರೊಂದಿಗೆ ಒಪ್ಪಂದ ಕರಾರು ಮಾಡಿಕೊಳ್ಳಲಾಗಿದೆಯೇ; (ಪ್ರತಿ ನೀಡುವುದು)

(ಈ) ಈ ಯೋಜನೆಯಲ್ಲಿ ನೀರು ಪಂಪ್ ಮಾಡಲು ಬಳಸುತ್ತಿರುವ ಪಂಪ್‌ಸೆಟ್‌ಗಳ ಸಾಮರ್ಥ್ಯ (HPಗಳಲ್ಲಿ) ಮತ್ತು ಸಂಖ್ಯೆ ಹಾಗೂ ಪೈಪ್‌ಗಳ ವ್ಯಾಸವೆಷ್ಟು ? (ವಿವರ ಒದಗಿಸುವುದು)

## ಪಶ್ಚಿಮ ವಾಹಿನಿ ಯೋಜನೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೨೯೧ (೧೪೪೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಶ್ಚಿಮ ವಾಹಿನಿ ಯೋಜನೆಯನ್ವಯ ರಾಜ್ಯದಲ್ಲಿ ಅನುಷ್ಠಾನಗೊಂಡ ಕಾಮಗಾರಿಗಳಾವುವು; ಇದಕ್ಕಾಗಿ ಎಷ್ಟು ಅನುದಾನ ಒದಗಿಸಲಾಗಿದೆ ; (ಸಂಪೂರ್ಣ ವಿವರ ನೀಡುವುದು)



(ಆ) ಕರಾವಳಿ ಜಿಲ್ಲೆಗಳಲ್ಲಿ ನೀರಿನ ಗುಣಮಟ್ಟ ಏರಿಸಲು ಸರ್ಕಾರ ಕೈಗೊಂಡ ಯೋಜನೆಗಳಾವುವು ; (ವಿವರ ನೀಡುವುದು)

(ಇ) ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಒಟ್ಟು ಎಷ್ಟು ಕಿಂಡಿ ಅಣೆಕಟ್ಟುಗಳಿವೆ ; ಎಷ್ಟು ಕಿಂಡಿ ಅಣೆಕಟ್ಟುಗಳಿಗೆ ಹಲಗೆಗಳಿಲ್ಲದೆ ನೀರು ಸಂಗ್ರಹಿಸಲು ಆಗುತ್ತಿಲ್ಲ ಎಂಬ ದೂರುಗಳಿವೆ ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ಎಷ್ಟು ಸಣ್ಣ ನೀರಾವರಿ ಯೋಜನೆ ಅನ್ವಯ ೨೦೧೯–೨೦ರಲ್ಲಿ ಯೋಜನೆಗಳನ್ನು ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಉ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯು ೨೦೧೯–೨೦ರಲ್ಲಿ ಕೈಗೊಂಡ ಕಾಮಗಾರಿಗಳೆಷ್ಟು ? (ವಿವರ ನೀಡುವುದು)

## ಕೆ.ಎಸ್.ಎಫ್.ಸಿ. ವತಿಯಿಂದ ಉದ್ದಿಮೆದಾರರ ಬಡ್ಡಿ ರಿಯಾಯಿತಿ ಯೋಜನೆ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೨೯೨ (೧೪೪೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೧೯ನೇ ಸಾಲಿನಲ್ಲಿ ಕೆ.ಎಸ್.ಎಫ್.ಸಿ. ವತಿಯಿಂದ ಕರ್ನಾಟಕ ಸರ್ಕಾರದ ಪರಿಶಿಷ್ಟ ಜಾತಿ/ಪಂಗಡಗಳ ಉದ್ದಿಮೆದಾರರ ಬಡ್ಡಿ ರಿಯಾಯಿತಿ ಯೋಜನೆ ಹಾಗೂ ಸಾಮಾನ್ಯ ಸಾಲ ಯೋಜನೆಯಡಿ ಎಷ್ಟು ಅರ್ಹ ಉದ್ದಿಮೆದಾರರಿಗೆ ಸಾಲ ಮಂಜೂರಾತಿ ಮಾಡಲಾಗಿದೆ ; (ವಿವರ ನೀಡುವುದು)

(ಆ) ಸದರಿ ಯೋಜನೆಯಡಿ ಅರ್ಜಿದಾರರಿಂದ ಪ್ರಕ್ರಿಯೆ ಶುಲ್ಕ ಪಾವತಿಸಿಕೊಂಡು, ಸಾಲ ಮಂಜೂರಾತಿ ಪತ್ರವನ್ನು ನೀಡಿ,

ಕೆ.ಐ.ಎ.ಡಿ.ಬಿ. ಕೈಗಾರಿಕಾ ನಿವೇಶನ ಗುತ್ತಿಗೆ ಪಡೆಯಲು ಮೊದಲನೆ ಕಂತು ಮಂಜೂರಾದ ಮತ್ತು ಮಂಜೂರು ಆಗಬೇಕಾಗಿರುವವರ ವಿವರ ನೀಡುವುದು ;

(ಇ) ಮೊದಲನೇ ಕಂತು ಬಿಡುಗಡೆ ಮಾಡುವುದರಲ್ಲಿ ತಾರತಮ್ಯ ಮಾಡಲಾಗಿದೆ ಎಂಬ ಆರೋಪ ಕೇಳಿಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪೊಲೀಸ್ ಅಧೀಕ್ಷಕರ ಕಛೇರಿ ವರ್ಗಾಯಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೨೯೩ (೧೪೪೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪೊಲೀಸ್ ಅಧೀಕ್ಷಕರ ಕಛೇರಿಯನ್ನು ಮಂಗಳೂರು ನಗರದಿಂದ ಹೊರಭಾಗಕ್ಕೆ ವರ್ಗಾಯಿಸಲು ಸರ್ಕಾರ ಕ್ರಮಕೈಗೊಳ್ಳುವುದಾಗಿ ತಿಳಿಸಿದ್ದರೂ ಕಾರ್ಯಗತಗೊಳ್ಳದೇ ಇರಲು ಕಾರಣಗಳೇನು ; (ವಿವರ ನೀಡುವುದು)

(ಆ) ಪೊಲೀಸ್ ಅಧಿಕ್ಷಕರ ಕಛೇರಿ ನಗರದಲ್ಲಿ ಕಾರ್ಯ ನಿರ್ವಹಿಸುವುದರಿಂದ ತುರ್ತು ಸಂದರ್ಭಗಳಲ್ಲಿ ತೊಂದರೆಗಳನ್ನು ಅನುಭವಿಸುವುದು ಸರ್ಕಾರದ ಗಮನದಲ್ಲಿದೆಯೇ ;

(ಇ) ಪೊಲೀಸ್ ಅಧಿಕ್ಷಕರ ಕಛೇರಿ ನಗರವನ್ನು ಬಿಟ್ಟು ಬಂಟ್ವಾಳದಲ್ಲಿ ತೆರೆಯಬೇಕೆಂಬ ಬೇಡಿಕೆ ಬಗ್ಗೆ ಸರ್ಕಾರ ಪರಿಶೀಲಿಸಿದೆಯೇ ; (ವಿವರ ನೀಡುವುದು)



(ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಖಾಲಿ ಇರುವ ಪೊಲೀಸ್ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ರಾಜ್ಯದಲ್ಲಿ ಬಳಕೆಯಾಗುವ ವಿದ್ಯುತ್ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

**೧೨೯೪ (೧೪೪೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–**

(ಅ) ರಾಜ್ಯದಲ್ಲಿ ಬಳಕೆಯಾಗುವ ಒಟ್ಟು ವಿದ್ಯುತ್ ಎಷ್ಟು; ಯಾವ ಯಾವ ಮೂಲಗಳಿಂದ ಉತ್ಪಾದನೆಯಾಗುತ್ತದೆ ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಉತ್ಪಾದನೆಯಾಗುವ ಪ್ರತಿ ಯೂನಿಟ್‌ಗೆ ತಗಲುವ ವೆಚ್ಚ ಎಷ್ಟು; ನಿರ್ವಹಣೆ ವೆಚ್ಚ ಎಷ್ಟು; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಒಟ್ಟು ಎಷ್ಟು ಜಲವಿದ್ಯುತ್ ಉತ್ಪಾದನಾ ಕೇಂದ್ರಗಳಿವೆ; ಅದರಲ್ಲಿ ಖಾಸಗಿ ಉತ್ಪಾದನಾ ಕೇಂದ್ರಗಳು ಎಷ್ಟು ; ಸರ್ಕಾರಿ ಉತ್ಪಾದನಾ ಕೇಂದ್ರಗಳೆಷ್ಟು ; (ವಿವರ ನೀಡುವುದು)

(ಈ) ರಾಜ್ಯದಲ್ಲಿ ೨೪ ಗಂಟೆ ವಿದ್ಯುತ್ ಪೂರೈಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; ಇದ್ದರೆ, ವಿವರ ನೀಡುವುದು ;

(ಉ) ರೈತರಿಗೆ ಉಚಿತ ವಿದ್ಯುತ್ ಪೂರೈಸಲು ಸರ್ಕಾರಕ್ಕೆ ತಗಲುವ ಅಂದಾಜು ವೆಚ್ಚ ಎಷ್ಟು ? (ವಿವರ ನೀಡುವುದು)

## ಕರಾವಳಿ ಅಭಿವೃದ್ಧಿ ಪ್ರಾಧಿಕಾರದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೨೫೫ (೧೪೪೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೯-೨೦ನೇ ಸಾಲಿನಲ್ಲಿ ಕರಾವಳಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; (ವಿವರ ನೀಡುವುದು)

(ಆ) ೨೦೧೮-೧೯, ೨೦೧೯-೨೦ರಲ್ಲಿ ಎಷ್ಟು ಹೊಸ ಕಾಮಗಾರಿಗಳನ್ನು ಪ್ರಾಧಿಕಾರದಿಂದ ತೆಗೆದುಕೊಳ್ಳಲಾಗಿದೆ ; ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ ; ಬಾಕಿ ಇರುವ ಕಾಮಗಾರಿಗಳು ಎಷ್ಟು ; (ವಿವರಗಳನ್ನು ಒದಗಿಸುವುದು)

(ಇ) ಕರಾವಳಿ ಅಭಿವೃದ್ಧಿ ಪ್ರಾಧಿಕಾರಕ್ಕೆ ಪೂರ್ಣಕಾಲಿಕ ಕಾರ್ಯದರ್ಶಿಗಳು ಇಲ್ಲದೇ ಕಾಮಗಾರಿಗಳು ವಿಳಂಬಗೊಳ್ಳುತ್ತಿರುವುದು ಪ್ರಾಧಿಕಾರಕ್ಕೆ ಹೊರೆಯಾಗುತ್ತಿರುವುದರ ಬಗ್ಗೆ ಸರ್ಕಾರದ ಗಮನದಲ್ಲಿದೆಯೇ ; ಪ್ರಾರಂಭದಿಂದ ಈವರೆಗೆ ಬಿಡುಗಡೆ ಮಾಡಿದ ಅನುದಾನ ಎಷ್ಟು ; (ಪೂರ್ಣ ವಿವರ ನೀಡುವುದು)

(ಈ) ಪ್ರಾಧಿಕಾರದ ಮೂಲ ಉದ್ದೇಶವನ್ನು ಈಡೇರಿಸದೇ ಪ್ರಾಧಿಕಾರವನ್ನು ಸ್ಥಗಿತಗೊಳಿಸುವುದರ ಬಗ್ಗೆ ಸರ್ಕಾರ ಗಮನ ಹರಿಸಿದೆಯೇ ?



## ಭದ್ರಾ ಮೇಲ್ದಂಡೆ ಯೋಜನೆಯಿಂದ ತಾಲ್ಲೂಕುಗಳಿಗೆ ನೀರಿನ ಸೌಲಭ್ಯ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಹಾಗೂ ಶ್ರೀಮತಿ ಜಯಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೨೫೬ (೧೪೯೦+೧೪೯೧) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿಯು ಯಾವ ಹಂತದಲ್ಲಿದೆ ; ಈ ಯೋಜನೆಯ ಒಟ್ಟು ವೆಚ್ಚವೆಷ್ಟು; ಈಗಾಗಲೇ ಈ ಯೋಜನೆಗೆ ಖರ್ಚಾಗಿರುವ ಹಣ ಎಷ್ಟು ;

(ಆ) ಈ ಯೋಜನೆ ಸಂಪೂರ್ಣಗೊಳ್ಳಲು ಇನ್ನು ಎಷ್ಟು ಕಾಲಾವಕಾಶ ಬೇಕಾಗಿದೆ ;

(ಇ) ಭದ್ರಾ ಮೇಲ್ದಂಡೆ ಯೋಜನೆಯಿಂದ ಎಷ್ಟು ತಾಲ್ಲೂಕುಗಳಿಗೆ ನೀರಿನ ಸೌಲಭ್ಯ ದೊರಕುತ್ತದೆ ; (ತಾಲ್ಲೂಕುಗಳ ವಿವರಗಳನ್ನು ನೀಡುವುದು)

(ಈ) ಈ ಯೋಜನೆಗೆ ಎಷ್ಟು ಭೂಮಿಯನ್ನು ವಶಪಡಿಸಿಕೊಳ್ಳಲಾಗಿದೆ; ವಶಪಡಿಸಿಕೊಂಡ ಭೂಮಿಗೆ ಪರಿಹಾರವನ್ನು ನೀಡಲಾಗಿದೆಯೇ; ಇನ್ನು ಏನಾದರೂ ಪರಿಹಾರ ಬಾಕಿ ಇದೆಯೇ; (ವಿವರ ನೀಡುವುದು)

(ಉ) ಚಿತ್ರದುರ್ಗ ಜಿಲ್ಲೆ ಮೊಳಕಾಲ್ಮೂರು, ಚಳ್ಳಕೆರೆ ತಾಲ್ಲೂಕಿನ ಯಾವ ಯಾವ ಕೆರೆಗಳಿಗೆ ಇದರಿಂದ ನೀರು ತುಂಬಿಸಲಾಗುವುದು ? (ವಿವರ ನೀಡುವುದು)

## ರಾಜಕಾಲುವೆಗೆ ಮಳೆ ನೀರುಗಾಲುವೆ ಮೇಲ್ಛಾವಣಿ ಅಳವಡಿಸುವ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೨೯೭ (೧೫೩೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿರುವ ಒಟ್ಟು ರಾಜಕಾಲುವೆಗಳು ಎಷ್ಟು ;

(ಆ) ಈ ರಾಜ ಕಾಲುವೆಗೆ ಮಳೆ ನೀರುಗಾಲುವೆ ಮೇಲ್ಛಾವಣಿ ನಿರ್ಮಾಣ ಮಾಡಲಾಗಿದೆಯೇ ;

(ಇ) ೨೦೧೬-೧೭ ಮತ್ತು ೨೦೧೭-೧೮ನೇ ಸಾಲಿನಲ್ಲಿ ಮುಖ್ಯಮಂತ್ರಿಗಳ ನಗರೋತ್ಥಾನ ಅನುದಾನದ ಅಡಿಯಲ್ಲಿ ಆರ್ ಎಂ.ವಿ. ೨ನೇ ಹಂತ, ಡಾಲರ್ಸ್ ಕಾಲೋನಿಯಲ್ಲಿ ಪ್ರಾಯೋಗಿಕವಾಗಿ ನಿರ್ಮಿಸಿದ ಮಳೆ ನೀರುಗಾಲುವೆ ಮೇಲ್ಛಾವಣೆಯ ಮಾದರಿಯಲ್ಲಿ ಉಳಿದ ರಾಜಕಾಲುವೆಗಳಲ್ಲಿ ಇದೇ ರೀತಿಯ ಕಾಮಗಾರಿ ಮಾಡಲು ಸರ್ಕಾರ ಚಿಂತಿಸಿದೆಯೇ ;

(ಈ) ಈ ಮಾದರಿಯ ಮೇಲ್ಛಾವಣಿಯಿಂದ ಸೊಳ್ಳೆಗಳ ನಿಯಂತ್ರಣ, ಪರಿಸರ ಮಾಲಿನ್ಯ, ಹೆಚ್ಚು ಮಳೆಯಾದಾಗ ಆಗುವ ಸಾವು ನೋವುಗಳು ಡೆಂಗ್ಯೂ, ಮಲೇರಿಯಾದಂತಹ ಮಾರಕ ರೋಗಗಳಿಂದ ರಕ್ಷಣೆ ಪಡೆಯಬಹುದಲ್ಲವೇ ?

## ಬೆಂಗಳೂರು ಮೆಟ್ರೋ ಕಾಮಗಾರಿ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೨೯೮ (೧೫೨೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–



(ಅ) ಬೆಂಗಳೂರು ಮೆಟ್ರೋ ಕಾಮಗಾರಿ ನಡೆಯುತ್ತಿರುವ ರಸ್ತೆಗಳೆಲ್ಲಾ ಗುಂಡಿಬಿದ್ದು, ವಾಹನ ಸಂಚಾರಕ್ಕೆ ತೀವ್ರ ಅಡಚಣೆಯಾಗಿ ಅಪಘಾತಗಳು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮೆಟ್ರೋ ಕಾಮಗಾರಿ ನಡೆಯುತ್ತಿರುವ ರಸ್ತೆಗಳನ್ನು ರಿಪೇರಿ ಮಾಡಿ ವಾಹನ/ಜನ ಸಂಚಾರಕ್ಕೆ ಸುಗಮಗೊಳಿಸಲಾಗುವುದೇ ;

(ಇ) ಬೆಂಗಳೂರು ನಾಗಸಂದ್ರದಿಂದ ನೆಲಮಂಗಲದವರೆಗೆ ಹಮ್ಮಿಕೊಂಡಿರುವ ಮೆಟ್ರೋ ಕಾಮಗಾರಿಯು ಯಾವಾಗ ಮುಕ್ತಾಯಗೊಳ್ಳಲಿದೆ ; ಇದಕ್ಕೆ ತಗಲುವ ವೆಚ್ಚವೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಸೋಲಾರ್ ವಿದ್ಯುತ್ ಉತ್ಪಾದನೆ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೨೯೯ (೧೫೩೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸೋಲಾರ್ ವಿದ್ಯುತ್ ಉತ್ಪಾದನೆ ಮಾಡುವ ಯೋಜನೆ ಎಂದಿನಿಂದ ಜಾರಿಗೆ ಬಂದಿದೆ; ರಾಜ್ಯದಲ್ಲಿ ಸದರಿ ಯೋಜನೆಯ ಅಡಿಯಲ್ಲಿ ಎಷ್ಟು ಜನ ರೈತರ ಜಮೀನಿನಲ್ಲಿ ಸೋಲಾರ್ ಉತ್ಪಾದನೆ ಮಾಡಲು ಇಲ್ಲಿಯವರೆವಿಗೆ ಬಂದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಬಂದಿದ್ದಲ್ಲಿ, ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಬಂದ ಅರ್ಜಿಗಳಲ್ಲಿ ಪರಿಗಣಿಸಿದವರ ಸಂಖ್ಯೆ ಎಷ್ಟು ; ಎಷ್ಟು ರೈತರಿಂದ ಸೋಲಾರ್ ವಿದ್ಯುತ್ ಖರೀದಿಸಲು ಕರಾರು ಮಾಡಿಕೊಳ್ಳಲಾಗಿದೆ ; ರೈತರಿಗೆ ಇದರಿಂದಾಗುವ ಪ್ರಯೋಜನೆಗಳಾವುವು ;

(ಇ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಸೋಲಾರ್ ಯೋಜನೆಯಿಂದ ಇದುವರೆಗೂ ಎಷ್ಟು ಮೆಗಾ ವ್ಯಾಟ್ ಸೋಲಾರ್ ವಿದ್ಯುತ್ ಉತ್ಪಾದನೆ ಮಾಡಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಹುತಾತ್ಮರಾದ ಸೈನಿಕರ ಕುರಿತು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೩೦೦ (೧೫೨೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಮ್ಮ ರಾಜ್ಯಕ್ಕೆ ಸೇರಿದ್ದ ಹುತಾತ್ಮರಾದ ಸೈನಿಕರುಗಳ ಸಂಖ್ಯೆ ಎಷ್ಟು; (ಕಳೆದ ೦೩ ವರ್ಷಗಳ ಸಂಪೂರ್ಣ ವಿವರ ನೀಡುವುದು)

(ಆ) ಹುತಾತ್ಮರಾದ ಕುಟುಂಬ ವರ್ಗಕ್ಕೆ ಸರ್ಕಾರದಿಂದ ಯಾವ ಯಾವ ರೀತಿಯ ಪರಿಹಾರ ಮತ್ತು ಅನುಕೂಲ ಕಲ್ಪಸಿ ಕೊಡಲಾಗಿದೆ ; ಹಾಗೂ ಕಲ್ಪಿಸಿಕೊಡುವ ಬಗ್ಗೆ ಸಂಪೂರ್ಣ ವಿವರ ನೀಡುವುದು ; (ಪ್ರತ್ಯೇಕವಾಗಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿವರ ನೀಡುವುದು)

(ಇ) ಹೀಗೆ ಹುತಾತ್ಮರಾದ ಕುಟುಂಬ ವರ್ಗದವರಿಗೆ ಸರ್ಕಾರಿ ಕೆಲಸವನ್ನು ಕೋರಿ ಎಷ್ಟು ಅರ್ಜಿಗಳು ಬಂದಿರುತ್ತದೆ ; ಈ ಅರ್ಜಿಗಳನ್ನು ಪರಿಗಣಿಸಿ ಎಷ್ಟು ಯೋಧರ ಕುಟುಂಬವರ್ಗದವರಿಗೆ ಕೆಲಸವನ್ನು ನೀಡಲಾಗಿದೆ; ಹಾಗೂ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)



## ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ನೌಕರರ ಸಂಖ್ಯೆ ಖಾಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೦೧ (೧೪೬೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ನೌಕರರ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಆ) ಇದರಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳನ್ನು ಎಷ್ಟು ವರ್ಷಗಳಿಂದ ಭರ್ತಿ ಮಾಡಿರುವುದಿಲ್ಲ ; (ವಿವರ ನೀಡುವುದು)

(ಇ) ಹುದ್ದೆಗಳು ಖಾಲಿ ಇರುವುದರಿಂದ ಸರ್ಕಾರದ ಕೆಲಸ ಕಾರ್ಯಗಳಿಗೆ ಅಭಿವೃದ್ಧಿ ಕಾರ್ಯಗಳು ಕುಂಠಿತವಾಗಿಲ್ಲವೇ ;

(ಈ) ಅತ್ಯಗತ್ಯ ಸೇವೆಗಳ ಇಲಾಖೆಗಳಾದ ಆರೋಗ್ಯ, ಪೊಲೀಸ್, ಅರಣ್ಯ, ಶಿಕ್ಷಣ ಮತ್ತು ಕಂದಾಯ ಇಲಾಖೆಗಳಲ್ಲಿ ಖಾಲಿ ಇರುವ ಸಂಪೂರ್ಣ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರಕ್ಕಿರುವ ತೊಂದರೆಯಾದರು ಏನು ;

(ಉ) ಅದೇ ರೀತಿಯಾಗಿ ರಾಜ್ಯದಲ್ಲಿರುವ ನಿರುದ್ಯೋಗಿಗಳ ಸಂಖ್ಯೆ ಎಷ್ಟು ;

(ಊ) ಕನಿಷ್ಠ ಪಕ್ಷ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿದ್ದಲ್ಲಿ ದೊಡ್ಡ ಸಂಖ್ಯೆಯಲ್ಲಿರುವ ನಿರುದ್ಯೋಗಿಗಳ ಬವಣೆಯನ್ನು ಪರಿಹರಿಸಲು ಸರ್ಕಾರ ನಡೆಸಿರುವ ಚಿಂತನೆ ಏನು ? (ವಿವರ ನೀಡುವುದು)

## ಹೇಮಾವತಿ ಜಲಾಶಯದಿಂದ ತುಮಕೂರು ಜಿಲ್ಲೆಯ ಕೆರೆಗಳಿಗೆ ನೀರು ತುಂಬಿಸುವ ಬಗ್ಗೆ

**ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೦೨ (೧೪೮೭) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆಯಲ್ಲಿರುವ ಕೆರೆಗಳಿಗೆ ನೀರು ತುಂಬಿಸಲು ಹೇಮಾವತಿ ನಾಲಾ ವ್ಯಾಪ್ತಿಗೆ ಬರುವ ಕೆರೆಗಳು ಯಾವುವು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ೨೦೧೯–೨೦ನೇ ಸಾಲಿನಲ್ಲಿ ಹೇಮಾವತಿ ನಾಲಾ ವ್ಯಾಪ್ತಿಗೆ ಬರುವ ಎಷ್ಟು ಕೆರೆಗಳಿಗೆ ನೀರು ತುಂಬಿಸಲಾಗಿದೆ ; ಇದಕ್ಕಾಗಿ ಕೈಗೊಂಡಿರುವ ಕಾಮಗಾರಿಗಳಾವುವು ; ಮತ್ತು ಇದಕ್ಕೆ ಖರ್ಚು ಮಾಡಿರುವ ಹಣವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಇಲ್ಲಿಯ ತನಕ ಎಷ್ಟು ಟಿ.ಎಂ.ಸಿ ನೀರನ್ನು ತುಮಕೂರು ಜಿಲ್ಲೆಗೆ ಹರಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ತುಮಕೂರು ಜಿಲ್ಲೆಯಲ್ಲಿ ಬರುವ ಕೆರೆಗಳಿಗೆ ಹೇಮಾವತಿ ನಾಲೆಯಿಂದ ಸರಾಗವಾಗಿ ನೀರು ಹರಿದು ಬರಲು ವೈಜ್ಞಾನಿಕವಾಗಿ ಕಾರ್ಯಕ್ರಮಗಳನ್ನು ರೂಪಿಸಿ ಮುಂದಿನ ದಿನಗಳಲ್ಲಿ ಸಂಪೂರ್ಣವಾಗಿ ಕೆರೆಗಳಿಗೆ ನೀರು ತುಂಬಿಸಲು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಉ) ೨೦೧೬–೧೭ನೇ ಸಾಲಿನಲ್ಲಿ ಈ ನಾಲಾ ವ್ಯಾಪ್ತಿಯಲ್ಲಿ ಕೈಗೊಳ್ಳುವ ಕಾಮಗಾರಿಗಳು ಯಾವುವು ; ಹಾಗೂ ಇದಕ್ಕಾಗಿ ಸದರಿ ಸಾಲಿಗೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನವೆಷ್ಟು ; (ವಿವರ ನೀಡುವುದು)



(ಊ) ಹೇಮಾವತಿ ನಾಲಾ ವ್ಯಾಪ್ತಿಯಲ್ಲಿರುವ ಪ್ರಮುಖ ನಾಲೆಗಳ ವಿಸ್ತೀರ್ಣ ಉಪನಾಲೆಗಳ ವಿಸ್ತೀರ್ಣ ಇತರೆ ನಾಲೆಗಳ ವಿಸ್ತೀಣವೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ರಾಜ್ಯದಲ್ಲಿರುವ ಜಲಾಶಯಗಳಲ್ಲಿ ಹೂಳು ತುಂಬಿರುವ ಕುರಿತು

**ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೦೩ (೧೪೯೩) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಜಲಾಶಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು) (ಬೃಹತ್/ಮಧ್ಯಮ/ಚಿಕ್ಕ ಜಲಾಶಯಗಳು ಸೇರಿದಂತೆ)

(ಆ) ಈ ಜಲಾಶಯಗಳನ್ನು ಯಾವಾಗ ನಿರ್ಮಿಸಲಾಗಿದೆ; ಮತ್ತು ಎಷ್ಟು ಪ್ರಮಾಣದ ನೀರಿನ ಸಂಗ್ರಹದ ಸಾಮರ್ಥ್ಯ ಹೊಂದಿದೆ ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಈ ಜಲಾಶಯಗಳಲ್ಲಿ ಇಲ್ಲಿಯ ತನಕ ಎಷ್ಟು ಬಾರಿ ಹೂಳನ್ನು ತೆಗೆಯಲಾಗಿದೆ ; (ಮಾಹಿತಿ ಒದಗಿಸುವುದು)

(ಈ) ಈ ಜಲಾಶಯಗಳಲ್ಲಿ ಹೂಳು ತುಂಬಿರುವುದರಿಂದ ನೀರಿನ ಸಂಗ್ರಹದ ಸಾಮರ್ಥ್ಯ ಕಡಿಮೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೆ ;

(ಉ) ಬಂದಿದ್ದಲ್ಲಿ, ಸರ್ಕಾರವು ಜಲಾಶಯಗಳಲ್ಲಿ ಹೂಳು ತೆಗೆಯಲು ಹಾಕಿಕೊಂಡಿರುವ ಕಾರ್ಯಕ್ರಮಗಳೇನು ? (ಪೂರ್ಣ ಮಾಹಿತಿ ನೀಡುವುದು)

## ಭದ್ರಾ ಮೇಲ್ದಂಡೆ ಹಾಗೂ ಎತ್ತಿನ ಹೊಳೆ ಯೋಜನೆಯ ಬಗ್ಗೆ

**ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೦೪ (೧೪೭೨) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಧ್ಯ ಕರ್ನಾಟಕ ಮತ್ತು ಭದ್ರಾ ಮೇಲ್ದಂಡೆ ಹಾಗೂ ಎತ್ತಿಹೊಳೆ ಯೋಜನೆಯ ಅನುಷ್ಠಾನಕ್ಕೆ ವಿಶ್ವೇಶ್ವರಯ್ಯ ಜಲ ನಿಗಮ ಎನ್ನುವ ಪ್ರತ್ಯೇಕ ನೀರಾವರಿ ನಿಗಮವನ್ನು ಸ್ಥಾಪಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಈ ನಿಗಮದ ವ್ಯಾಪ್ತಿಗೆ ಬರುವ ಜಿಲ್ಲೆಗಳು ಯಾವುವು; ಹಾಗೂ ಈ ನಿಗಮದ ವ್ಯಾಪ್ತಿಯಲ್ಲಿ ತೆಗೆದುಕೊಳ್ಳುವ ನೀರಾವರಿ ಕಾಮಗಾರಿಗಳಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ೨೦೧೬–೧೭, ೨೦೧೭–೧೮, ೨೦೧೮–೧೯ ಮತ್ತು ೨೦೧೯–೨೦ನೇ ಸಾಲಿನಲ್ಲಿ ಈ ನಿಗಮದ ವ್ಯಾಪ್ತಿಯಲ್ಲಿ ಬರುವ ಜಿಲ್ಲೆಗಳಲ್ಲಿ ಕೈಗೊಳ್ಳುವ ಕಾಮಗಾರಿಗಳಿಗಾಗಿ ಬಿಡುಗಡೆ ಮಾಡಿರುವ ಹಣವೆಷ್ಟು; ಬಿಡುಗಡೆ ಮಾಡಿದ ಹಣದಲ್ಲಿ ಇಲ್ಲಿಯ ತನಕ ಖರ್ಚು ಮಾಡಿರುವ ಹಣವೆಷ್ಟು; (ವಿವರ ನೀಡುವುದು)

(ಈ) ಅದೇ ರೀತಿಯಾಗಿ ತುಮಕೂರು ಜಿಲ್ಲೆಯಲ್ಲಿ ಸದರಿ ನಿಗಮದ ವ್ಯಾಪ್ತಿಗೆ ಬರುವ ಯಾವ ಯಾವ ಕಾಮಗಾರಿಗಳನ್ನು ಇಲ್ಲಿಯ ತನಕ ಕೈಗೊಳ್ಳಲಾಗಿದೆ ಹಾಗೂ ಇದಕ್ಕಾಗಿ ಬಿಡುಗಡೆ ಮಾಡಿ ಖರ್ಚು ಮಾಡಿರುವ ಹಣವೆಷ್ಟು ; (ವಿವರವಾದ ಮಾಹಿತಿಯನ್ನು ನೀಡುವುದು)



(ಉ) ಎತ್ತಿನಹೊಳೆ ಯೋಜನೆಯ ಕಾಮಗಾರಿಗಳನ್ನು ಸದರಿ ನಿಗಮದ ವತಿಯಿಂದ ಅನುಷ್ಠಾನಗೊಳಿಸಲಾಗುತ್ತಿದೆಯೇ ; ಹಾಗೂ ಈ ಯೋಜನೆಗೆ ಇಲ್ಲಿಯು ತನಕ ಬಿಡುಗಡೆ ಮಾಡಿರುವ ಅನುದಾನವೆಷ್ಟು ;

(ಊ) ಬಿಡುಗಡೆ ಮಾಡಿದ ಅನುದಾನದಲ್ಲಿ ಇಲ್ಲಿಯ ತನಕ ಖರ್ಚು ಮಾಡಿ ಎಲ್ಲೆಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ದಕ್ಷಿಣ ಪಿನಾಕಿನಿ ನದಿ ಯೋಜನೆ ಬಗ್ಗೆ

ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–

೧೩೦೫ (೧೫೪೯) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಪಿನಾಕಿನಿ ಪುನರ್ ಜೀವನಕ್ಕೆ ಭಾರಿ ಯೋಜನೆಯನ್ನು ರೂಪಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ದಕ್ಷಿಣ ಪಿನಾಕಿನಿ ಪುನರ್ ಜೀವನ ಟ್ರಸ್ಟ್ ಅನ್ನು ಯಾವಾಗ ನೊಂದಣಿ ಮಾಡಲಾಗಿದೆ ಮತ್ತು ಈ ಟ್ರಸ್ಟ್ ಬಗ್ಗೆ ಪೂರ್ಣ ಮಾಹಿತಿ ನೀಡುವುದು ;

(ಇ) ಈ ಯೋಜನೆಗೆ ಖರ್ಚು ಮಾಡಲು ತಯಾರಿಸಲಾಗಿರುವ ಯೋಜನಾ ವೆಚ್ಚದ ಮೊತ್ತವೆಷ್ಟು ಹಾಗೂ ಈ ಹಣವನ್ನು ಯಾವ ರೀತಿ ಹೊಂದಿಸಲಾಗುವುದು ; (ಮಾಹಿತಿ ನೀಡುವುದು)

(ಈ) ದಕ್ಷಿಣ ಪಿನಾಕಿನಿ ಪುನರ್ ಜೀವನದ ಬಗ್ಗೆ ಕೆಲ ಹಂತದಲ್ಲಿ ಆಕ್ಷೇಪಗಳು ಕೇಳಿಬಂದಿರುವುದು, ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ, ಆ ಆಕ್ಷೇಪಣೆಗಳ ನಿವಾರಣೆಗೆ ಕೈಗೊಂಡ ಕ್ರಮಗಳೇನು ;

(ಉ) ಈ ಯೋಜನೆಗೆ ಕೇಂದ್ರ ಅರಣ್ಯ ಮತ್ತು ಪರಿಸರ ಇಲಾಖೆ ಮತ್ತು ಹಸಿರು ಪೀಠದಿಂದ ಒಪ್ಪಿಗೆಗಾಗಿ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಆಲಮಟ್ಟಿ ಜಲಾಶಯದ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೦೬ (೧೫೪೭) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷ್ಣಾ ನ್ಯಾಯಾಧೀಕರಣ–೨ ಐತೀರ್ಪು ಪ್ರಕಟವಾಗಿ ದಶಕವೇ ಕಳೆದರೂ ರಾಜ್ಯಕ್ಕೆ ಹಂಚಿಕೆಯಾದ ಆಲಮಟ್ಟಿ ಜಲಾಶಯದ ಸಂಪೂರ್ಣ ನೀರನ್ನು ರಾಜ್ಯ ಬಳಸಿಕೊಳ್ಳುವಲ್ಲಿ ವಿಫಲವಾಗಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ನ್ಯಾಯಾಧೀಕರಣದ ತೀರ್ಪಿನಂತೆ ಆಲಮಟ್ಟಿ ಜಲಾಶಯದ ಎತ್ತರವನ್ನು ೫೨೪.೨೫೬ ಮೀ.ಗೆ. ಎತ್ತರಿಸಿ ರಾಜ್ಯಕ್ಕೆ ಹಂಚಿಕೆಯಾಗಿರುವ ಸಂಪೂರ್ಣ ನೀರನ್ನು ಬಳಸಿಕೊಂಡು ರಾಜ್ಯದ ರೈತರ ಲಕ್ಷಾಂತರ ಎಕರೆ ಭೂಮಿಗೆ ನೀರುಣಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಐತೀರ್ಪಿನಂತೆ ರಾಜ್ಯಗಳ ನಡುವೆ ಆಲಮಟ್ಟಿ ಜಲಾಶಯದ ನೀರಿನ ಹಂಚಿಕೆಯ ಸಂಪೂರ್ಣ ವಿವರ ಒದಗಿಸುವುದು ; ಇದರಲ್ಲಿ ರಾಜ್ಯಕ್ಕೆ ಎಷ್ಟು ಟಿ.ಎಂ.ಸಿ. ನೀರು ಹಂಚಿಕೆಯಾಗಿದೆ; ಇದರಿಂದ ಎಷ್ಟು ಹೆಕ್ಟೇರ್ ರೈತರ ಜಮೀನು ನೀರಾವರಿಗೆ ಒಳಪಡಲಿದೆ ; ಸಂಪೂರ್ಣ ನೀರನ್ನು ಬಳಸಿಕೊಳ್ಳಲು ಸರ್ಕಾರವು ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ; ಅವು ಯಾವ ಹಂತದಲ್ಲಿವೆ ; (ವಿವರ ನೀಡುವುದು)



(ಈ) ಐತೀರ್ಪಿನಂತೆ ಆಲಮಟ್ಟಿ ಜಲಾಶಯದ ಎತ್ತರವನ್ನು ಎತ್ತರಿಸಲು ಬೇಕಾಗುವ ಅಂದಾಜು ಅನುದಾನವೆಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; (ವಿವರ ಒದಗಿಸುವುದು)

(ಉ) ಆಲಮಟ್ಟಿ ಜಲಾಶಯದ ಎತ್ತರವನ್ನು ಎತ್ತರಿಸುವುದರಿಂದ ಎಷ್ಟು ಗ್ರಾಮಗಳು ಮತ್ತು ಎಷ್ಟು ಭೂಪ್ರದೇಶ ಮುಳುಗಡೆಯಾಗಲಿದೆ ; ಅವುಗಳ ಸ್ಥಳಾಂತರಕ್ಕೆ ಹಾಗೂ ಪುನರ್‌ವಸತಿ ಕಲ್ಪಿಸಲು ತಗಲುವ ಅಂದಾಜು ವೆಚ್ಚವೆಷ್ಟು ; ಈ ಸಂಬಂಧ ಸರ್ಕಾರ ತೆಗೆದುಕೊಂಡ ಕ್ರಮಗಳೇನು ; (ವಿವರ ಒದಗಿಸುವುದು)

(ಊ) ಸದರಿ ಯೋಜನೆಯನ್ನು ರಾಷ್ಟ್ರೀಯ ಯೋಜನೆಯನ್ನಾಗಿ ಪರಿಗಣಿಸಿ ಇದಕ್ಕೆ ವಿಶ್ವ ಬ್ಯಾಂಕ್ ಅಥವಾ ಕೇಂದ್ರ ಸರ್ಕಾರದಿಂದ ಹಣಕಾಸು ನೆರವು ಪಡೆಯಲು ಸರ್ಕಾರ ಚಿಂತಿಸಿದೆಯೇ ; ಯಾವ ಕಾಲಮಿತಿಯಲ್ಲಿ ಸದರಿ ಯೋಜನೆಯು ಪೂರ್ಣಗೊಳ್ಳುವುದು ?

## ಪತ್ರಕರ್ತರ ಆರೋಗ್ಯ ವಿಮಾ ಯೊಜನೆ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೦೭ (೧೫೦೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪತ್ರಕರ್ತರಿಗೆ ಆರೋಗ್ಯ ವಿಮಾ ಯೋಜನೆ ಜಾರಿಗೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ವರ್ಷದಿಂದ ಜಾರಿಗೆ ಬಂದಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಪತ್ರಕರ್ತರ ಆರೋಗ್ಯ ವಿಮಾ ಯೋಜನೆಗೆ ಆಯ್ಕೆಯಾಗಿರುವ ಫಲಾನುಭವಿಗಳ ಹೆಸರು ಮತ್ತು ವಿವರ ನೀಡುವುದು ;

(ಈ) ಮಾನ್ಯತಾ ಪತ್ರ ಹೊಂದಿಲ್ಲದ ಪತ್ರಕರ್ತರನ್ನೂ ಈ ಯೋಜನೆಗೆ ಸೇರಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಕಾರಣವೇನು ? (ವಿವರ ನೀಡುವುದು)

## ಅನಿವಾಸಿ ಭಾರತೀಯರ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೦೮ (೧೫೫೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಮೂಲದ (ಅನಿವಾಸಿ ಕನ್ನಡಿಗರು) ಎಷ್ಟು ಜನರು ಬೇರೆ ದೇಶಗಳಲ್ಲಿ ವಾಸವಾಗಿದ್ದಾರೆ ; (ವಿವರ ನೀಡುವುದು)

(ಆ) ರಾಜ್ಯ ಹೊರತಂದಿರುವ ಅನಿವಾಸಿ ಭಾರತೀಯ ನೀತಿ ಅನುಷ್ಠಾನದ ಪ್ರಗತಿಯ ವಿವರ ನೀಡುವುದು ;

(ಇ) ಅನಿವಾಸಿ ಕನ್ನಡಿಗರ ಸಂಸ್ಥೆಗಳಿಗೆ ಕಳೆದ ಎರಡು ವರ್ಷಗಳಲ್ಲಿ ಸಹಾಯಧನ ನೀಡಿರುವ ವಿವರ ನೀಡುವುದು ;

(ಈ) ಅನಿವಾಸಿ ಕನ್ನಡಿಗರ ಕ್ಷೇಮಾಭಿವೃದ್ಧಿಗೆ ಯಾವ ಕ್ರಮವನ್ನು ಕೈಗೊಳ್ಳಲಾಗುತ್ತಿದೆ ? (ವಿವರ ನೀಡುವುದು)

## ಬೆಂಗಳೂರು ನಗರದಲ್ಲಿನ Membership club ಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೦೯ (೧೫೫೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–



(ಅ) ಬೆಂಗಳೂರು ನಗರದಲ್ಲಿ Membership clubಗಳು ಎಷ್ಟಿವೆ ; ಸರ್ಕಾರಕ್ಕೆ ಇದರಿಂದ ಬರುತ್ತಿರುವ ಆದಾಯ ಎಷ್ಟು ;

(ಆ) ಸದರಿ ಕ್ಲಬ್‌ಗಳ ಪೈಕಿ ಎಷ್ಟು ಕ್ಲಬ್‌ಗಳಿಗೆ ಸರ್ಕಾರದಿಂದ ಗುತ್ತಿಗೆ ಆಧಾರದ ಮೇಲೆ ಸ್ಥಳ (ಜಮೀನು) ನೀಡಲಾಗಿದೆ ;

(ಇ) ಈ ಕ್ಲಬ್‌ಗಳಿಗೆ ನೀಡಿರುವ ಸ್ಥಳ (ಜಮೀನು) ದ ಈಗಿನ ಮಾರುಕಟ್ಟೆಯ ಮೌಲ್ಯ (ಬೆಲೆ) ಎಷ್ಟು; (ವಿವರ ನೀಡುವುದು)

(ಈ) ಈ ಕ್ಲಬ್‌ಗಳಿಗೆ ವಾರ್ಷಿಕ ಎಷ್ಟು ಗುತ್ತಿಗೆ ದರವನ್ನು ನಿಗಧಿಪಡಿಸಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## ಬನಶಂಕರಿ ೬ನೇ ಹಂತದ ೪ನೇ 'ಟಿ' ಬ್ಲಾಕ್ ಬಡಾವಣೆಯ ಕುಂದುಕೊರತೆಗಳ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :–**

೧೩೧೦ (೧೪೬೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಿರ್ಮಾಣಗೊಂಡಿರುವ ಬನಶಂಕರಿ ೬ನೇ ಹಂತದ ೪ನೇ 'ಟಿ' ಬ್ಲಾಕ್ (ಮುಂದುವರೆದ ಬಡಾವಣೆ)ನಲ್ಲಿ ನಿರ್ಮಿಸಿರುವ ಮನೆಗಳಿಗೆ ಕಾವೇರಿ ನೀರಿನ ಪೂರೈಕೆಯನ್ನು ಒದಗಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಬಡಾವಣೆಗೆ ಇದುವರೆವಿಗೂ ಕಾವೇರಿ ನೀರಿನ ಪೂರೈಕೆಯನ್ನು ಒದಗಿಸದಿರುವುದಕ್ಕೆ ಕಾರಣವೇನು ;

(ಇ) ಇಲ್ಲಿನ ನಾಗರಿಕರು ಕುಡಿಯುವ ನೀರಿನ ಅಭಾವವನ್ನು ಎದುರಿಸುತ್ತಿದ್ದು, ಇನ್ನೆಷ್ಟು ದಿನಗಳಲ್ಲಿ ಕಾವೇರಿ ನೀರಿನ ಪೂರೈಕೆಯನ್ನು ಒದಗಿಸಲಾಗುವುದು ;

(ಈ) ಸದರಿ ಬಡಾವಣೆಯಲ್ಲಿನ ಮನೆಗಳಿಗೆ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಇದುವರೆವಿಗೂ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸದಿರುವುದಕ್ಕೆ ಕಾರಣವೇನು ;

(ಊ) ಇನ್ನೆಷ್ಟು ದಿನಗಳಲ್ಲಿ ಒಳಚರಂಡಿ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು ;

(ಋ) ಸದರಿ ಬಡಾವಣೆಯಲ್ಲಿನ ಖಾಸಗಿ ಸಂಸ್ಥೆಯವರ ಬಹುಮಹಡಿ ಕಟ್ಟಡಗಳಿಗೆ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸಲು ಸದರಿ ಬ್ಲಾಕ್‌ನಲ್ಲಿನ ರಸ್ತೆಯನ್ನು ಉಪಯೋಗಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಎ) ಈ ರೀತಿ ಕ್ರಮ ಕೈಗೊಳ್ಳಲು ಸಂಬಂಧಿಸಿದ ಇಲಾಖೆಯಿಂದ ಅನುಮತಿಯನ್ನು ಪಡೆಯಲಾಗಿದೆಯೇ ; ಪಡೆಯದಿದ್ದಲ್ಲಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಂಡಿರುವ ಬಗ್ಗೆ ಸಂಪೂರ್ಣ ವಿವರವನ್ನು ಒದಗಿಸುವುದು ;

(ಏ) ಸದರಿ ರಸ್ತೆಯನ್ನು ಇದುವರೆವಿಗೂ ಡಾಂಬರೀಕರಣಗೊಳಸದಿರಲು ಕಾರಣವೇನು ;

(ಐ) ಬಡಾವಣೆಯಲ್ಲಿನ ರಸ್ತೆಗಳನ್ನು ಡಾಂಬರೀಕರಣಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಒ) ಸದರಿ ರಸ್ತೆಯಲ್ಲಿ ಒಳಚರಂಡಿ ಪೈಪ್‌ಗಳನ್ನು ಅಳವಡಿಸುವ ಸಲುವಾಗಿ ರಸ್ತೆಯನ್ನು ಅಗೆದಾಗ ಬಂದಂತಹ ಕಲ್ಲು ಮಣ್ಣಿನ ತ್ಯಾಜ್ಯವನ್ನು ಅದೇ ರಸ್ತೆಯಲ್ಲಿನ ಖಾಲಿ ನಿವೇಶನಗಳಲ್ಲಿ ತುಂಬಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಓ) ಇದರಿಂದ ಅಲ್ಲಿನ ನಾಗರಿಕರು ತುಂಬಾ ತೊಂದರೆಯನ್ನು ಅನುಭವಿಸುತ್ತಿದ್ದು, ಸರ್ಕಾರ ಅಲ್ಲಿನ ತ್ಯಾಜವನ್ನು ಬೇರೆಡೆಗೆ ಸ್ಥಳಾಂತರಿಸಲು ಕ್ರಮ ಕೈಗೊಳ್ಳುವುದೇ ?

## ಅಗ್ನಿಶಾಮಕ ಇಲಾಖೆಯ ಸಿಬ್ಬಂದಿಗಳನ್ನು SDRF ನಿಯೋಜನೆ ಮಾಡಿರುವ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :–**

೧೩೧೧ (೧೪೩೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯ ವಿಪತ್ತು ಸ್ಪಂದನಾ ಪಡೆ SDRF ಅನ್ನು ರಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, SDRFರಚಿಸಲು ಇರುವ ಮಾರ್ಗಸೂಚಿಗಳೇನು ಹಾಗೂ ಬಿಡುಗಡೆಯಾದ ಅನುದಾನವೆಷ್ಟು ;

(ಆ) SDRF ರಚಿಸಲು ಮಂಜೂರಾಗಿರುವ ಹುದ್ದೆಗಳು ಎಷ್ಟು ; ಹುದ್ದೆಗಳನ್ನು ಭರ್ತಿ ಮಾಡಲು ಇರುವ ಮಾನದಂಡಗಳೇನು ;

(ಇ) ಕರ್ನಾಟಕ ರಾಜ್ಯ ಅಗ್ನಿಶಾಮಕ ಇಲಾಖೆಗೆ ಮಂಜೂರಾಗಿರುವ ಹುದ್ದೆಗಳೆಷ್ಟು; ಈ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ / ಸಿಬ್ಬಂದಿಗಳೆಷ್ಟು ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು; (ಮಾಹಿತಿ ನೀಡುವುದು)

(ಈ) ಅಗ್ನಿಶಾಮಕ ಇಲಾಖೆಯಲ್ಲಿ ಹಾಲಿ ಸಿಬ್ಬಂದಿಗಳ ಕೊರತೆ ಇದ್ದರೂ ಸಿಬ್ಬಂದಿಗಳನ್ನು SDRF ಗೆ ನಿಯೋಜಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದಕ್ಕೆ ಅಗ್ನಿಶಾಮಕ ಇಲಾಖೆಯ ಸಿಬ್ಬಂದಿಗಳ ಒಪ್ಪಿಗೆ ಪಡೆಯಲಾಗಿದೆಯೇ ; ಇಲ್ಲದಿದ್ದಲ್ಲಿ ಹೇಗೆ ನಿಯೋಜಿಸಲಾಗುತ್ತಿದೆ ;

(ಉ) SDRF ನಿಯೋಜಿಸಿದಲ್ಲಿ ಇಲಾಖೆಯಲ್ಲಿ ಸಿಬ್ಬಂದಿಗಳ ಕೊರತೆಯುಂಟಾಗಿ ಅಗ್ನಿ ಅನಾಹುತಗಳು ತುರ್ತು ಕಾರ್ಯಗಳನ್ನು ನಿರ್ವಹಿಸಲು ತೊಂದರೆಯಾಗಿರುವುದನ್ನು ಯಾವ ರೀತಿ ನೀಗಿಸಲಾಗುವುದು ;

(ಊ) ಅಗ್ನಿಶಾಮಕ ಇಲಾಖೆಯ ಸಿಬ್ಬಂದಿಗಳನ್ನು SDRF ಗೆ ನಿಯೋಜಿಸಿ ಅಗ್ನಿ ಅನಾಹುತ ನಂದಿಸುವ ಕಾರ್ಯಕ್ಕೆ ಅನುಭವಿಗಳಾದ ಗೃಹರಕ್ಷಕರನ್ನು ನಿಯೋಜಿಸಿದರೆ ಅನಾಹುತಗಳಾವುದಿಲ್ಲವೇ; ಇವೆಲ್ಲವುಗಳನ್ನು ತಪ್ಪಿಸಲು ಸರ್ಕಾರವು ಕೈಗೊಳ್ಳುವ ಕ್ರಮಗಳೇನು ;

(ಋ) SDRF ಗೆ ನಿಯೋಜಿಸುತ್ತಿರುವ ಅಗ್ನಿಶಾಮಕ ದಳದ ಸಿಬ್ಬಂದಿಯವರನ್ನು ಇಲಾಖೆಯಲ್ಲಿ ಅಗ್ನಿ ನಂದಿಸುವ ಕಾರ್ಯದಲ್ಲಿ ಮುಂದುವರೆಸಲಾಗುವುದೇ?

## ಕುಮಾರಸ್ವಾಮಿ ಬಡಾವಣೆಯಲ್ಲಿನ ರಸ್ತೆಗಳಿಗೆ ನಮೂದಿಸಿರುವ ಸಂಖ್ಯೆಗಳ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :–**

೧೩೧೨ (೧೪೩೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–



(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಿರ್ಮಾಣಗೊಂಡಿರುವ ಕುಮಾರಸ್ವಾಮಿ ಬಡಾವಣೆಯನ್ನು ಒಂದನೇ ಹಂತ ಹಾಗೂ ಎರಡನೇ ಹಂತವಾಗಿ ವಿಭಜಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಬಡಾವಣೆಯ ಒಂದನೇ ಹಾಗೂ ಎರಡನೇ ಹಂತದಲ್ಲಿ ಒದಗಿಸಿರುವ ನಿವೇಶನಗಳ ಸಂಖ್ಯೆಗಳನ್ನು ಒದಗಿಸುವುದು ;

(ಇ) ಇಲ್ಲಿನ ಬಡಾವಣೆಯಲ್ಲಿ ನಮುದಿಸಿರುವ ರಸ್ತೆಗಳ ಸಂಖ್ಯೆ ಸರಿ ಇದೆಯೇ ; ಇದ್ದರೆ ಅವುಗಳ ಮಾಹಿತಿಯನ್ನು ಒದಗಿಸುವುದು ;

(ಈ) ವಾಸವಿ ಆಸ್ಪತ್ರೆಯ ಹತ್ತಿರವಿರುವ ೬ನೇ ಅಡ್ಡರಸ್ತೆಯ ಅರ್ಧ ಭಾಗ ಒಂದನೇ ಹಂತ ಹಾಗೂ ಇನ್ನುಳಿದ ಅರ್ಧ ಭಾಗ ಎರಡನೇ ಹಂತಕ್ಕೆ ಸೇರಿರುವುದಾಗಿ ನಾಮ ಫಲಕವನ್ನು ಹಾಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಈ ರೀತಿಯಾಗಿ ನಾಮಫಲಕದಲ್ಲಿ ನಮೂದಿಸಿರುವುದರ ಬಗ್ಗೆ ಸಂಪೂರ್ಣ ವಿವರಗಳನ್ನು ಒದಗಿಸುವುದು ?

## ಬೆಂಗಳೂರು ನಗರದ ಸಿಗ್ನಲ್‌ಗಳಲ್ಲಿನ ಸಿ.ಸಿ.ಟಿ.ವಿ. ಕ್ಯಾಮರಾಗಳ ದುಸ್ಥಿತಿ ಸರಿಪಡಿಸುವ ಕುರಿತು

**ಶ್ರೀ ಕೆ. ಗೋವಿಂದರಾಜ್ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೩೧೩ (೧೪೯೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದ ಯಾವ ಯಾವ ರಸ್ತೆಗಳು ಮತ್ತು ಸಿಗ್ನಲ್‌ಗಳಲ್ಲಿ ಸುರಕ್ಷತಾ ದೃಷ್ಟಿಯಿಂದ ಸಿ.ಸಿ.ಟಿ.ವಿ.ಗಳನ್ನು ಅಳವಡಿಸಲಾಗಿದೆ ;

(ಆ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಅಳವಡಿಸಲಾಗಿರುವ ಸಿ.ಸಿ.ಟಿ.ವಿ. ಗಳಿಗೆ ವಿನಿಯೋಗಿಸಲಾದ ಮತ್ತು ನಿರ್ವಹಣೆಗೆ ಬಳಸಲಾದ ಅನುದಾನ ಎಷ್ಟು ; (ಪ್ರತ್ಯೇಕ ಮಾಹಿತಿ ಒದಗಿಸುವುದು)

(ಇ) ಕಳಪೆ ನಿರ್ವಹಣೆಯಿಂದಾಗಿ ಅಳವಡಿಸಲಾದ ಸಿ.ಸಿ.ಟಿ.ವಿ.ಗಳು ಕಾರ್ಯನಿರ್ವಹಿಸದೇ, ನಿರುಪಯುಕ್ತವಾಗಿರುವ ಕುರಿತು ಸರ್ಕಾರ ಗಂಭೀರವಾಗಿ ಆಲೋಚಿಸಿದೆಯೇ; ಹಾಗಿದ್ದಲ್ಲಿ ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳೇನು ? (ಮಾಹಿತಿ ಒದಗಿಸುವುದು)

## ಬಯಲು ಸೀಮೆ ಅಭಿವೃದ್ಧಿ ಪ್ರಾಧಿಕಾರದಿಂದ ನೀಡುವ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೧೪ (೧೪೮೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕೋಲಾರ–ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಬಯಲುಸೀಮೆ ಅಭಿವೃದ್ಧಿ ಪ್ರಾಧಿಕಾರದಿಂದ ಎಷ್ಟು ಅನುದಾನ ಬಿಡುಗಡೆಯಾಗಿದೆ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಯಾವ ಯಾವ ಅಭಿವೃದ್ಧಿ ಕಾರ್ಯಗಳಿಗೆ ಅನುದಾನ ಬಿಡುಗಡೆಯಾಗಿದೆ ; (ಕಾಮಗಾರಿವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಬಯಲುಸೀಮೆ ಅಭಿವೃದ್ಧಿ ಪ್ರಾಧಿಕಾರದಿಂದ ಅನುದಾನ ನೀಡಲು ಇರುವ ನಿಯಮಗಳಾವುವು ? (ಸಂಪೂರ್ಣ ಮಾಹಿತಿ ನೀಡುವುದು)



## ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರದಿಂದ ನೀಡುವ ಅನುದಾನದ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೧೫ (೧೪೮೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕೋಲಾರ–ಚಿಕ್ಕಬಳ್ಳಾಪುರ ಜಿಲ್ಲೆಯ ಗಡಿ ಪ್ರದೇಶಗಳಲ್ಲಿ ವಿವಿಧ ಅಭಿವೃದ್ಧಿ ಕಾರ್ಯಗಳಿಗೆ ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರದಿಂದ ಎಷ್ಟು ಅನುದಾನ ಬಿಡುಗಡೆಯಾಗಿದೆ ;

(ಆ) ಹಾಗಿದ್ದಲ್ಲಿ, ಯಾವ ಯಾವ ಗಡಿ ಪ್ರದೇಶಗಳಿಗೆ ಅನುದಾನ ಬಿಡುಗಡೆಯಾಗಿದೆ; ಕಾಮಗಾರಿವಾರು ಸಂಪೂರ್ಣ ಮಾಹಿತಿ ನೀಡುವುದು ;

(ಇ) ಗಡಿ ಪ್ರದೇಶಾಭಿವೃದ್ಧಿ ಪ್ರಾಧಿಕಾರದಿಂದ ಅನುದಾನ ನೀಡಲು ಇರುವ ನಿಯಮಗಳಾವುವು? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಪೊಲೀಸ್ ಇಲಾಖೆಯ ಪ್ರಕರಣಗಳಲ್ಲಿ ವಶಕ್ಕೆ ಪಡೆದಿರುವ ದ್ವಿಚಕ್ರ ವಾಹನಗಳ ಬಗ್ಗೆ

**ಶ್ರೀ ಸಿ.ಆರ್. ಮನೋಹರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೧೬ (೧೪೮೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪೊಲೀಸ್ ಇಲಾಖೆಯ ಹಲವಾರು ಪ್ರಕರಣಗಳಲ್ಲಿ ವಶಕ್ಕೆ ಪಡೆದಿರುವ ದ್ವಿಚಕ್ರ, ತ್ರಿಚಕ್ರ, ಲಘು ಮತ್ತು ಭಾರಿ ಮೋಟರ್ ವಾಹನಗಳ ಸಂಖ್ಯೆಯೆಷ್ಟು ;

(ಆ) ಇಂತಹ ವಾಹನಗಳು ಬಹಳಷ್ಟು ವರ್ಷಗಳಿಂದ ಪೊಲೀಸ್ ಇಲಾಖೆಯ ವಶದಲ್ಲಿದ್ದು ಹಾಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ರೀತಿ ರಾಷ್ಟ್ರೀಯ ನಷ್ಟವಾಗುತ್ತಿರುವುದನ್ನು ತಡೆಯುವುದಕ್ಕೆ ಯಾವುದಾದರೊಂದು ಯೋಜನೆಯನ್ನು ರೂಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಯೋಜನೆಯ ಮಾಹಿತಿ ನೀಡುವುದು ;

(ಈ) ಹಾಗಿಲ್ಲದಿದ್ದಲ್ಲಿ, ರಾಷ್ಟ್ರೀಯ ನಷ್ಟವಾಗುತ್ತಿರುವುದನ್ನು ತಡೆಯುವ ಯೋಜನೆಯನ್ನು ರೂಪಿಸಲು ಸರ್ಕಾರಕ್ಕಿರುವ ತೊಂದರೆಗಳೇನು ? (ಮಾಹಿತಿ ನೀಡುವುದು)

## ಶಾಸಕರ ಸಾಂವಿಧಾನಿಕ ಸಂಘಕ್ಕೆ ಜಾಗ ಮಂಜೂರಾತಿಯ ಬಗ್ಗೆ

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೧೭ (೧೪೫೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಶಾಸಕರುಗಳಿಗಾಗಿ ಸಾಂವಿಧಾನಿಕ ಸಂಘ (Constitutional club) ಸ್ಥಾಪಿಸಲು ಸರ್ಕಾರ ಜಾಗ ಮಂಜೂರು ಮಾಡಿದೆಯೇ ;

(ಆ) ಮಂಜೂರು ಮಾಡಿದ್ದಲ್ಲಿ, ಜಾಗದ ವಿವರ ನೀಡುವುದು ;

(ಇ) ಜಾಗ ಮಂಜೂರು ಮಾಡದಿದ್ದಲ್ಲಿ, ಎಂಟು ವರ್ಷಕ್ಕೂ ಮಿಗಿಲಾಗಿ ಸದಸ್ಯತ್ವ ಪಡೆದಿರುವ ಶಾಸಕರುಗಳಿಗೆ ಅನಾನುಕೂಲಗಳಾ–ಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗೂ ಆದಷ್ಟು ಶೀಘ್ರವಾಗಿ ಸ್ಥಳ ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?



## ಉಷ್ಣ ವಿದ್ಯುತ್ ಸ್ಥಾವರಗಳಿಂದ ಪರಿಸರ ಮಾಲಿನ್ಯವಾಗುತ್ತಿರುವ ಬಗ್ಗೆ

**ಡಾ ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೩೧೮ (೧೪೬೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೆಲಸ ನಿರ್ವಹಿಸುತ್ತಿರುವ ಉಷ್ಣ ವಿದ್ಯುತ್ ಸ್ಥಾವರ (ಥರ್ಮಲ್ ಪವರ್ ಪ್ಲಾಂಟ್)ಗಳಿಂದ ಪರಿಸರ ಮಾಲಿನ್ಯವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಈ ಮಾಲಿನ್ಯವನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಕೇಂದ್ರ ಸರ್ಕಾರದ ಆಶಯದಂತೆ ಈ ಉಷ್ಣ ವಿದ್ಯುತ್ ಸ್ಥಾವರಗಳನ್ನು ಮುಚ್ಚುವ ನಿರ್ಧಾರ ಸರ್ಕಾರದ ಮುಂದೆ ಇದೆಯೇ ;

(ಈ) ಇದರ ಬಗ್ಗೆ ವಿವರಗಳನ್ನು ನೀಡುವುದು ?

## ಜಲಮೂಲದಿಂದ ವಿದ್ಯುತ್ ಉತ್ಪಾದನೆ ಪ್ರಮಾಣ ಕುರಿತು

**ಡಾ ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೩೧೯ (೧೪೬೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಲ ಮೂಲಗಳಿಂದ ವಿದ್ಯುತ್ ಉತ್ಪಾದನೆ ಮಾಡಲಾಗುತ್ತಿದೆಯೇ; ಇದ್ದರೆ ಯಾವ ಯಾವ ಯೋಜನೆಗಳಿಂದ ಎಷ್ಟೆಷ್ಟು ಪ್ರಮಾಣದ ವಿದ್ಯುತ್ ಉತ್ಪಾದಿಸಲಾಗುತ್ತಿದೆ; (ವಿವರಗಳನ್ನು ನೀಡುವುದು)

(ಆ) ಈ ವಿದ್ಯುತ್ ಪ್ರಮಾಣವು ರಾಜ್ಯದ ಜನರ ಅವಶ್ಯಕತೆಗೆ ಅನುಗುಣವಾಗಿದೆಯೇ; ಇಲ್ಲದಿದ್ದರೆ, ಕೊರತೆಯನ್ನು ನೀಗಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಹೆಬ್ಬಾಳ ವಿಧಾನಸಭಾ ಕ್ಷೇತ್ರಕ್ಕೆ ಪ್ರತಿನಿತ್ಯ ಬೇಕಾಗಿರುವ ನೀರಿನ ಪ್ರಮಾಣದ ಕುರಿತು

**ಡಾ॥ ವೈ.ಎ.ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೩೨೦ (೧೫೩೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಉತ್ತರ, ಹೆಬ್ಬಾಳ ವಿಧಾನಸಭಾ ಕ್ಷೇತ್ರಕ್ಕೆ ಪ್ರತಿನಿತ್ಯ ಬೇಕಾಗಿರುವ ನೀರಿನ ಪ್ರಮಾಣ ಎಷ್ಟು; ಈ ಪ್ರಮಾಣದಷ್ಟು ನೀರನ್ನು ಪ್ರತಿನಿತ್ಯ ಪೂರೈಸಲಾಗುತ್ತಿದೆಯೇ ;

(ಆ) ಇಲ್ಲದಿದ್ದಲ್ಲಿ, ಅಗತ್ಯಕ್ಕೆ ಅನುಗುಣವಾಗಿ ಬೇಕಾಗಿರುವ ಶುದ್ಧ ಕುಡಿಯುವ ನೀರಿನ ಪ್ರಮಾಣ ಪೂರೈಸಲು ಸರ್ಕಾರವು ಕೈಗೊಂಡಿರುವ ಕ್ರಮಗಳಾವುವು ?

## T.D.R ಸ್ಕೀಂನ ಕುರಿತು

**ಡಾ ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೩೨೧ (೧೫೩೮) ಮಾನ್ಯ ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಉತ್ತರ, ಹೆಬ್ಬಾಳ ವಿಧಾನಸಭಾ ಕ್ಷೇತ್ರದಲ್ಲಿ ಟಿ.ಡಿ.ಆರ್. ಸ್ಕೀಂನ ಅಡಿಯಲ್ಲಿ ಇದುವರೆವಿಗೂ ಪರಿಹರಿಸಿರುವ ಪ್ರಕರಣಗಳು ಎಷ್ಟು ; (ಪ್ರಕರಣವಾರು ವಿವರಗಳನ್ನು ನೀಡುವುದು)



(ಆ) ಬೆಂಗಳೂರು ಉತ್ತರ, ಹೆಬ್ಬಾಳ ವಿಧಾನಸಭಾ ಕ್ಷೇತ್ರದ ಹೆಬ್ಬಾಳ ವಾರ್ಡಿಗೆ ಸೇರಿರುವ ಶ್ರೀ ಆನಂದಲಿಂಗೇಶ್ವರ ಬೆಟ್ಟದ ಹತ್ತಿರ ಟಿ.ಡಿ.ಆರ್. ಸ್ಕೀಂನ ಅಡಿಯಲ್ಲಿ ಕೈಗೆತ್ತಿಕೊಂಡಿರುವ ಯೋಜನೆ ಯಾವುದು; (ವಿವರಗಳನ್ನು ನೀಡುವುದು)

(ಇ) ಮೇಲ್ಕಂಡ ಟಿ.ಡಿ.ಆರ್. ಹಗರಣದಲ್ಲಿ ಭಾಗಿಯಾಗಿರುವವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರಗಳನ್ನು ನೀಡುವುದು)

## ಹೆಬ್ಬಾಳ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಅಳವಡಿಸಿರುವ CCTV ಕ್ಯಾಮರಾಗಳ ಕುರಿತು

**ಡಾ ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೩೨೨ (೧೫೩೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಉತ್ತರ, ಹೆಬ್ಬಾಳ ವಿಧಾನಸಭಾ ಕ್ಷೇತ್ರದಲ್ಲಿ ಇದುವರೆವಿಗೂ ಅಳವಡಿಸಲಾಗಿರುವ ಸಿ.ಸಿ.ಟಿ.ವಿ ಕ್ಯಾಮರಾಗಳ ಸಂಖ್ಯೆ ಎಷ್ಟು; (ವಾರ್ಡ್‌ವಾರು ವಿವರಗಳನ್ನು ನೀಡುವುದು)

(ಆ) ಮೇಲ್ಕಂಡ ಸಿ.ಸಿ.ಟಿ.ವಿ ಕ್ಯಾಮರಾಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿವೆಯೇ ; ಹಾಗೂ ಇವುಗಳನ್ನು ಮಾನಿಟರ್ ಮಾಡುವ ವ್ಯವಸ್ಥೆ ನಡೆಯುತ್ತಿದೆಯೇ;

## ವಸತಿ ಪ್ರದೇಶಗಳಲ್ಲಿ ವಾಣಿಜ್ಯ ವ್ಯವಹಾರ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೨೩ (೧೪೫೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ವ್ಯಾಪ್ತಿಯ ವಸತಿ ಪ್ರದೇಶಗಳಲ್ಲಿ ವಾಣಿಜ್ಯ ಚಟುವಟಿಕೆ ನಡೆಸಲು ಇರುವ ನಿಯಮಗಳೇನು; ವಸತಿ ಪ್ರದೇಶದಲ್ಲಿರುವ ಅನಧಿಕೃತ ಮಳಿಗೆ ಮುಚ್ಚಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಕೋರಮಂಗಲದ ವಸತಿ ಪ್ರದೇಶಗಳಲ್ಲಿ ವಾಣಿಜ್ಯ ಪರವಾನಿಗೆ ಪಡೆದು ವ್ಯವಹಾರ ನಡೆಸುತ್ತಿರುವ ಸಂಸ್ಥೆಗಳ ಸಂಖ್ಯೆ ಎಷ್ಟು; ವಾಹನ ನಿಲುಗಡೆ ಪ್ರದೇಶದಲ್ಲಿ ವಾಣಿಜ್ಯ ಚಟುವಟಿಕೆ ನಡೆಸುತ್ತಿರುವ ಸಂಸ್ಥೆಗಳ ವಿವರ ನೀಡುವುದು ;

(ಇ) ಕೋರಮಂಗಲ/ಇಂದಿರಾನಗರ ವಸತಿ ಪ್ರದೇಶದಲ್ಲಿ ವಾಣಿಜ್ಯ ಪರವಾನಿಗೆ ನೀಡಿರುವುದರ ವಿರುದ್ಧ ನ್ಯಾಯಾಲಯಗಳಲ್ಲಿ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ನ್ಯಾಯಾಲಯದಲ್ಲಿ ಪ್ರಕರಣ ದಾಖಲಾದ ಮೇಲೆ ವಾಣಿಜ್ಯ ವ್ಯವಹಾರ ನಡೆಸುವುದರ ಪರವಾಗಿ ಯಾವುದೇ ಆದೇಶ ಇರದಿದ್ದರೂ ವಾಣಿಜ್ಯ ವ್ಯವಹಾರ ನಡೆಸುತ್ತಿರುವ ಸಂಸ್ಥೆಗಳ ಮೇಲೆ ಸರ್ಕಾರ ಯಾವ ಕ್ರಮಕೈಗೊಂಡಿದೆ ?

## ೨೦೧೧ ರಲ್ಲಿ ಕೆ.ಪಿ.ಎಸ್.ಸಿ. ಇಂದ ಆಯ್ಕೆಯಾಗಿರುವ ಅಭ್ಯರ್ಥಿಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೨೪ (೧೪೫೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೧ರಲ್ಲಿ ಕೆ.ಪಿ.ಎಸ್.ಸಿ ಮೂಲಕ ಆಯ್ಕೆಯಾಗಿರುವ ૩೬೨ ಕೆ.ಎ.ಎಸ್. ಅಭ್ಯರ್ಥಿಗಳ ಕುರಿತು ಸರ್ಕಾರದ ನಿಲುವೇನು; ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲಾಗುವುದೇ ;



(ಆ) ಪ್ರಸ್ತುತ ಕೆ.ಪಿ.ಎಸ್.ಸಿ. ಮೂಲಕ ಹೊಸದಾಗಿ ಅರ್ಜಿ ಕರೆಯಲಾಗುವ ಗೆಜೆಟೆಡ್ ಹುದ್ದೆಗಳೊಂದಿಗೆ ೨೦೧೧ರಲ್ಲಿ ಆಯ್ಕೆಯಾಗಿರುವ ૩೬೨ ಹುದ್ದೆಗಳನ್ನು ಸೇರಿಸಿ ಹೊಸದಾಗಿ ಅಷ್ಟು ಹುದ್ದೆಗಳಿಗೆ ಅರ್ಜಿ ಕರೆಯುವ ಪ್ರಸ್ತಾವ ಸರ್ಕಾರದ ಮುಂದಿದೆಯೇ; ಈ ಕುರಿತು ಸರ್ಕಾರದ ನಿಲುವೇನು ;

(ಇ) ೨೦೧೧ರಲ್ಲಿ ಕೆ.ಪಿ.ಎಸ್.ಸಿ ಮೂಲಕ ಆಯ್ಕೆಯಾಗಿರುವ ಎಲ್ಲಾ ૩೬೨ ಕೆ.ಎ.ಎಸ್. ಅಭ್ಯರ್ಥಿಗಳ ಆಯ್ಕೆಯೂ ಭ್ರಷ್ಟಾಚಾರದ ಮೂಲಕವೇ ಆಗಿದೆ ಎಂದು ಸರ್ಕಾರ ನಿರ್ದರಿಸಿದೆಯೇ; ಭ್ರಷ್ಟಾಚಾರ ನಡೆಸಿದ ಎಷ್ಟು ಅಭ್ಯರ್ಥಿಗಳ ಮೇಲೆ ಕೇಸು ದಾಖಲಾಗಿದೆ ?

## ಐ.ಎ.ಎಸ್. ಮತ್ತು ಐ.ಪಿ.ಎಸ್. ಅಧಿಕಾರಿಗಳ ಭ್ರಷ್ಟಾಚಾರದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧૩೨೫ (೧೪೬೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಷ್ಟು ಐ.ಎ.ಎಸ್ ಮತ್ತು ಐ.ಪಿ.ಎಸ್ ಅಧಿಕಾರಿಗಳ ಮೇಲೆ ಅಕ್ರಮ ಆಸ್ತಿ ಹೊಂದಿದ ಮತ್ತು ಲಂಚ ಪಡೆದ ಆರೋಪಗಳಿವೆ ;

(ಆ) ರಾಜ್ಯದ ಎಷ್ಟು ಐ.ಎ.ಎಸ್. ಮತ್ತು ಐ.ಪಿ.ಎಸ್. ಅಧಿಕಾರಿಗಳ ಮೇಲೆ ಕ್ರಿಮಿನಲ್ ಪ್ರಕರಣಗಳು ದಾಖಲಾಗಿವೆ ; ಪ್ರಸ್ತುತ ಅವು ಯಾವ ಹಂತದಲ್ಲಿವೆ ;

(ಇ) ಕೇಂದ್ರ ಸರ್ಕಾರ ಇತ್ತೀಚೆಗೆ ಲಂಚ ಪಡೆದ ಹಾಗೂ ಆದಾಯಕ್ಕಿಂತ ಹೆಚ್ಚಿನ ಆಸ್ತಿ ಹೊಂದಿದ ಆರೋಪ ಇರುವ ಐ.ಎ.ಎಸ್ ಮತ್ತು ಐ.ಪಿ.ಎಸ್ ಅಧಿಕಾರಿಗಳನ್ನು ಕಡ್ಡಾಯ ನಿವೃತ್ತಿಯ ಮೇಲೆ ಕಳುಹಿಸಿದಂತೆ ರಾಜ್ಯ ಸರ್ಕಾರವು ಲಂಚ ಪಡೆದ ಹಾಗೂ ಆದಾಯಕ್ಕಿಂತ ಹೆಚ್ಚಿನ ಆಸ್ತಿ ಹೊಂದಿದ ಆರೋಪ ಇರುವ ಐ.ಎ.ಎಸ್. ಮತ್ತು ಐ.ಪಿ.ಎಸ್ ಅಧಿಕಾರಿಗಳನ್ನು ಕಡ್ಡಾಯ ನಿವೃತ್ತಿಯ ಮೇಲೆ ಕಳುಹಿಸುವ ಕುರಿತು ಸರ್ಕಾರದ ನಿಲುವೇನು ?

## ಡಿಪ್ಲೋಮ ಮತ್ತು ಸ್ನಾತಕೋತ್ತರ ಪದವಿ ಹೊಂದಿರುವ ವೇತನ ನಿಗದಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೨೬ (೧೫೦೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದ ಇಲಾಖೆಗಳಲ್ಲಿ ಡಿಪ್ಲೋಮ ಮತ್ತು ಸ್ನಾತಕೋತ್ತರ ಪದವಿ ಹೊಂದಿರುವ ಸಿಬ್ಬಂದಿಗಳಿಗೆ ಯಾವ ವೇತನ ಶ್ರೇಣಿ ನೀಡಲಾಗುತ್ತಿದೆ ;

(ಆ) ಸರ್ಕಾರದ ವಿವಿಧ ಇಲಾಖೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಡಿಪ್ಲೋಮ ಮತ್ತು ಸ್ನಾತಕೋತ್ತರ ಪದವಿ ಹೊಂದಿರುವ ಅಭ್ಯರ್ಥಿಗಳಿಗೆ ಒಂದೇ ರೀತಿಯ ವೇತನ ಶ್ರೇಣಿ ನೀಡಲಾಗುತ್ತದೆಯೇ ; ಪೊಲೀಸ್ ಇಲಾಖೆಯ ಎಫ್‌ಎಸ್‌ಎಲ್ ವಿಭಾಗದಲ್ಲಿ ಡಿಪ್ಲೋಮ ಮತ್ತು ಸ್ನಾತಕೋತ್ತರ ಪದವಿ ಹೊಂದಿರುವ ಸಿಬ್ಬಂದಿಗಳಿಗೆ ಒಂದೇ ರೀತಿಯ ವೇತನ ಶ್ರೇಣಿ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;



(ಇ) ಸರ್ಕಾರದ ಇಲಾಖೆಗಳಲ್ಲಿ ವೇತನ ಶ್ರೇಣಿಯನ್ನು ನಿಗಧಿಪಡಿಸುವಾಗ ವಿದ್ಯಾರ್ಹತೆಯನ್ನು ಮಾನದಂಡವಾಗಿ ಪರಿಗಣಿಸಲಾಗುತ್ತದೆಯೇ; ಇಲ್ಲವಾದಲ್ಲಿ, ಯಾವ ಆಧಾರದಲ್ಲಿ ವೇತನ ಶ್ರೇಣಿಯನ್ನು ನಿಗದಿಪಡಿಸಲಾಗುತ್ತಿದೆ ;

(ಈ) ಪೊಲೀಸ್ ಇಲಾಖೆಯ ಎಫ್‌ಎಸ್‌ಎಲ್ ವಿಭಾಗದಲ್ಲಿ ಡಿಪ್ಲೋಮ ಮತ್ತು ಸ್ನಾತಕೋತ್ತರ ಪದವಿ ಹೊಂದಿರುವ ಸಿಬ್ಬಂದಿಗಳಿಗೆ ಒಂದೇ ರೀತಿಯ ವೇತನ ಶ್ರೇಣಿ ನಿಗದಿಪಡಿಸಿದ್ದು ಅದೇ ರೀತಿಯಾಗಿ ಸರ್ಕಾರದ ಇತರೆ ಇಲಾಖೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಡಿಪ್ಲೋಮ ಮತ್ತು ಸ್ನಾತಕೋತ್ತರ ಪದವಿ ಹೊಂದಿರುವ ಸಿಬ್ಬಂದಿಗಳಿಗೆ ಒಂದೇ ರೀತಿಯ ವೇತನ ಶ್ರೇಣಿ ನಿಗದಿಪಡಿಸುವ ಕುರಿತು ಸರ್ಕಾರದ ನಿಲುವೇನು ?

## ವೀಸಾ ಅವಧಿ ಮುಗಿದ ಬಳಿಕ ರಾಜ್ಯದಲ್ಲಿರುವ ವಿದ್ಯಾರ್ಥಿಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೨೭ (೧೪೬೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ವೀಸಾ ಅವಧಿ ಮುಗಿದ ಬಳಿಕ ರಾಜ್ಯದಲ್ಲಿರುವ ವಿದ್ಯಾರ್ಥಿಗಳ ವೀಸಾ ಹೊಂದಿರುವ ಕಳೆದ ೫ ವರ್ಷಗಳಲ್ಲಿ ನಡೆಸಿದ ಅಪರಾಧ ಪ್ರಕರಣಗಳ ವಿವರ ನೀಡುವುದು ; ಜಿಲ್ಲಾವಾರು ಮತ್ತು ಯಾವ ಶಿಕ್ಷಣ ಸಂಸ್ಥೆಯಲ್ಲಿ ಪ್ರವೇಶಾತಿ ಪಡೆದಿರುತ್ತಾರೋ ಆ ಶಿಕ್ಷಣ ಸಂಸ್ಥೆಯ ಹೆಸರಿನೊಂದಿಗೆ ಮಾಹಿತಿ ನೀಡುವುದು ;

(ಆ) ವಿದ್ಯಾರ್ಥಿ ವೀಸಾ ಹೊಂದಿರುವ ವಿದೇಶಿ ವಿದ್ಯಾರ್ಥಿಗಳು ರಾಜ್ಯದಲ್ಲಿ ನಡೆಸಿದ ಅಪರಾಧ ಪ್ರಕರಣಗಳ ಕುರಿತು ಎಷ್ಟು ಶಿಕ್ಷಣ ಸಂಸ್ಥೆಗಳನ್ನು ಹೊಣೆಗಾರರನ್ನಾಗಿ ಮಾಡಲಾಗಿದೆ ; ವಿದೇಶಿ ವಿದ್ಯಾರ್ಥಿಗಳಿಗೆ ಪ್ರವೇಶ ನೀಡಿದ ಶಿಕ್ಷಣ ಸಂಸ್ಥೆಗಳ ಮೇಲೆ ಕ್ರಿಮಿನಲ್ ಪ್ರಕರಣ ದಾಖಲಿಸದಿರಲು ಕಾರಣವೇನು ;

(ಇ) ವಿದೇಶಿ ವಿದ್ಯಾರ್ಥಿಗಳಿಂದ ದೊಡ್ಡ ಮೊತ್ತದ ಫೀಸನ್ನು ಪಡೆಯುವ ಖಾಸಗಿ ಶಿಕ್ಷಣ ಸಂಸ್ಥೆಗಳ ಅಂತಹ ವಿದ್ಯಾರ್ಥಿಗಳ ವೀಸಾ ಅವಧಿ ಮುಗಿದ ಬಳಿಕ ಅವರನ್ನು ಅವರ ದೇಶಗಳಿಗೆ ಕಳುಹಿಸುವ ಯಾವ ಪ್ರಯತ್ನವನ್ನು ಮಾಡದೆ ಸಮಾಜ ವಿರೋಧ ಕೃತ್ಯಗಳಲ್ಲಿ ತೊಡಗಲು ಪ್ರೋತ್ಸಾಹಿಸುತ್ತಿರುವ ಶಿಕ್ಷಣ ಸಂಸ್ಥೆಗಳ ಮಾನ್ಯತೆ ರದ್ದು ಮಾಡಲು ಇದುವರೆಗೆ ಪೊಲೀಸ್ ಇಲಾಖೆ ಎಷ್ಟು ಶಿಕ್ಷಣ ಸಂಸ್ಥೆಗಳ ಕುರಿತು ಶಿಕ್ಷಣ ಇಲಾಖೆಗೆ ಶಿಫಾರಸ್ಸು ಮಾಡಿದೆ ; ಇಲ್ಲವಾದಲ್ಲಿ ಯಾವ ಕಾರಣಕ್ಕೆ ಮಾಡಿಲ್ಲ ? (ವಿವರ ನೀಡುವುದು)

## ಮೈಸೂರು ನಗರದಲ್ಲಿ ಅಪರಾಧ ಪ್ರಕರಣಗಳ ಹೆಚ್ಚಳದ ಬಗ್ಗೆ

**ಶ್ರೀ ಎಸ್.ನಾಗರಾಜ್ (ಸಂದೇಶ ನಾಗರಾಜ್) (ನಾಮನಿರ್ದೇಶನ ಹೊಂದಿದವರು) :–**

೧೩೨೮ (೧೫೨೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ನಗರದಲ್ಲಿ ಕಳೆದ ಆರು ತಿಂಗಳಲ್ಲಿ ವರದಿಯಾಗಿರುವ ವಿವಿಧ ಅಪರಾಧ ಪ್ರಕರಣಗಳ ಸಂಖ್ಯೆ ಎಷ್ಟು; (ವಿವರ ಒದಗಿಸುವುದು)



(ಆ) ಈ ಪ್ರಕರಣಗಳ ಪೈಕಿ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಿ ಅಪರಾಧಿಗಳನ್ನು ಬಂಧಿಸಿ, ಎಫ್.ಐ.ಆರ್ ದಾಖಲಿಸಲಾಗಿದೆ ;

(ಇ) ಇತ್ತೀಚಿಗೆ ಮೈಸೂರು ನಗರದಲ್ಲಿ ಅಪರಾಧ ಪ್ರಕರಣಗಳು ಹೆಚ್ಚಾಗುತ್ತಿದ್ದು, ಅವುಗಳನ್ನು ತಡೆಗಟ್ಟಿ ಅಪರಾಧಿಗಳನ್ನು ಬಂಧಿಸಲು ಕ್ರಮ ಜರುಗಿಸಲಾಗುವುದೇ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0262/400 ಪ್ರತಿಗಳು/10–03–2020